VOLUME: 16 | 21 APRIL 2026 | ಮಂಗಳವಾರ | RS: 2 | PAGE: 06 ISSUE: 77 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಬಾಲಿವುಡ್ ಸ್ಟಾರ್ ಜೋಡಿ ದೀಪಿಕಾ ಪಡುಕೋಣೆ ಮತ್ತು ರಣವೀರ್‌ಸಿಂಗ್ ತಮ್ಮ ಫ್ಯಾನ್ಸ್ ಜೊತೆ ಮತ್ತೊಂದು ಗುಡ್ ನ್ಯೂಸ್ ಹಂಚಿಕೊಂಡಿದ್ದಾರೆ. ಎರಡನೇ ಮಗುವಿನ ನಿರೀಕ್ಷೆಯಲ್ಲಿದ್ದೇವೆಂದು ದಂಪತಿ ಘೋಷಿಸಿಕೊಂಡಿದ್ದಾರೆ. ದೀಪಿಕಾ-ರಣವೀರ್ ದಂಪತಿ ತಮ್ಮ ಮಗಳು ದುವಾ, ಪ್ರೆಗ್ನೆನ್ಸಿ ಟೆಸ್ಟ್ ಕಿಟ್ ಹಿಡಿದಿರುವ ಫೋಟೊವನ್ನು ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಹೀಟ್‌ವೇವ್: ರಾಯಚೂರಿನಲ್ಲಿ ಹೈಅಲರ್ಟ್


ರಾಯಚೂರು: ಬಿಸಿಲುನಾಡು ರಾಯಚೂರಿನಲ್ಲಿ ಸೂರ್ಯನ ಪ್ರತಾಪ ದಿನೇದಿನೇ ಮಿತಿಮೀರುತ್ತಿದೆ. ತಾಪಮಾನ 42 ಡಿಗ್ರಿ ದಾಟುತ್ತಿರುವುದರ ನಡುವೆಯೇ ಈಗ ಬಿಸಿಗಾಳಿ ಅಂದರೆ ಹೀಟ್ ವೇವ್ ಜನರ ಜೀವಕ್ಕೆ ಆಪತ್ತನ್ನು ತಂದೊಡ್ಡುತ್ತಿದೆ. ಬಿಸಿಗಾಳಿಯ ಹೊಡೆತಕ್ಕೆ ಜನರು 'ಹೀಟ್ ಸ್ಟ್ರೋಕ್'ಗೆ ಒಳಗಾಗುವ ಸಾಧ್ಯತೆ ಹೆಚ್ಚಿರುವುದರಿಂದ ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆ ಜಿಲ್ಲೆಯಾದ್ಯಂತ ಹೈ ಅಲರ್ಟ್ ಘೋಷಿಸಿದೆ.

ಪರಿಸ್ಥಿತಿಯನ್ನು ಎದುರಿಸಲು ರಿಮ್ಸ್ ಆಸ್ಪತ್ರೆಯಲ್ಲಿ ವಿಶೇಷ ವಾರ್ಡ್ ಕೂಡ ತೆರೆಯಲಾಗಿದೆ.

ಗಡಿ ಜಿಲ್ಲೆ ರಾಯಚೂರನ್ನು ಬಿಸಿಲು ನಾಡು ಎಂದು ಕರೆಯಲಾಗುತ್ತದೆ. ಪ್ರತಿ ವರ್ಷ ರಾಯಚೂರಿನಲ್ಲಿ ತಾಪಮಾನ ಹೆಚ್ಚಾಗಿ, ಜನರನ್ನ ಕುಗ್ಗಿಸುತ್ತಿದೆ. ಪ್ರತಿ ಏಪ್ರಿಲ್, ಮೇ ತಿಂಗಳಲ್ಲಿ ರಾಯಚೂರಿನ ಜನ ಅಕ್ಷರಶಃ ಬಿಸಿಲ ಬೇಗೆಗೆ ನಲುಗಿ ಹೋಗುತ್ತಾರೆ. ಅದೇ ರೀತಿ ಈ ಬಾರಿಯೂ ಜಿಲ್ಲೆಯಲ್ಲಿ ತಾಪಮಾನ 42 ಡಿಗ್ರಿಯಷ್ಟು ದಾಖಲಾಗುತ್ತಿದೆ.

ಆದರೆ ಈ ಬಾರೀ ಅತೀ ಹೆಚ್ಚು ಬಿಸಿಗಾಳಿ ಕೂಡ ಅಬ್ಬರಿಸುತ್ತಿದೆ. ಇದು ತಾಪಮಾನದ ಹೊಡೆತಕ್ಕಿಂತ ಹೆಚ್ಚು ಭಯಾನಕವಾಗಿದೆ. ಇದೇ ಕಾರಣಕ್ಕೆ ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆ ಹೈ ಅಲರ್ಟ್ ಘೋಷಿಸಿದ್ದು, ಸಾರ್ವಜನಿಕರು ಎಚ್ಚರದಿಂದಿರಲು ಸೂಚಿಸಿದೆ.

ಹೀಟ್ ವೇವ್ ಹೆಚ್ಚಾಗುತ್ತಿರುವುದರಿಂದ ಜನರು ಹೈರಾಣಾಗುವಂತೆ ಮಾಡುತ್ತಿದೆ. ಬಿಸಿಲ ಬೇಗೆಗಿಂತಲೂ ಬಿಸಿಗಾಳಿ ಜನರನ್ನ ಕುಗ್ಗಿಸುತ್ತಿದೆ. ಮಧ್ಯಾಹ್ನದ ವೇಳೆ ಹೊರಗಡೆ ಓಡಾಡದಂತೆ ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆ ಸಾರ್ವಜನಿಕರಿಗೆ ಎಚ್ಚರಿಕೆ ನೀಡಲಾಗಿದೆ. ಬಿಸಿಗಾಳಿಯಿಂದ ಹೀಟ್ ಸ್ಟ್ರೋಕ್ ಆಗುವ ಸಾಧ್ಯತೆ ಇರತ್ತೆ. ಓರ್ವ ವ್ಯಕ್ತಿಗೆ ಬಿಸಿಲಿನಿಂದ ಹೀಟ್



ಸ್ಟ್ರೋಕ್ ಆದರೆ ಪ್ರಾಣಾಪಾಯ ಸಾಧ್ಯತೆ ಕೂಡ ಇರತ್ತೆ.

ಮೆದುಳಿನ ಮೇಲೆ ತೀರಾ ಗಂಭೀರ ಸಮಸ್ಯೆಯನ್ನು ಉಂಟುಮಾಡತ್ತೆ. ಹೀಗಾಗಿ ರಾಯಚೂರಿನ ರಿಮ್ಸ್ ಆಸ್ಪತ್ರೆಯಲ್ಲಿ ಹೀಟ್ ಸ್ಟ್ರೋಕ್ ವಾರ್ಡ್ ಸಿದ್ಧಪಡಿಸಲಾಗಿದೆ. ಹೀಟ್ ಸ್ಟ್ರೋಕ್ ವಾರ್ಡ್ ಅನ್ನ ಪ್ರತ್ಯೇಕವಾಗಿರಿಸಿ,

**ಮೆದುಳಿನ ಮೇಲೆ ತೀರಾ ಗಂಭೀರ ಸಮಸ್ಯೆಯನ್ನು ಉಂಟುಮಾಡತ್ತೆ. ಹೀಗಾಗಿ ರಾಯಚೂರಿನ ರಿಮ್ಸ್ ಆಸ್ಪತ್ರೆಯಲ್ಲಿ ಹೀಟ್ ಸ್ಟ್ರೋಕ್ ವಾರ್ಡ್ ಸಿದ್ಧಪಡಿಸಲಾಗಿದೆ. ಹೀಟ್ ಸ್ಟ್ರೋಕ್ ವಾರ್ಡ್ ಅನ್ನ ಪ್ರತ್ಯೇಕವಾಗಿರಿಸಿ, ಬಿಸಿಲಿನ ಹೊಡೆತದ ಪರಿಣಾಮದಿಂದಾಗಿ ತೀರಾ ಆರೋಗ್ಯ ಸಮಸ್ಯೆ ಎದುರಿಸುವವರು ಹಾಗೂ ಹೀಟ್ ಸ್ಟ್ರೋಕ್‌ಗೆ ಒಳಗಾಗಿರುವವರಿಗಾಗಿಯೇ ಹೀಟ್ ಸ್ಟ್ರೋಕ್ ವಾರ್ಡ್ ಸಿದ್ಧಡಿಸಲಾಗಿದೆ.**

ಬಿಸಿಲಿನ ಹೊಡೆತದ ಪರಿಣಾಮದಿಂದಾಗಿ ತೀರಾ ಆರೋಗ್ಯ ಸಮಸ್ಯೆ ಎದುರಿಸುವವರು ಹಾಗೂ ಹೀಟ್ ಸ್ಟ್ರೋಕ್ ಗೆ ಒಳಗಾಗಿರುವವರಿಗಾಗಿಯೇ ಹೀಟ್ ಸ್ಟ್ರೋಕ್ ವಾರ್ಡ್ ಸಿದ್ಧಡಿಸಲಾಗಿದೆ. ಐದು ಹೈಟೆಕ್ ಬೆಡ್‌ಗಳನ್ನೊಳಗೊಂಡ ಹೀಟ್ ಸ್ಟ್ರೋಕ್ ವಾರ್ಡ್‌ನಲ್ಲಿ ವೆಂಟಿಲೇಟರ್ ಸೇರಿ ಅತ್ಯಾಧುನಿಕ ತಂತ್ರಜ್ಞಾನವುಳ್ಳ ಯಂತ್ರಗಳನ್ನ ಸಿದ್ಧಪಡಿಸಲಾಗಿದೆ.

ಬಿಸಿಗಾಳಿ ಹೊಡೆತಕ್ಕೆ ಮನುಷ್ಯರ ಮೇಲೆ ಹೀಟ್ ಸ್ಟ್ರೋಕ್ ಆಗುವ ಸಾಧ್ಯತೆ ಇರತ್ತೆ. ಇದು ತೀರಾ ಗಂಭೀರ ಸಮಸ್ಯೆಯನ್ನುಂಟು ಮಾಡತ್ತೆ.

ಕೆಲವೊಮ್ಮೆ ಜೀವಕ್ಕೆ ಕುತ್ತುತರುವ ಸಾಧ್ಯತೆಯೂ ಇರತ್ತೆ. ಬಿಸಿಲಿನಿಂದ ನಿರ್ಜಲೀಕರಣದ ಜೊತೆಗೆ ಹೀಟ್ ಸ್ಟ್ರೋಕ್ ಸಂಭವಿಸುವ ಸಾಧ್ಯತೆ ಇದ್ದು, ಸಾರ್ವಜನಿಕರು ಎಚ್ಚರದಿಂದಿರಬೇಕು ಅಂತ ತಜ್ಞರು ತಿಳಿಸಿದ್ದಾರೆ.

## ಮಹಿಳಾ ಪೊಲೀಸ್ ಅಧಿಕಾರಿ ಮೇಲೆ ಎಫ್‌ಐಆರ್ ದಾಖಲಿಸುವಂತೆ ಆದೇಶ

ಬೆಂಗಳೂರು: ರಸ್ತೆಯಲ್ಲಿ ಹಲ್ಲೆ (ರೋಡ್ ರೇಜ್) ಪ್ರಕರಣದ ಸಂಬಂಧ ದೂರು ನೀಡಲು ತೆರಳಿದ್ದ ಮಹಿಳಾ ವಕೀಲೆ ಠಾಣೆಯಲ್ಲಿ ದಾಂದಲೆ ಎಬ್ಬಿಸಿದ್ದಾರೆ ಎಂದು ಬೂಟಿನ ಕಾಲಿನಲ್ಲಿ ಒದ್ದ ಮಹಿಳಾ ಪೊಲೀಸ್ ಅಧಿಕಾರಿಯ ವಿರುದ್ಧ ಪ್ರಕರಣ ದಾಖಲಿಸಲು ಹೈಕೋರ್ಟ್ ಈಚೆಗೆ ಆದೇಶಿಸಿದೆ.

ಬೆಂಗಳೂರಿನ ನಬೋನಿತಾ ಸೇನ್ ಅವರು ತಮ್ಮ ವಿರುದ್ಧ ಮೈಕೊ ಲೇಔಟ್ ಠಾಣೆಯಲ್ಲಿ ತಮ್ಮ ವಿರುದ್ಧ ದಾಖಲಾಗಿರುವ ಪ್ರಕರಣ ರದ್ದುಪಡಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ನಡೆಸಿತು.

"ಟೇಬಲ್ ಮೇಲಿನ ಕೆಲವು ದಾಖಲೆಗಳನ್ನು ಅರ್ಜಿದಾರೆ ಎಳೆದು ಬಿಸಾಡಿದರು ಎಂಬ ಕಾರಣಕ್ಕೆ ಪದ್ಮಾವತಿ ಅವರು ಸಕಾರಣವಿಲ್ಲದೇ ಬೂಟಿನ ಕಾಲಿನಲ್ಲಿ ಒದ್ದಿದ್ದಾರೆ ಎಂಬುದು ಠಾಣೆಯ ಸಿಸಿಟಿವಿ ದೃಶ್ಯಾವಳಿಯಿಂದ ಖಾತರಿಯಾಗಿದೆ. ಅದರೂ ಪದ್ಮಾವತಿ ವಿರುದ್ಧ ಪ್ರಕರಣ ದಾಖಲಾಗಿಲ್ಲ. ಹೀಗಾಗಿ, ಇಂಥ ಕೃತ್ಯ ಎಸಗಿದ ಅಧಿಕಾರಿಗೆ ಇಲಾಖಾ ವಿಚಾರಣೆಯ ಮೂಲಕ ಎಚ್ಚರಿಕೆ ನೀಡುವುದಲ್ಲ, ಅವರ ವಿರುದ್ಧ ಪ್ರಕರಣ ದಾಖಲಿಸಿ, ತನಿಖೆ ನಡೆಸಬೇಕು" ಎಂದು ಆದೇಶಿಸಿದೆ. ಅಲ್ಲದೇ, ವಕೀಲೆಯ ವಿರುದ್ಧದ ಪ್ರಕರಣಕ್ಕೂ ತಡೆ ನೀಡಲು ನಿರಾಕರಿಸಿತು.

ವಕೀಲೆ ಕುರಿತು "ಪೊಲೀಸ್ ಠಾಣೆಯಲ್ಲಿ ದಾಂಧಲೆ ಸೃಷ್ಟಿಸಿದ್ದು ಯಾಕೆ? ಠಾಣೆಯ ಕಾಗದಗಳನ್ನು ಬಿಸಾಡಿರುವುದು ಏಕೆ? ಪ್ರಕರಣ ದಾಖಲಿಸಿದ್ದು, ವಿಳಂಬವಾಯಿತು ಎಂದು ಹೀಗೆಲ್ಲಾ ಮಾಡಬಹುದೇ? ನಿಮಗೆ ಬೂಟಿನ ಕಾಲಿನಲ್ಲಿ ಒದ್ದ ಮಹಿಳಾ ಪೊಲೀಸ್ ಅಧಿಕಾರಿಯ ವಿರುದ್ಧ ಪ್ರಕರಣ ದಾಖಲಿಸಲು ಆದೇಶಿಸಲಾಗುವುದು. ವಕೀಲೆಯಾಗಿದ್ದು ಕೊಂಡು ನೀವು ನಡೆದುಕೊಂಡಿರುವ ರೀತಿಯೂ ಸರಿಯಿಲ್ಲ. ಪೊಲೀಸ್ ಅಧಿಕಾರಿಯಾಗಿ ಅವರು ನಡೆದುಕೊಂಡಿರುವುದೂ ಸರಿಯಿಲ್ಲ. ಹೀಗಾಗಿ, ನಿಮ್ಮ ವಿರುದ್ಧದ ಪ್ರಕರಣವೂ ಮುಂದುವರಿಯಲಿದೆ" ಎಂದಿತು.



**ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಶ್ರೀ ಬಸವ ಜಯಂತಿ ಪ್ರಯುಕ್ತ ಸೋಮವಾರ ಬೆಳಗ್ಗೆ ಸಂಸತ್ ಭವನದ ಆವರಣದಲ್ಲಿರುವ ಪ್ರೇರಣಾ ಸ್ಥಳದಲ್ಲಿ ಶ್ರೀ ಜಗಜ್ಯೋತಿ ಬಸವೇಶ್ವರರಿಗೆ ಕೇಂದ್ರ ಸರ್ಕಾರದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಕಿರಣ್ ರಿಜಿಜು ಹಾಗೂ ಕೇಂದ್ರ ಸರ್ಕಾರದ ರೈಲ್ವೆ ಜಲಶಕ್ತಿ ಖಾತೆಗಳ ರಾಜ್ಯ ಸಚಿವ ವಿ.ಸೋಮಣ್ಣ ಅವರೊಂದಿಗೆ ಪುಷ್ಪ ನಮನ ಅರ್ಪಿಸಿದರು.**

## ಬನ್ನೇರುಘಟ್ಟ ರಸ್ತೆ ದುರಸ್ಥಿ ಕಾರ್ಯ ಪ್ರಾರಂಭ

ಬೆಂಗಳೂರು: ನಗರದ ಪ್ರಮುಖ ಸಂಪರ್ಕ ರಸ್ತೆಗಳಲ್ಲಿ ಒಂದಾದ ಬನ್ನೇರಘಟ್ಟ ರಸ್ತೆಯು ಬಿಡಬ್ಲ್ಯುಎಸ್‌ಎಸ್‌ಬಿ ವತಿಯಿಂದ ಕೈಗೊಳ್ಳಲಾಗಿದ್ದ ಒಳಚರಂಡಿ ಪೈಪ್‌ಲೈನ್ ಅಳವಡಿಕೆ ಕಾಮಗಾರಿಗಳಿಂದಾಗಿ ತೀವ್ರವಾಗಿ ಹದಗೆಟ್ಟಿತ್ತು.

ಈ ಕಾಮಗಾರಿಯಿಂದ ರಸ್ತೆಯ ಮೇಲ್ಮೈ ಹಾಳಾಗಿ ದಿನನಿತ್ಯ ಸಂಚರಿಸುವ ಸಾವಿರಾರು ವಾಹನ ಸವಾರರು ಮತ್ತು ಸ್ಥಳೀಯ ನಿವಾಸಿಗಳು ತೀವ್ರ ಧೂಳಿನ ಸಮಸ್ಯೆ ಹಾಗೂ ಗುಂಡಿಗಳಿಂದ ಕೂಡಿದ ರಸ್ತೆಯಲ್ಲಿ ಸಂಚರಿಸಲು ಹರಸಾಹಸ ಪಡುವಂತಾಗಿತ್ತು.

ಬನ್ನೇರುಘಟ್ಟ ಮುಖ್ಯರಸ್ತೆಯ



ಅಸ್ತವ್ಯಸ್ಥತೆ ಕುರಿತಂತೆ ಸಾರ್ವಜನಿಕರ ದೂರುಗಳು ಹಾಗೂ ಮಾಧ್ಯಮಗಳ ವರದಿಗಳನ್ನು ಗಂಭೀರವಾಗಿ ಪರಿಗಣಿಸಿದ ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಆಯುಕ್ತರಾದ ಶ್ರೀ ಕೆ ಎನ್ ರಮೇಶ್ ರವರು ತಪಾಸಣೆ ನಡೆಸಿದರು. ಸ್ಥಳದಲ್ಲಿದ್ದ ವಾಸ್ತವ ಪರಿಸ್ಥಿತಿಯನ್ನು ಅವಲೋಕಿಸಿದ ಆಯುಕ್ತರು, ಸಾರ್ವಜನಿಕರ ಸುರಕ್ಷತೆ ಮತ್ತು ಸುಗಮ ಸಂಚಾರವನ್ನು ಗಮನದಲ್ಲಿಟ್ಟುಕೊಂಡು ತಕ್ಷಣವೇ ರಸ್ತೆಯನ್ನು ಡಾಂಬರೀಕರಣಗೊಳಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದರು.

ಆಯುಕ್ತರ ಆದೇಶದ ಮೇರೆಗೆ, ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಕಾರ್ಯಪ್ರವೃತ್ತರಾಗಿ ಕಾಮಗಾರಿಯನ್ನು ಆದ್ಯತೆಯ ಮೇರೆಗೆ ಕೈಗೆತ್ತಿಕೊಂಡು, ಪ್ರಾಥಮಿಕವಾಗಿ ರಸ್ತೆಯ ಒಟ್ಟು 1.5 ಕಿ.ಮೀ ಉದ್ದದ ಅತೀ ಹೆಚ್ಚು ಹಾನಿಗೊಳಗಾದ ಭಾಗದಲ್ಲಿ ದುರಸ್ತಿ ಕಾರ್ಯವನ್ನು ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು.

ಬನ್ನೇರುಘಟ್ಟ ಮುಖ್ಯರಸ್ತೆಯ ಕಲ್ಯಾಣಿ ಚೌಲ್ಟ್ರಿಯಿಂದ ಆರಂಭಗೊಂಡು ಐಐಎಂಬಿ ಮೆಟ್ರೋ ನಿಲ್ದಾಣದವರೆಗಿನ ಸುಮಾರು 1 ಕಿ.ಮೀ ರಸ್ತೆಯ ಡಾಂಬರೀಕರಣದ ಕಾಮಗಾರಿ ನಡೆಸಲಾಗಿದ್ದು, ವಾಹನ ಸವಾರರಿಗೆ ಸಂಚಾರಕ್ಕೆ ಸುಗಮವಾಗಿದೆ.

ಬಾಕಿ ಉಳಿದಿರುವ ರಸ್ತೆಯ ಭಾಗದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದು, ನಾಳೆ ರಾತ್ರಿಯೊಳಗೆ ಸಂಪೂರ್ಣವಾಗಿ ಡಾಂಬರೀಕರಣವನ್ನು ಮುಗಿಸಿ ರಸ್ತೆಯನ್ನು ಸಂಚಾರಕ್ಕೆ ಮುಕ್ತಗೊಳಿಸಲಾಗುವುದು.

ಸಾರ್ವಜನಿಕರ ಹಿತದೃಷ್ಟಿಯಿಂದ ಈ ಡಾಂಬರೀಕರಣ ಕಾಮಗಾರಿಯನ್ನು ತುರ್ತಾಗಿ ಕೈಗೊಂಡಿದ್ದು, ಆದಷ್ಟು ಬೇಗ ಪೂರ್ಣಗೊಳಿಸಲಾಗುವುದು. ಇದರಿಂದ ಬನ್ನೇರುಘಟ್ಟ ಮುಖ್ಯರಸ್ತೆ ಧೂಳು ಮುಕ್ತ ರಸ್ತೆಯಾಗಿ, ಸುಗಮ ವಾಹನ ಸಂಚಾರಕ್ಕೆ ಅವಕಾಶ ದೊರೆಯಲಿದೆ ಎಂದು ತಿಳಿಸಿದರು.

## ಇರಾನ್‌ದಾಳಿಗೆ ನಾವಿಕರು ಬಲಿ..?

ಹಾರ್ಮುಜ್: ಹಾರ್ಮುಜ್ ಜಲಸಂಧಿಯಲ್ಲಿ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಪಡೆಗಳು ಭಾರತದ ಎರಡು ವಾಣಿಜ್ಯ ಹಡಗುಗಳ ಮೇಲೆ ಏಕಾಏಕಿ ಗುಂಡಿನ ದಾಳಿ ನಡೆಸಿದ ಘಟನೆ ಗಂಭೀರ ಆತಂಕಕ್ಕೆ ಕಾರಣವಾಗಿದೆ. ಈ ದಾಳಿಯಲ್ಲಿ ನಾಲ್ವರು ಭಾರತೀಯ ನಾವಿಕರು ಮೃತಪಟ್ಟಿದ್ದು, ಓರ್ವ ನಾವಿಕ ನಾಪತ್ತೆಯಾಗಿದ್ದಾರೆ ಎಂದು ಹೇಳಲಾಗುತ್ತಿದ್ದು ಈ ಬಗ್ಗೆ ಹೆಚ್ಚು ಮಾಹಿತಿ ಲಭಿಸಿಲ್ಲ

ಈ ಬಗ್ಗೆ ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ರಿ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿರುವ ಅವರು, ನಾಪತ್ತೆಯಾಗಿರುವ ನಾವಿಕನಿಗಾಗಿ ಶೋಧ ಕಾರ್ಯಾಚರಣೆ ಮುಂದುವರಿದಿದೆ ಎಂದು ತಿಳಿಸಿದ್ದಾರೆ.

ದಾಳಿ 'ಜಾಗರ್ನವ್' ಮತ್ತು 'ಸನ್ಮಾರ್ ಹೆರಾಲ್ಡ್' ಎಂಬ ಭಾರತೀಯ ಹಡಗುಗಳ ಮೇಲೆ ನಡೆದಿದೆ. ವಿಶೇಷವಾಗಿ ಅಮೆರಿಕಾ ಮತ್ತು ಇರಾನ್ ನಡುವೆ ಕದನ ವಿರಾಮ ಘೋಷಣೆಯಾಗಿ, ಹಾರ್ಮುಜ್ ಜಲಸಂಧಿಯನ್ನು ವಾಣಿಜ್ಯ ಹಡಗುಗಳಿಗೆ ತೆರೆಯಲಾಗುವುದು ಎಂದು ಇರಾನ್ ಘೋಷಿಸಿದ ಕೆಲವೇ ಗಂಟೆಗಳೊಳಗೆ ಈ ಘಟನೆ ನಡೆದಿರುವುದು ಅಚ್ಚರಿಯ ಸಂಗತಿಯಾಗಿದೆ.

ಇರಾನ್‌ನ ವಿದೇಶಾಂಗ ಸಚಿವರು ವಾಣಿಜ್ಯ ಹಡಗುಗಳ ಸಂಚಾರಕ್ಕೆ ಭದ್ರತೆ ಒದಗಿಸುವುದಾಗಿ ಹೇಳಿಕೆ ನೀಡಿದ್ದರೂ, ಭಾರತೀಯ ಧ್ವಜ ಹಾರಿಸುತ್ತಿದ್ದ ಹಡಗುಗಳ ಮೇಲೆ ದಾಳಿ ನಡೆದಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಈ ಹಿನ್ನೆಲೆಯಲ್ಲಿ ಭಾರತ ಸರ್ಕಾರ ಗಂಭೀರವಾಗಿ ಪ್ರತಿಕ್ರಿಯಿಸಿದೆ.

ಭಾರತ ಸರ್ಕಾರ ಇರಾನ್ ರಾಯಭಾರಿಯನ್ನು ಕರೆಸಿ ಅಧಿಕೃತವಾಗಿ ಪ್ರತಿಭಟನೆ ದಾಖಲಿಸಿದ್ದು, ದಾಳಿಯ ನಿಜವಾದ ಉದ್ದೇಶ ಹಾಗೂ ಪರಿಸ್ಥಿತಿಗಳ ಬಗ್ಗೆ ಸ್ಪಷ್ಟನೆ ನೀಡುವಂತೆ ಆಗ್ರಹಿಸಿದೆ. ಜೊತೆಗೆ, ಇಂತಹ ಘಟನೆಗಳು ಮರುಕಳಿಸದಂತೆ ಭದ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಒತ್ತಾಯಿಸಿದೆ.

ಈ ಘಟನೆ ಅಂತರರಾಷ್ಟ್ರೀಯ ಸಾಗಣೆ ಮಾರ್ಗಗಳ ಭದ್ರತೆ ಬಗ್ಗೆ ಹೊಸ ಚಿಂತೆಗಳನ್ನು ಹುಟ್ಟುಹಾಕಿದ್ದು, ಹಾರ್ಮುಜ್ ಜಲಸಂಧಿಯಲ್ಲಿ ಮುಂದಿನ ದಿನಗಳಲ್ಲಿ ಭದ್ರತೆ ಮತ್ತಷ್ಟು ಕಟ್ಟುಪಾಡಾಗುವ ಸಾಧ್ಯತೆ ಇದೆ.

## ಎಲ್‌ಪಿಜಿ ಬಳಕೆ ಶೇ13% ಕುಸಿತ

ನವದೆಹಲಿ: ಮಧ್ಯಪ್ರಾಚ್ಯ ಸಂಘರ್ಷ ಮುಂದುವರಿದಿದ್ದು, ಭಾರತದಲ್ಲಿ ಎಲ್‌ಪಿಜಿ ಬಳಕೆ 13% ರಷ್ಟು ಕುಸಿತ ಕಂಡಿದೆ. ಯುದ್ಧದಿಂದಾಗಿ ಪೂರೈಕೆಯಲ್ಲಿ ಅಡಚಣೆ ಉಂಟಾಗಿರುವುದು ಎಲ್‌ಪಿಜಿ ಬಳಕೆ ತೀವ್ರ ಕುಸಿತಕ್ಕೆ ಕಾರಣವಾಗಿದೆ.

ಭಾರತದಲ್ಲಿ ಮಾರ್ಚ್‌ನಲ್ಲಿ ಎಲ್‌ಪಿಜಿ ಬಳಕೆ ಶೇ.13ರಷ್ಟು ಕುಸಿತವಾಗಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ ಎಲ್‌ಪಿಜಿ 2.729 ದಶಲಕ್ಷ ಟನ್ ಬಳಕೆಯಾಗಿತ್ತು. ಆದರೆ, ಈ ವರ್ಷದ ಮಾರ್ಚ್‌ನಲ್ಲಿ 2.379 ದಶಲಕ್ಷ ಟನ್ ಬಳಕೆಯಾಗಿದೆ.

ಪೆಟ್ರೋಲಿಯಂ ಪ್ಲಾನಿಂಗ್ ಅಂಡ್ ಅನಾಲಿಸಿಸ್ ಸೆಲ್ (ಪಿಪಿಎಸಿ) ದತ್ತಾಂಶಗಳಿಂದ ಮಾಹಿತಿ ಹೊರಬಿದ್ದಿದೆ. ಭಾರತ ತನ್ನ ಒಟ್ಟು ಬೇಡಿಕೆಯ ಎಲ್‌ಪಿಜಿಯಲ್ಲಿ ಶೇ.60 ರಷ್ಟು ಆಮದು ಮಾಡಲಿದೆ.

## 'ಲಿಂಗಾಯತ ಧರ್ಮ ಸಮಾನತೆ ಹಾಗೂ ಮಾನವೀಯತೆಯಿಂದ ಕೂಡಿದೆ'

ಮೈಸೂರು: ಚಲನೆಯಿಲ್ಲದ ಜಾತಿವ್ಯವಸ್ಥೆ ಇರುವವರೆಗೂ ಬಸವಣ್ಣನವರ ತತ್ವಗಳು ಪ್ರಸ್ತುತವಾಗಿರುತ್ತವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಜಿಲ್ಲಾ ಬಸವ ದಳಗಳ ಒಕ್ಕೂಟ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ, "2026ರ ಬಸವಶ್ರೀ" ಪ್ರಶಸ್ತಿ ಪ್ರಧಾನ ಮಾಡಿದರು.

ಬಸವಣ್ಣನವರ ಆದರ್ಶಗಳನ್ನು ಪಾಲಿಸಿದ ಡಾ.ಸಿದ್ಧರಾಮ ಶರಣರು 2025–26ನೇ ಸಾಲಿನ ಬಸವ ಪುರಸ್ಕಾರ ರಾಷ್ಟ್ರೀಯ ಪ್ರಶಸ್ತಿ ಭಾಜನರಾಗಿರುವುದಕ್ಕೆ ಅಭಿನಂದನೆಗಳನ್ನು ಸಲ್ಲಿಸಿದರು. ಬಸವಣ್ಣನವರು ಸಮಾಜದಲ್ಲಿ ಜಾತಿವರ್ಣ ವ್ಯವಸ್ಥೆಗಳ ವಿರುದ್ಧ ಹೋರಾಡಿದರು. ಮೂಢನಂಬಿಕೆಗಳ ವಿರುದ್ಧ ಧ್ವನಿ ಎತ್ತಿ, ಕರ್ಮ ಸಿದ್ಧಾಂತವನ್ನು ಅಲ್ಲಗಳೆದಿದ್ದರು. ಸಾವಿರಾರು ವರ್ಷಗಳಿಂದ ಶೋಷಿತ ವರ್ಗಗಳು ಅಕ್ಷರ ಸಂಸ್ಕೃತಿಯಿಂದ ವಂಚಿತವಾಗಿತ್ತು. ಬಸವಾದಿಶರಣರು ವೈದಿಕ ಧರ್ಮಕ್ಕೆ ಪರ್ಯಾಯವಾಗಿ ಲಿಂಗಾಯತ ಧರ್ಮಕ್ಕೆ ನಾಂದಿ ಹಾಡಿದರು. ವೈದಿಕ ಧರ್ಮದಲ್ಲಿ ಚತುರ್ವರ್ಣ ವ್ಯವಸ್ಥೆಯಿತ್ತು. ಆದ್ದರಿಂದ ಹನ್ನೆರೆಡನೇ ಶತಮಾನದಲ್ಲಿ ಸಮಾನತೆ, ಮಾನವೀಯತೆಯಿಂದ ಕೂಡಿದ ಲಿಂಗಾಯತ ಧರ್ಮವನ್ನು ಸ್ಥಾಪಿಸಲಾಯಿತು ಎಂದರು.

ಸಮಸಮಾಜಕ್ಕೆ ಶ್ರಮಿಸಿದ ಬಸವಾದಿ



ಶರಣರು

ವೈರುಧ್ಯತೆಯ ಸಮಾಜದಲ್ಲಿ ಬದಲಾವಣೆ ತರಲು ಬುದ್ಧಬಸವಾದಿ ಶರಣರು ಶ್ರಮಿಸಿದ್ದರು. ಆದರೂ ಇಂದಿಗೂ ಜಾತಿವ್ಯವಸ್ಥೆ ಪ್ರಚಲಿತವಾಗಿದೆ. ಭಾರತದ ಜಾತಿವ್ಯವಸ್ಥೆಗೆ ಚಲನೆಯಿಲ್ಲ. ಆರ್ಥಿಕ ಸಾಮಾಜಿಕ ಶೈಕ್ಷಣಿಕ ಶಕ್ತಿ ದೊರಕಿದಾಗ ಮಾತ್ರ ಚಲನೆಯಿಲ್ಲದ ಜಾತಿವ್ಯವಸ್ಥೆಯಲ್ಲಿ ಬದಲಾವಣೆ ತರಲು ಸಾಧ್ಯ. 'ಇವನಾರವ ಇವನಾರವ' ಎನ್ನುವ ಬದಲು ಇವ 'ಇವ ನಮ್ಮವ'ಎನ್ನುವ ವ್ಯವಸ್ಥೆ ಬರುವವರೆಗೂ ಬಸವ ವಿಚಾರಗಳು ಪ್ರಸ್ತುತವಾಗಿರುತ್ತವೆ.

ಬಸವಣ್ಣನವರು ಕಾಯಕ ಮತ್ತು ದಾಸೋಹ ತತ್ವವನ್ನು ವಿಶ್ವಕ್ಕೆ ಪರಿಚಯಿಸಿ, ಎಲ್ಲಾ ವೃತ್ತಿಗಳೂ ಘನತೆಯುಳ್ಳದ್ದು ಎಂದಿದ್ದರು. ಉತ್ಪಾದನೆಯಾದ ಸಂಪತ್ತನ್ನು ಸಮಾನವಾಗಿ ಹಂಚಿಕೊಳ್ಳುವುದೇ ಕಾಯಕ ಮತ್ತು ದಾಸೋಹದ ಮೂಲಮಂತ್ರ. ಡಾ.ಬಿ.ಆರ್. ಅಂಬೇಡ್ಕರ್ ರವರು ಸಂವಿಧಾನ ಜಾರಿಗೆ ಬರುವ ಮುಂಚೆ ಮನುಶಾಸ್ತ್ರ ಜಾರಿಯಲ್ಲಿತ್ತು. ಆದ್ದರಿಂದ ಅವರು'ಹಿಂದು ಧರ್ಮವನ್ನು ಸುಧಾರಿಸಲು ಸಾಧ್ಯವಾಗಲಿಲ್ಲ' ವೆಂದು ಮನುಶಾಸ್ತ್ರವನ್ನು ಸುಡುತ್ತೇನೆ ಎಂದಿದ್ದರು. ಅಸಮಾನತೆಯ ಸಮಾಜದಲ್ಲಿ ಬದಲಾವಣೆ ತರಲು ಪ್ರತಿಯೊಬ್ಬರಿಗೂ ಆರ್ಥಿಕ ಸಾಮಾಜಿಕ ಶೈಕ್ಷಣಿಕ ಸ್ವಾತಂತ್ರ್ಯ ಅಗತ್ಯ ವೆಂದು ತಿಳಿಸಿದ್ದರು. ಸಮಾಜದ ಅಶಕ್ತರ ಮೇಲೆ ನಡೆದ ಅನ್ಯಾಯಗಳ ಇತಿಹಾಸದ ಬಗ್ಗೆ ಅರಿವಿಲ್ಲದವರು ಇತಿಹಾಸವನ್ನು ನಿರ್ಮಿಸಲು ಸಾಧ್ಯವಿಲ್ಲವೆಂದರು.

ಸಮಾಜದಲ್ಲಿ ಅಸಮಾನತೆಯನ್ನು ನಿರಂತರಗೊಳಿಸಲು ಪಟ್ಟಭದ್ರಹಿತಾಸಕ್ತಿಗಳು ಪ್ರಯತ್ನಿಸುತ್ತಿವೆ. ಜಾತಿವ್ಯವಸ್ಥೆ ನಿರ್ಮೂಲನೆಗೆ ವೈಚಾರಿಕ ವೈಜ್ಞಾನಿಕ ಶಿಕ್ಷಣ ಅಗತ್ಯ. ಆದ್ದರಿಂದ ಯುವಜನತೆ ಮೂಢನಂಬಿಕೆಗಳಿಗೆ ಬಲಿಯಾಗಬಾರದು. ಮನುವಾದಿಗಳು ಮೂಢನಂಬಿಕೆಗಳನ್ನು ಬೆಳೆಸುತ್ತಾರೆ ಎಂದರು.

ಬಸವ ಭವನಕ್ಕೆ ಐದು ಕೋಟಿ ರೂ.ಗಳ ಅನುದಾನ ನೀಡುವುದಾಗಿ ಮುಖ್ಯಮಂತ್ರಿಗಳು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು. ಸಮಾಜದಲ್ಲಿ ಪ್ರತಿಯೊಬ್ಬರಿಗೂ ಆರ್ಥಿಕ ಮತ್ತು ಸಾಮಾಜಿಕ ಶಕ್ತಿ ದೊರೆಯಬೇಕು ಎಂಬ ಉದ್ದೇಶದಿಂದ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಾಯಿತು. ಇದನ್ನೇ ಬಸವ, ಬುದ್ಧ, ಅಂಬೇಡ್ಕರ್ ಹೇಳಿದ್ದು ಎಂದರು. ಬಸವಣ್ಣಪಥದಲ್ಲಿ ನಡೆಯುವ ಪ್ರಾಮಾಣಿಕ ಪ್ರಯತ್ನ ಮಾಡುವ ಬಗ್ಗೆ ಶಪಥ ಮಾಡಬೇಕು. ನಮ್ಮ ಸರ್ಕಾರ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣನವರ ಫೋಟೋಗಳನ್ನು ಕಡ್ಡಾಯ ಮಾಡಿದ್ದಲ್ಲದೆ ಅವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದ್ದೇವೆ. ಬಸವಣ್ಣನವರ ಕರ್ಮ ಭೂಮಿ ಅನುಭವ ಮಂಟಪದ ಪುನ: ಸ್ಥಾಪನೆಗೆ ಗೋ.ರು. ಚನ್ನಬಸಪ್ಪನವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ, ಅದರ ವರದಿಯನ್ವಯ ಅನುದಾನ ನೀಡಲಾಗಿದೆ. ಈ ವರ್ಷದ ಕೊನೆಯಲ್ಲಿ ಪೂರ್ಣಗೊಳ್ಳುವ ಬಗ್ಗೆ ಭರವಸೆಯಿದೆ ಎಂದರು.

ಬಸವಣ್ಣನವರ ವಿಚಾರಗಳನ್ನು ನಮ್ಮ ಸರ್ಕಾರ ಅನುಸರಿಸುತ್ತಿದೆ. ನಮ್ಮ ಸರ್ಕಾರ ಬುದ್ಧ, ಬಸವ, ಅಂಬೇಡ್ಕರ್ ಕಂಡ ಕನಸಿನ ಸಮಾಜ ನಿರ್ಮಾಣ ಮಾಡುವ ಉದ್ದೇಶವನ್ನು ಹೊಂದಿದೆ ಎಂದರು.

ಗ್ಯಾರಂಟಿ ಯೋಜನೆಗಳು ಎಲ್ಲಾ ಧರ್ಮದವರಿಗೆ ತಲುಪುತ್ತಿದೆ. ಚಲನರಹಿತ ಜಾತಿ ವ್ಯವಸ್ಥೆಯಲ್ಲಿ ಆರ್ಥಿಕ, ಸಾಮಾಜಿಕ ಶಕ್ತಿ ದೊರೆತರೆ ಮಾತ್ರ ಚಾಲನೆ ದೊರೆಯುತ್ತದೆ ಎಂದರು. ಎಲ್ಲಾ ಧರ್ಮಗಳೂ ಮತ್ತೊಬ್ಬರನ್ನು ದ್ವೇಷಿಸಿ ಎಂದು ಹೇಳುವುದಿಲ್ಲ. ಎಲ್ಲರೂ ಪರಸ್ಪರ ಪ್ರೀತಿಸಬೇಕು ಹಾಗೂ ಮನುಷ್ಯರಾಗುವ ಪ್ರಯತ್ನ ಮಾಡಬೇಕು, ಬಸವಣ್ಣವನರೂ ಇದನ್ನೇ ಪ್ರತಿಪಾದಿಸಿದ್ದರು ಎಂದರು. ಸರಳವಾಗಿ ಕನ್ನಡದಲ್ಲಿಯೇ ವಚನಗಳನ್ನು ರಚಿಸಿ ಜನಸಾಮಾನ್ಯರಿಗೆ ತಲುಪುವಂತೆ ಮಾಡಿದ್ದಾರೆ ಎಂದರು.

**ಬಸವಣ್ಣನವರು ಕಾಯಕ ಮತ್ತು ದಾಸೋಹ ತತ್ವವನ್ನು ವಿಶ್ವಕ್ಕೆ ಪರಿಚಯಿಸಿ, ಎಲ್ಲಾ ವೃತ್ತಿಗಳೂ ಘನತೆಯುಳ್ಳದ್ದು ಎಂದಿದ್ದರು. ಉತ್ಪಾದನೆಯಾದ ಸಂಪತ್ತನ್ನು ಸಮಾನವಾಗಿ ಹಂಚಿಕೊಳ್ಳುವುದೇ ಕಾಯಕ ಮತ್ತು ದಾಸೋಹದ ಮೂಲಮಂತ್ರ. ಡಾ.ಬಿ.ಆರ್.ಅಂಬೇಡ್ಕರ್ ರವರು ಸಂವಿಧಾನ ಜಾರಿಗೆ ಬರುವ ಮುಂಚೆ ಮನುಶಾಸ್ತ್ರ ಜಾರಿಯಲ್ಲಿತ್ತು. ಆದ್ದರಿಂದ ಅವರು'ಹಿಂದು ಧರ್ಮವನ್ನು ಸುಧಾರಿಸಲು ಸಾಧ್ಯವಾಗಲಿಲ್ಲ' ವೆಂದು ಮನುಶಾಸ್ತ್ರವನ್ನು ಸುಡುತ್ತೇನೆ ಎಂದಿದ್ದರು. ಅಸಮಾನತೆಯ ಸಮಾಜದಲ್ಲಿ ಬದಲಾವಣೆ ತರಲು ಪ್ರತಿಯೊಬ್ಬರಿಗೂ ಆರ್ಥಿಕ ಸಾಮಾಜಿಕ ಶೈಕ್ಷಣಿಕ ಸ್ವಾತಂತ್ರ್ಯ ಅಗತ್ಯ ವೆಂದು ತಿಳಿಸಿದ್ದರು. ಸಮಾಜದ ಅಶಕ್ತರ ಮೇಲೆ ನಡೆದ ಅನ್ಯಾಯಗಳ ಇತಿಹಾಸದ ಬಗ್ಗೆ ಅರಿವಿಲ್ಲದವರು ಇತಿಹಾಸವನ್ನು ನಿರ್ಮಿಸಲು ಸಾಧ್ಯವಿಲ್ಲವೆಂದರು.**

ಭಾರತ ಸಾರಥಿ
21/04/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಜನಗಣತಿ ಕಾರ್ಯ: ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಲು ಅಧಿಕಾರಿಗಳಿಗೆ ಮನವಿ

ಚಿಂತಾಮಣಿ

ಮುಂಬರುವ 2027ರ ಭಾರತ ಜನಗಣತಿ ಕಾರ್ಯಕ್ಕೆ ನಿಯೋಜನೆಗೊಂಡಿರುವ ಶಿಕ್ಷಕರು ಎದುರಿಸುತ್ತಿರುವ ವಿವಿಧ ತಾಂತ್ರಿಕ ಮತ್ತು ವೈಯಕ್ತಿಕ ಸಮಸ್ಯೆಗಳನ್ನು ಶೀಘ್ರವಾಗಿ ಬಗೆಹರಿಸಬೇಕು ಎಂದು ಕೋರಿ ತಾಲ್ಲೂಕು ಆಡಳಿತದ ವಿವಿಧ ಅಧಿಕಾರಿಗಳಿಗೆ ಸರ್ಕಾರಿ ನೌಕರರ ಸಂಘದ ವತಿಯಿಂದ ಮನವಿ ಸಲ್ಲಿಸಲಾಯಿತು.



ನೌಕರರ ಸಂಘದ ಅಧ್ಯಕ್ಷ ಆರ್. ಅಶೋಕ್ ಕುಮಾರ್ ನೇತೃತ್ವದಲ್ಲಿ ತಹಶೀಲ್ದಾರ್ ಸುದರ್ಶನ್ ಯಾದವ್, ತಾ.ಪಂ. ಇಓ ಆನಂದ್, ಬಿಇಓ ತನುಜಾ ಹಾಗೂ ಪೌರಾಯುಕ್ತ ಜಿ.ಎನ್. ಚಲಪತಿ ಅವರಿಗೆ ಮನವಿ ಸಲ್ಲಿಸಿ, ಗಣತಿ ಕಾರ್ಯದ ಸವಾಲುಗಳ ಬಗ್ಗೆ ಸುದೀರ್ಘ ಚರ್ಚೆ ನಡೆಸಲಾಯಿತು.

**ಸಮಸ್ಯೆಗಳತ್ತ ಗಮನ ಸೆಳೆದ ಪದಾಧಿಕಾರಿಗಳು:**

ಗಣತಿದಾರರು ಮತ್ತು ಮೇಲ್ವಿಚಾರಕರಿಗೆ ಎದುರಾಗುತ್ತಿರುವ ಪ್ರಮುಖ ಸಮಸ್ಯೆಗಳನ್ನು ಅಧಿಕಾರಿಗಳ ಮುಂದೆ ಮಂಡಿಸಲಾಯಿತು.

**ತಾಂತ್ರಿಕ ಅಡೆತಡೆಗಳು:** ಗಣತಿ ಕಾರ್ಯಕ್ಕೆ ಬಳಸುವ ತಂತ್ರಾಂಶ ಮತ್ತು ಸಲಕರಣೆಗಳ ಕೊರತೆ ನೀಗಿಸಬೇಕು.

**ಗಡಿ ಗೊಂದಲ:** ಗಣತಿ ಬ್ಲಾಕ್‌ಗಳ ಗಡಿ ನಿರ್ಧಾರದಲ್ಲಿರುವ ಗೊಂದಲಗಳನ್ನು ತಕ್ಷಣ ಸರಿಪಡಿಸಬೇಕು.

**ಆರೋಗ್ಯಕ್ಕೆ ಆದ್ಯತೆ:** 55 ವರ್ಷ ಮೇಲ್ಪಟ್ಟವರು, ನಿವೃತ್ತಿಯ ಅಂಚಿನಲ್ಲಿರುವವರು ಹಾಗೂ ಗಂಭೀರ ಆರೋಗ್ಯ ಸಮಸ್ಯೆವುಳ್ಳ ಶಿಕ್ಷಕರನ್ನು ಗಣತಿ ಕಾರ್ಯದಿಂದ ಹೊರಗಿಡಬೇಕು.

**ಬದಲಿ ವ್ಯವಸ್ಥೆ:** ಚಿಕ್ಕ ಮಕ್ಕಳ ಪೋಷಣೆಯಲ್ಲಿರುವ ನೌಕರರ ಸ್ಥಿತಿಯನ್ನು ಪರಿಗಣಿಸಬೇಕು ಹಾಗೂ ಕೆಲಸದ ವೇಳೆ ಅನಾರೋಗ್ಯ ಉಂಟಾದಲ್ಲಿ ತಕ್ಷಣವೇ ಬದಲಿ ನೌಕರರನ್ನು ನೇಮಿಸಬೇಕು.

**ತರಬೇತಿಗೆ ಆಗ್ರಹ:**

ಗಣತಿ ಕಾರ್ಯದ ಬಗ್ಗೆ ಸರಿಯಾದ ತಿಳಿವಳಿಕೆ ಇಲ್ಲದ ನೌಕರರಿಗೆ ಪ್ರತ್ಯೇಕ ಹಾಗೂ ಸೂಕ್ತ ತರಬೇತಿ ನೀಡಬೇಕು ಎಂದು ಸಂಘವು ಒತ್ತಾಯಿಸಿತು. ಮನವಿಗೆ ಸ್ಪಂದಿಸಿದ ಅಧಿಕಾರಿಗಳು, ಗಣತಿ ಕಾರ್ಯವು ಸುಗಮವಾಗಿ ನಡೆಯಲು ನೌಕರರಿಗೆ ಅಗತ್ಯ ಸೌಲಭ್ಯ ಹಾಗೂ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ನೌಕರರ ಸಂಘದ ಕಾರ್ಯದರ್ಶಿ ಎಂ.ಎನ್. ಆಂಜನೇಯಪ್ಪ, ಹಿರಿಯ ಉಪಾಧ್ಯಕ್ಷ ಕೆ. ಶಿವರಾಜ್, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಆರ್. ಮಂಜುನಾಥ್, ಎನ್‌ಪಿಎಸ್ ಅಧ್ಯಕ್ಷ ಎಂ.ಎಸ್. ಮಂಜುನಾಥ್ ಹಾಗೂ ಮುಖಂಡರಾದ ಜಗದೀಶ್, ಸುರೇಶ್, ಮಸ್ತಾನ್ ವಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಲಿಫ್ಟ್‌ನಿಂದ ಇಳಿದು ಪಿಚ್ ಮೇಲೆ ಸವಾರಿ ಮಾಡಲು ಸಜ್ಜು

ಬೆಂಗಳೂರು



ಬ್ರಿಟ್ಜ್ ಸ್ಪೋರ್ಟ್ಸ್ ಮ್ಯಾನೇಜ್ಮೆಂಟ್ ಸಿಪಿಎಲ್ – 26 ಅನ್ನು ಪ್ರಾರಂಭಿಸಿದೆ. ಇದು ನಗರ ಪ್ರತ್ಯೇಕತೆಯನ್ನು ಎದುರಿಸಲು ಮತ್ತು ಅಪಾರ್ಟ್‌ಮೆಂಟ್ ಸಂಕೀರ್ಣಗಳಾದ್ಯಂತ ಸಮುದಾಯವನ್ನು ಪುನರ್ ನಿರ್ಮಿಸಲು ವಿನ್ಯಾಸಗೊಳಿಸಲಾದ ವೃತ್ತಿಪರ–ದರ್ಜೆಯ, ಅಂತರ–ಸಮಾಜ ಬಾಕ್ಸ್ ಕ್ರಿಕೆಟ್ ಲೀಗ್ ಆಗಿದೆ.

ಬ್ರಿಟ್ಜ್ ಸ್ಪೋರ್ಟ್ಸ್ ಮ್ಯಾನೇಜ್ಮೆಂಟ್, ಇಂದು ಕಮ್ಯುನಿಟಿ ಪ್ರೀಮಿಯರ್ ಲೀಗ್ 2026 (ಸಿಪಿಎಲ್ –26) ಅನ್ನು ಘೋಷಿಸಿದೆ. ಇದು ಎರಡು ಆಕ್ಷ ನ್–ಪ್ಯಾಕ್ಡ್ ವಾರಾಂತ್ಯಗಳಾದ ಏಪ್ರಿಲ್ 25–26 ಮತ್ತು ಮೇ 2–3 ಅನ್ನು ನೆರೆಹೊರೆಯ ಕ್ರೀಡೆ, ಪೈಪೋಟಿ ಮತ್ತು ಸಮುದಾಯದ ಹೆಮ್ಮೆಯ ಆಚರಣೆಯಾಗಿ ಪರಿವರ್ತಿಸಲು ಸಿದ್ಧವಾಗಿದೆ. ನೆರೆಹೊರೆಯವರ ಬಗ್ಗೆ ಪರಸ್ಪರರ ಹೆಸರುಗಳನ್ನು ವಿರಳವಾಗಿ ತಿಳಿದಿರುವ ನಗರದಲ್ಲಿ, ಕ್ರೀಡೆಯು ವೇಗದ ಸೇತುವೆಯಾಗಿದೆ. ಈ ಟೂರ್ನಿಯು ಸಂಪೂರ್ಣ ವೃತ್ತಿಪರ ಅನುಭವವನ್ನು ನೀಡುತ್ತದೆ. ಸಮುದಾಯ ಮಟ್ಟದಲ್ಲಿ ಡಿಆರ್‌ಎಸ್ (ನಿರ್ಧಾರ ಪರಿಶೀಲನಾ ವ್ಯವಸ್ಥೆ), ಐಸಿಸಿ–ಹೊಂದಾಣಿಕೆಯ ನಿಯಮಗಳು, ಲೈವ್ ಅಂಪೈರಿಂಗ್ ಮತ್ತು 1 ಲಕ್ಷ ರೂ.ಬಹುಮಾನದ ಸಂಗ್ರಹದೊಂದಿಗೆ ಪೂರ್ಣಗೊಳ್ಳುತ್ತದೆ.

ಕ್ರಿಕೆಟ್ ಆಟದಲ್ಲಿ ಬಹಳಷ್ಟು ಸಂಭವಿಸಬಹುದು ಎಂದು ಬ್ರಿಟ್ಜ್ ಸ್ಪೋರ್ಟ್ಸ್ ಮ್ಯಾನೇಜ್ಮೆಂಟ್ ಸಂಸ್ಥಾಪಕ ವರುಣ್ ಕಾರಟ್ ಹೇಳಿದ್ದಾರೆ.

"ನಾವು ಕೇವಲ ಪಂದ್ಯಗಳನ್ನು ಆಯೋಜಿಸುತ್ತಿಲ್ಲ. ನಾವು ಕಾರ್ಯನಿರತ ವೃತ್ತಿಪರರು ಮತ್ತು ಕುಟುಂಬಗಳಿಗೆ ಮತ್ತೆ ಆಡಲು ಅನುಮತಿ ನೀಡುತ್ತಿದ್ದೇವೆ ಮತ್ತು ಹಾಗೆ ಮಾಡುವ ಮೂಲಕ, ಬಿಗಿಯಾದ ಮತ್ತು ಹೆಚ್ಚು ಸಂಪರ್ಕಿತ ಬೆಂಗಳೂರಿನನ್ನು ನಿರ್ಮಿಸುತ್ತಿದ್ದೇವೆ," ಎಂದು ಹೇಳಿದರು.

# ನೂತನ ವಿಶ್ರಾಂತಿ ಗೃಹ ಹಾಗೂ ನೈರ್ಮಲ್ಯ ಸಂಕೀರ್ಣ ಲೋಕಾರ್ಪಣೆ

ಚಿತ್ರದುರ್ಗ

ನಾಗರಿಕ ಆಡಳಿತಕ್ಕೆ ಸದಾ ಬೆಂಬಲ ನೀಡುತ್ತಾ ಬಂದಿರುವ ವೇದಾಂತ ಐಓಕೆ ಸಂಸ್ಥೆಯು, ತನ್ನ ಸಾಮಾಜಿಕ ಹೊಣೆಗಾರಿಕೆ ಅಡಿಯಲ್ಲಿ ಚಿತ್ರದುರ್ಗದ ಪೊಲೀಸ್ ಪರೇಡ್ ಮೈದಾನದಲ್ಲಿ ಸುಸಜ್ಜಿತ ವಿಶ್ರಾಂತಿ ಗೃಹ ಮತ್ತು ನೈರ್ಮಲ್ಯ ಸಂಕೀರ್ಣವನ್ನು ನಿರ್ಮಿಸಿಕೊಟ್ಟಿದೆ. ಈ ನೂತನ ಸೌಲಭ್ಯವನ್ನು ಭಾನುವಾರ ಜಿಲ್ಲಾ ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು ಲೋಕಾರ್ಪಣೆಗೊಳಿಸಿದರು.

ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳಲ್ಲಿ ಒಂದಾದ 'ಉತ್ತಮ ಆರೋಗ್ಯ ಮತ್ತು ಯೋಗಕ್ಷೇಮ' ಪರಿಕಲ್ಪನೆಯಡಿ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ. ಕರ್ತವ್ಯದ ಅವಧಿಯಲ್ಲಿ ಪೊಲೀಸ್ ಸಿಬ್ಬಂದಿಗೆ ಉತ್ತಮ ನೈರ್ಮಲ್ಯ ವ್ಯವಸ್ಥೆ ಮತ್ತು ಸೌಕರ್ಯವನ್ನು ಒದಗಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.




ಸೌಲಭ್ಯ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಪೊಲೀಸ್ ಅಧೀಕ್ಷಕ ಶ್ರೀ ರಂಜಿತ್ ಕುಮಾರ್ ಬಂಡಾರು ಐಪಿಎಸ್ ಅವರು, "ಪೊಲೀಸ್ ಪರೇಡ್ ಮೈದಾನದ ಮೂಲಸೌಕರ್ಯ ವೃದ್ಧಿಗೆ ವೇದಾಂತ ಐಓಕೆ ಸಂಸ್ಥೆ ನೀಡಿರುವ ಕೊಡುಗೆ ಅಭಿನಂದನೀಯ. ಸಮಾಜದ ಒಟ್ಟಾರೆ ಪ್ರಗತಿಯಲ್ಲಿ ಉದ್ಯಮಗಳ ಪಾತ್ರ ಎಷ್ಟು ದೊಡ್ಡದು ಎಂಬುದಕ್ಕೆ ಈ ಕಾರ್ಯ ಸಾಕ್ಷಿಯಾಗಿದೆ," ಎಂದು ತಿಳಿಸಿದರು.

ವೇದಾಂತ ಐಓಕೆ ಸಂಸ್ಥೆಯ ಸಿಇಓ ಶ್ರೀ ಶ್ರೀಶೈಲ ಗೌಡ ಅವರು ಮಾತನಾಡಿ, "ಸಮಾಜಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸುವ ಪೊಲೀಸ್ ಸಿಬ್ಬಂದಿಗೆ ನೆರವಾಗುವ ಅವಕಾಶ ದೊರಕಿರುವುದು ನಮ್ಮ ಸೌಭಾಗ್ಯ. ಸಮಾಜದ ಸಮಗ್ರ ಅಭಿವೃದ್ಧಿಗಾಗಿ ನಾವು ಸದಾ ಬದ್ಧರಾಗಿದ್ದೇವೆ. ಈ ಹಿಂದೆಯೂ ಗ್ರಾಮ ಪಂಚಾಯಿತಿಗಳು, ಶಾಲೆಗಳು, ಗೋಶಾಲೆಗಳು ಹಾಗೂ ಆರೋಗ್ಯ ಕೇಂದ್ರಗಳಿಗೆ ಮೂಲಸೌಕರ್ಯ ನೆರವು ನೀಡಲಾಗಿದ್ದು, ಮುಂದೆಯೂ ಸಮುದಾಯದ ಏಳಿಗೆಗಾಗಿ ನಮ್ಮ ಸಹಯೋಗ ಮುಂದುವರಿಯಲಿದೆ," ಎಂದರು.

ವೇದಾಂತ ಐಓಕೆ ಸಂಸ್ಥೆಯು ಚಿತ್ರದುರ್ಗ ಜಿಲ್ಲೆಯಲ್ಲಿ ಆರೋಗ್ಯ (ಪ್ರಾಜೆಕ್ಟ್ ಆರೋಗ್ಯ), ಶಿಕ್ಷಣ (ಪ್ರಾಜೆಕ್ಟ್ ವೃದ್ಧಿ) ಮತ್ತು ಮಹಿಳಾ ಸಬಲೀಕರಣ (ಪ್ರಾಜೆಕ್ಟ್ ಜೀವಿಕಾ) ಸೇರಿದಂತೆ ವಿವಿಧ ಸಮಾಜಮುಖಿ ಯೋಜನೆಗಳ ಮೂಲಕ ಗಮನ ಸೆಳೆದಿದೆ.

# 2.02 ರೂ. ಬಿಲಿಯನ್ ರಫ್ತುಗೆ ಒಪ್ಪಂದ

ಬೆಂಗಳೂರು

ಭಾರತದಲ್ಲಿ ಬೆಳೆಯುತ್ತಿರುವ ತಂಬಾಕು ಮತ್ತು ಎಫ್‌ಎಂಸಿಜಿ ರಫ್ತುದಾರರಲ್ಲಿ ಒಂದಾದ ಎಲೈಟ್‌ಕಾನ್ ಇಂಟರ್ನ್ಯಾ ಷನಲ್ ಲಿಮಿಟೆಡ್ ದಕ್ಷಿಣ ಆಫ್ರಿಕಾ ಮೂಲದ ಬೋಜ್ವಾ ಟೊಬ್ಯಾಕೊ (ಪಿಟಿವೈ) ಲಿಮಿಟೆಡ್ ಸಂಸ್ಥೆಯಿಂದ ಸುಮಾರು ರೂ.2.02 ಬಿಲಿಯನ್ (ಯುಎಸ್‌ಡಿ 22.28 ಮಿಲಿಯನ್) ಮೌಲ್ಯದ ದೀರ್ಘಾವಧಿಯ ಪೂರೈಕೆ ಒಪ್ಪಂದವನ್ನು ಪಡೆದುಕೊಂಡಿರುವುದಾಗಿ ಘೋಷಿಸಿದೆ. ಏಪ್ರಿಲ್ 6, 2026ರಿಂದ ಜಾರಿಗೆ ಬರುವ ಈ ಒಪ್ಪಂದಕ್ಕೆ ಏಪ್ರಿಲ್ 14, 2026ರಂದು ಸಹಿ ಹಾಕಲಾಗಿದ್ದು, ಒಂದು ವರ್ಷದ ಲಾಕ್–ಇನ್ ಅವಧಿಯೊಂದಿಗೆ ಒಟ್ಟು ಎರಡು ವರ್ಷಗಳ ಕಾಲ ಜಾರಿಯಲ್ಲಿರಲಿದೆ.

ಈ ದೀರ್ಘಾವಧಿಯ ಪೂರೈಕೆ ಒಪ್ಪಂದವು ಕಂಪನಿಗೆ ನಿರಂತರ ರಫ್ತು ಸ್ಥಿರತೆ ಒದಗಿಸುವುದರೊಂದಿಗೆ, ಅಂತರರಾಷ್ಟ್ರೀಯ ಮಾರುಕಟ್ಟೆಗಳಲ್ಲಿ ಅದರ ಉತ್ಪನ್ನಗಳಿಗೆ ಇರುವ ಬೇಡಿಕೆಯನ್ನು ಸ್ಪಷ್ಟಪಡಿಸುತ್ತದೆ. ಸಾಮಾನ್ಯ ವ್ಯವಹಾರ ಚಟುವಟಿಕೆಯ ಭಾಗವಾಗಿ ದೊರೆತಿರುವ ಈ ಆದೇಶವು ಉತ್ಪಾದನಾ ಸಾಮರ್ಥ್ಯದ ಸಮರ್ಪಕ ಬಳಕೆ ಹಾಗೂ ಕಾರ್ಯಾಚರಣೆಯ ಸಮರ್ಪಕ ಯೋಜನೆಗೆ ಸಹಕಾರಿ ಆಗಲಿದೆ.

ಒಟ್ಟಾರೆ, ಈ ಒಪ್ಪಂದವು ಕಂಪನಿಯ ಭವಿಷ್ಯದ ಬೆಳವಣಿಗೆಗೆ ಪೂರಕವಾಗಿದ್ದು, ಆಫ್ರಿಕಾ ಖಂಡಕ್ಕೆ ಪ್ರವೇಶಿಸಲು ಮಹತ್ವದ ಮೈಲಿಗಲ್ಲಾಗಿ ಪರಿಣಮಿಸಲಿದೆ.

# ಏರ್‌ಇಂಡಿಯಾ ಎಕ್ಸ್‌ಪ್ರೆಸ್ ಪಾಲುದಾರಿಕೆ

ಬೆಂಗಳೂರು

ಟಿಸಿಎಸ್ ವರ್ಲ್ಡ್ 10 ಕೆ ಬೆಂಗಳೂರು 2026 ರಿಂದ ಪ್ರಾರಂಭವಾಗುವ ಎಲ್ಲಾ ಪ್ರೊಕ್ಯಾಮ್ ಅಂತಾರಾಷ್ಟ್ರೀಯ ರೇಸ್ ಗಳಿಗೆ ಏರ್ ಇಂಡಿಯಾ ಎಕ್ಸ್ ಪ್ರೆಸ್ ಅಧಿಕೃತ ವಿಮಾನಯಾನ ಪಾಲುದಾರನಾಗಿ ಸೇರ್ಪಡೆಯಾಗಿದೆ. ಪಾಲುದಾರಿಕೆಯು ಸಂಪೂರ್ಣ ಓಟಗಾರರ ಪ್ರಯಾಣವನ್ನು ಹೆಚ್ಚಿಸುವತ್ತ ಗಮನ ಹರಿಸುತ್ತದೆ – ರೇಸ್ ದಿನವನ್ನು ಮೀರಿ ತಡೆರಹಿತ ಪ್ರಯಾಣದ ಅನುಭವಗಳಿಗೆ ವಿಸ್ತರಿಸುತ್ತದೆ. ಏರ್ ಇಂಡಿಯಾ ಎಕ್ಸ್ ಪ್ರೆಸ್ ಮತ್ತು ಪ್ರೊಕ್ಯಾಮ್ ವಿಶಿಷ್ಟವಾದ 'ರನ್ನರ್ಸ್ ಪಾಸ್ ಪೋರ್ಟ್' ಅನುಭವವನ್ನು ಪರಿಚಯಿಸಿದೆ, ಪ್ರತಿ ರೇಸ್ ಅನ್ನು ಸಂಗ್ರಹಿಸಲು ಯೋಗ್ಯವಾದ ಪ್ರಯಾಣವಾಗಿ ಪರಿವರ್ತಿಸಿದೆ. ರನ್ನರ್ಸ್ ಪಾಸ್ ಪೋರ್ಟ್ ಸಕ್ರಿಯಗೊಳಿಸುವಿಕೆಯ ಮೂಲಕ, ಏರ್ ಇಂಡಿಯಾ ಎಕ್ಸ್ ಪ್ರೆಸ್ ಓಟಗಾರರು ನಗರಗಳು ಮತ್ತು ವರ್ಷಗಳಾದ್ಯಂತ ಕೈಗೊಳ್ಳುವ ಪ್ರಯಾಣವನ್ನು ಎತ್ತಿ ತೋರಿಸುತ್ತದೆ.




ಈ ಉಪಕ್ರಮವು ಭಾಗವಹಿಸುವವರನ್ನು ಶೇ.20 ರಷ್ಟು ವಿಮಾನ ರಿಯಾಯಿತಿಯೊಂದಿಗೆ 'ರನ್ ಬೆಂಗಳೂರು, ಫ್ಲೈ ಎಕ್ಸ್ ಪ್ರೆಸ್'ಗೆ ಪ್ರೋತ್ಸಾಹಿಸುತ್ತದೆ. ಪ್ರತಿಯೊಬ್ಬ ಭಾಗವಹಿಸುವವರು ಎಕ್ಸ್ ಪೋದಲ್ಲಿ ವಿಶೇಷವಾಗಿ ವಿನ್ಯಾಸಗೊಳಿಸಲಾದ ಪಾಸ್ ಪೋರ್ಟ್ ಅನ್ನು ಪಡೆಯುತ್ತಾರೆ. ಇದು ಚಾಲನೆಯಲ್ಲಿರುವ ಋತುವಿನಲ್ಲಿ ವೈಯಕ್ತಿಕ ಕೀಪ್ ಸೇಕ್ ಆಗಿ ರೂಪಾಂತರಗೊಳ್ಳುತ್ತದೆ. ತಮ್ಮ ಓಟವನ್ನು ಯಶಸ್ವಿಯಾಗಿ ಬೆಂಗಳೂರಿನಲ್ಲಿ ನಡೆಯುವ ವರ್ಲ್ಡ್ 10 ಕೆ ಸಹಿ ಬಣ್ಣದ ಅಂಚೆಚೀಟಿಯನ್ನು ಹೊಂದಿರುವುದರೊಂದಿಗೆ ಪ್ರತಿ ದೂರಕ್ಕೂ ವಿಭಿನ್ನವಾದ ವಿಶೇಷ ಅಂಚೆಚೀಟಿಯನ್ನು ಗಳಿಸುತ್ತಾರೆ.ಕಾಲಾನಂತರದಲ್ಲಿ, ಈ ಪಾಸ್ ಪೋರ್ಟ್ ಅಚ್ಚುಮೆಚ್ಚಿನ ಸ್ಮರಣಿಕೆಗಳಾಗಿ ವಿಕಸನಗೊಳ್ಳುತ್ತದೆ. ಮೈಲಿಗಲ್ಲುಗಳು, ಸಾಧನೆಗಳು ಮತ್ತು ಪ್ರತಿ ಫಿನಿಶ್ ಲೈನ್ ನ ಚೈತನ್ಯವನ್ನು ಸೆರೆಹಿಡಿಯುತ್ತದೆ – ವೈಯಕ್ತಿಕ ಚಾಲನೆಯಲ್ಲಿರುವ ಲಾಗ್ ಬುಕ್ ನಂತೆ ಇದು ಇರಲಿದೆ.

# ಸೇವಾ ತೆರಿಗೆಯ ಸರಾಗ ಡಿಜಿಟಲ್ ಪಾವತಿ ಸಕ್ರಿಯ

ಬೆಂಗಳೂರು

ಐಡಿಎಫ್‌ಸಿ ಫಸ್ಟ್ ಬ್ಯಾಂಕ್ ಇಂದು ತನ್ನ ವೈಯಕ್ತಿಕ ಮತ್ತು ವ್ಯವಹಾರ ಗ್ರಾಹಕರಿಗೆ ವಿಶೇಷ ಸೇವೆಗಳನ್ನು ಪ್ರಾರಂಭಿಸುವುದಾಗಿ ಘೋಷಿಸಿದೆ, ಇದು ಐಸಿಇಗೇಟ್ 2.0 ನೊಂದಿಗೆ ಸಂಯೋಜನೆ ಮೂಲಕ ಕಸ್ಟಮ್ಸ್ ತೆರಿಗೆ, ಕೇಂದ್ರ ಅಬಕಾರಿ ಮತ್ತು ಸೇವಾ ತೆರಿಗೆಯ ಸರಾಗ ಡಿಜಿಟಲ್ ಪಾವತಿಯನ್ನು ಸಕ್ರಿಯಗೊಳಿಸುತ್ತದೆ.

IDFC FIRST Bank

ಈ ಸಂಯೋಜನೆಯೊಂದಿಗೆ, ಗ್ರಾಹಕರು ಐಸಿಇಗೇಟ್ ಪೋರ್ಟಲ್ ಮೂಲಕ ತೆರಿಗೆ ಪಾವತಿಗಳನ್ನು ತಮ್ಮ ಇಷ್ಟದಂತೆ ಪ್ರಾರಂಭಿಸಬಹುದು ಮತ್ತು ಐಡಿಎಫ್‌ಸಿ ಫಸ್ಟ್ ಬ್ಯಾಂಕಿನ ಚಿಲ್ಲರೆ ಮತ್ತು ಕಾರ್ಪೊರೇಟ್ ಇಂಟರ್ನೆಟ್ ಬ್ಯಾಂಕಿಂಗ್ ಪ್ಲಾಟ್‌ಫಾರ್ಮ್‌ಗಳನ್ನು ಬಳಸಿಕೊಂಡು ವಹಿವಾಟುಗಳನ್ನು ಪೂರ್ಣಗೊಳಿಸಬಹುದು, ಸುರಕ್ಷಿತ, ಪರಿಣಾಮಕಾರಿ ಮತ್ತು ಸಂಪೂರ್ಣ ಡಿಜಿಟಲ್ ಅನುಭವವನ್ನು ಖಚಿತಪಡಿಸುತ್ತದೆ. ಈ ವೇದಿಕೆಯು ಗ್ರಾಹಕರಿಗೆ ನೈಜ–ಸಮಯದ ವಹಿವಾಟು ದೃಢೀಕರಣ, ಅರ್ಥಗರ್ಭಿತ ಆನ್‌ಲೈನ್ ಪ್ರಯಾಣ ಮತ್ತು ದಾಖಲೆ ನಿರ್ವಹಣೆ ಮತ್ತು ಸಮನ್ವಯಕ್ಕಾಗಿ ಚಲನ್‌ಗಳನ್ನು ತಕ್ಷಣವೇ ಡೌನ್‌ಲೋಡ್ ಮಾಡುವ ಸಾಮರ್ಥ್ಯವನ್ನು ಒದಗಿಸುತ್ತದೆ.

"ವ್ಯಾಪಾರ ವೇಗ ಮತ್ತು ವ್ಯವಹಾರ ನಿರಂತರತೆಗೆ ಕಸ್ಟಮ್ಸ್ ತೆರಿಗೆ ಪಾವತಿಗಳು ನಿರ್ಣಾಯಕವಾಗಿವೆ. ಐಸಿಇಗೇಟ್ 2.0 ನಲ್ಲಿ ಲೈವ್ ಮಾಡುವ ಮೂಲಕ, ಆಮದುದಾರರು ಇದ್ದಾರೆ.

# 23ರಿಂದ 'ರೂಫ್ ಇಂಡಿಯಾ 2026' ಬೃಹತ್ ಮೇಳ

ಬೆಂಗಳೂರು

ದೇಶದ ಮೂಲಸೌಕರ್ಯ ಮಾರುಕಟ್ಟೆ ವೇಗವಾಗಿ ಬೆಳವಣಿಗೆ ಹೊಂದುತ್ತಿರುವ ಸಂದರ್ಭದಲ್ಲಿ, ಮುಂದಿನ ಪೀಳಿಗೆಯ ಅತ್ಯಾಧುನಿಕ ಮೇಲ್ಛಾವಣಿ, ಸುಸ್ಥಿರ ನಿರ್ಮಾಣ ಮಾದರಿ ಹಾಗೂ ಉಕ್ಕು ಆಧಾರಿತ ತಂತ್ರಜ್ಞಾನಗಳನ್ನು ಪರಿಚಯಿಸಲು 23ನೇ ಆವೃತ್ತಿಯ 'ರೂಫ್ ಇಂಡಿಯಾ 2026' ಮೇಳ ಆಯೋಜಿಸಲಾಗುತ್ತಿದೆ. 'ಇನ್ಫಾರ್ಮಾ ಮಾರ್ಕೆಟ್ಸ್ ಇನ್ ಇಂಡಿಯಾ' ಆಯೋಜಿಸಿರುವ ಈ ಬೃಹತ್ ಪ್ರದರ್ಶನವು ಏಪ್ರಿಲ್ 23 ರಿಂದ 25 ರವರೆಗೆ ಬೆಂಗಳೂರು ಅಂತಾರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ (ಬಿಐಇಸಿ) ನಡೆಯಲಿದೆ.

ಏಷ್ಯಾದಲ್ಲೇ ಅತ್ಯಂತ ಪ್ರತಿಷ್ಠಿತ ಎನಿಸಿಕೊಂಡಿರುವ ಈ ಪ್ರದರ್ಶನದಲ್ಲಿ ನಿರ್ಮಾಣ ಕ್ಷೇತ್ರದ ದಿಗ್ಗಜರು ಭಾಗವಹಿಸಲಿದ್ದಾರೆ. ವಾರ್ಷಿಕವಾಗಿ ಬೆಂಗಳೂರು ಮತ್ತು ಮುಂಬೈ ನಗರಗಳಲ್ಲಿ ಪರ್ಯಾಯವಾಗಿ ನಡೆಯುವ ಈ ಮೇಳವು, ಈ ಬಾರಿ ಪರಿಸರ ಸ್ನೇಹಿ ಮತ್ತು ಇಂಧನ ದಕ್ಷತೆಯ ಮೇಲ್ಛಾವಣಿ ಉತ್ಪನ್ನಗಳ ಮೇಲೆ ವಿಶೇಷ ಗಮನ ಹರಿಸಿದೆ.

ಭಾರತ ಸೇರಿದಂತೆ ವಿವಿಧ ದೇಶಗಳ 150ಕ್ಕೂ ಹೆಚ್ಚು ಮುಂಚೂಣಿ ಬ್ರ್ಯಾಂಡ್ ಗಳು ತಮ್ಮ ನೂತನ ಉತ್ಪನ್ನಗಳನ್ನು ಪ್ರದರ್ಶಿಸಲಿವೆ. ಆರ್ಕಿಟೆಕ್ಟ್ ಗಳು, ಸಿವಿಲ್ ಎಂಜಿನಿಯರ್ ಗಳು, ಬಿಲ್ಡರ್ ಗಳು ಮತ್ತು ಗುತ್ತಿಗೆದಾರರು ಸೇರಿದಂತೆ ಸುಮಾರು 8,000ಕ್ಕೂ ಹೆಚ್ಚು ಸಂದರ್ಶಕರು ಭಾಗವಹಿಸುವ ನಿರೀಕ್ಷೆಯಿದೆ. ಪ್ರಿ–ಇಂಜಿನಿಯರ್ಡ್ ಕಟ್ಟಡಗಳು, ಅತ್ಯಾಧುನಿಕ ವಾಟರ್ ಪ್ರೂಫಿಂಗ್, ಸೌರ ಮೇಲ್ಛಾವಣಿ ಹಾಗೂ ಇನ್ಸುಲೇಶನ್ ತಂತ್ರಜ್ಞಾನಗಳು ಈ ಮೇಳದ ಪ್ರಮುಖ ಆಕರ್ಷಣೆಯಾಗಿರಲಿವೆ.

ಮೇಳದ ಅಂಗವಾಗಿ 'ಉಕ್ಕು ಮೂಲಸೌಕರ್ಯ ಮತ್ತು ಪ್ರಿ–ಇಂಜಿನಿಯರ್ಡ್ ಕಟ್ಟಡಗಳ ಭವಿಷ್ಯ' ಎಂಬ ವಿಷಯದ ಮೇಲೆ ವಿಶೇಷ ಸೆಮಿನಾರ್ ಗಳು ನಡೆಯಲಿವೆ. ಇದರಲ್ಲಿ ಉದ್ಯಮದ ತಜ್ಞರು ಭಾಗವಹಿಸಿ, ಪರಿಸರ ಮಾಲಿನ್ಯ ಮುಕ್ತ ಮೇಲ್ಛಾವಣಿ ವಿನ್ಯಾಸ ಹಾಗೂ ಡಿಜಿಟಲ್ ನಿರ್ಮಾಣ ತಂತ್ರಜ್ಞಾನಗಳ ಬಗ್ಗೆ ಮಾಹಿತಿ ನೀಡಲಿದ್ದಾರೆ.

ಈ ಬೃಹತ್ ಎಕ್ಸ್ಪೋಗೆ ದೇಶದ ಪ್ರತಿಷ್ಠಿತ ಸಂಸ್ಥೆಗಳಾದ ಆರ್ಕಿಟೆಕ್ಟ್, ಎಂಜಿನಿಯರ್ಸ್ ಮತ್ತು ಸರ್ವೇಯರ್ಸ್ ಅಸೋಸಿಯೇಷನ್ (ಎಇಎಸ್‌ಎ), ಪ್ರಿ–ಎಂಜಿನಿಯರ್ಡ್ ಸ್ಟ್ರಕ್ಚರ್ಸ್ ಸೊಸೈಟಿ ಆಫ್ ಇಂಡಿಯಾ ಕನ್ಸ್ಟ್ರಕ್ಷನ್ ಫೆಡರೇಶನ್ ಆಫ್ ಇಂಡಿಯಾ ವಾಟರ್ ಪ್ರೂಫರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ (ಡಬ್ಲ್ಯೂಎಐ) ಮತ್ತು ಇಂಡಿಯಾ ಬಿಲ್ಡಿಂಗ್ ಇನ್ಫಾರ್ಮೇಶನ್ ಮಾಡೆಲಿಂಗ್ ಅಸೋಸಿಯೇಷನ್ (ಐಬಿಐಎಂಎ) ಅಧಿಕೃತವಾಗಿ ಬೆಂಬಲ ಸೂಚಿಸಿವೆ.

# 'ಆಯುಸಾಂಟೆ ಕಿಡ್ನಿ ಹೆಲ್ತ್' ಬಿಡುಗಡೆ

ಬೆಂಗಳೂರು

ಆಧುನಿಕ ಜೀವನಶೈಲಿ ಮತ್ತು ಬದಲಾದ ಆಹಾರ ಪದ್ಧತಿಯಿಂದಾಗಿ ಹೆಚ್ಚುತ್ತಿರುವ ಮೂತ್ರಪಿಂಡದ ಸಮಸ್ಯೆಗಳಿಗೆ ಪರಿಹಾರವಾಗಿ, ಪ್ರತಿಷ್ಠಿತ 'ವೆಸ್ಟೀಜ್' ಸಂಸ್ಥೆಯು ತನ್ನ ಆಯುರ್ವೇದ ಉತ್ಪನ್ನ ವಿಭಾಗದ ಅಡಿಯಲ್ಲಿ 'ಆಯುಸಾಂಟೆ ಕಿಡ್ನಿ ಹೆಲ್ತ್' ಎಂಬ ನೂತನ ಉತ್ಪನ್ನವನ್ನು ಮಾರುಕಟ್ಟೆಗೆ ಪರಿಚಯಿಸಿದೆ.




ವಿಶ್ವ ಕಿಡ್ನಿ ದಿನದ ಅಂಗವಾಗಿ ಬಿಡುಗಡೆಯಾಗಿರುವ ಈ ಉತ್ಪನ್ನವು ಸಾಂಪ್ರದಾಯಿಕ ಆಯುರ್ವೇದ ಜ್ಞಾನ ಮತ್ತು ಆಧುನಿಕ ವೈಜ್ಞಾನಿಕ ಸಂಶೋಧನೆಗಳ ಸಮ್ಮಿಲನವಾಗಿದೆ. ಇದನ್ನು ಕಿಡ್ನಿಯ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದಲ್ಲದೆ, ಮೂತ್ರನಾಳದ ಸೋಂಕು ಮತ್ತು ಮೂತ್ರಪಿಂಡ ಕಲ್ಲುಗಳಂತಹ ಗಂಭೀರ ಸಮಸ್ಯೆಗಳನ್ನು ತಡೆಗಟ್ಟಲು ವಿನ್ಯಾಸಗೊಳಿಸಲಾಗಿದೆ.

ಈ ಫಾರ್ಮ್ಯುಲೇಶನ್ ನಲ್ಲಿ ಮೂತ್ರಪಿಂಡ ಆರೋಗ್ಯಕ್ಕೆ ರಾಮಬಾಣವೆನ್ನಲಾದ ನೆಲ್ಲಿಕಾಯಿ, ವರುಣ, ಗೋಕ್ಷುರ, ಪಾಷಾಣಭೇದ ಮತ್ತು ಅಮೃತಬಳ್ಳಿಯಂತಹ ಗಿಡಮೂಲಿಕೆಗಳನ್ನು ಬಳಸಲಾಗಿದೆ. ಇವು ಕಿಡ್ನಿಯಲ್ಲಿ ಹರಳುಗಳು ಶೇಖರಣೆಯಾಗುವುದನ್ನು ತಡೆಯುತ್ತವೆ ಮತ್ತು ದೇಹದ ನೈಸರ್ಗಿಕ ಶುದ್ಧೀಕರಣ ಪ್ರಕ್ರಿಯೆಯನ್ನು ಸುಗಮಗೊಳಿಸುತ್ತವೆ.

# ವಿದ್ಯಾರ್ಥಿಗಳಿಂದ ಉತ್ತಮ ಸಾಧನೆ

ಬೆಂಗಳೂರು

ಬನ್ನೇರುಘಟ್ಟ ಮತ್ತು ವೈಟ್‌ಫೀಲ್ಡ್ ಕ್ಯಾಂಪಸ್‌ಗಳಲ್ಲಿರುವ ಗ್ಲೋಬಲ್ ಇಂಡಿಯನ್ ಇಂಟರ್‌ನ್ಯಾಷನಲ್ ಸ್ಕೂಲ್ (ಜಿಐಐಎಸ್ ) ಸಿಬಿಎಸ್‌ಇ 10 ನೇ ತರಗತಿ ಫಲಿತಾಂಶಗಳಲ್ಲಿ 100% ಉತ್ತೀರ್ಣ ಫಲಿತಾಂಶಗಳೊಂದಿಗೆ ಬಲವಾದ ಪ್ರದರ್ಶನ



ನೀಡಿದೆ ಮತ್ತು ಎರಡೂ ಸಮೂಹಗಳಲ್ಲಿ ಹೆಚ್ಚಿನ ಪ್ರಮಾಣದ ವಿದ್ಯಾರ್ಥಿಗಳು ಪ್ರಥಮ ದರ್ಜೆಯನ್ನು ಪಡೆದುಕೊಂಡಿದ್ದಾರೆ. 90% ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳು, ಹಲವಾರು ಉನ್ನತ ಪ್ರದರ್ಶಕರು 98.40% ರಿಂದ 99.00% ಶ್ರೇಣಿಯಲ್ಲಿ ಅಂಕಗಳನ್ನು ಗಳಿಸಿದ್ದಾರೆ, ಇದು ಶೈಕ್ಷಣಿಕ ಶ್ರೇಷ್ಠತೆಗೆ ಸಂಸ್ಥೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಅತ್ಯುತ್ತಮ ಪ್ರದರ್ಶನ ನೀಡಿದವರಲ್ಲಿ,ಜಿಐಐಎಸ್ ಬನ್ನೇರುಘಟ್ಟದ ಅಯಾನ್ ಜೈನ್ 99.00% ನೊಂದಿಗೆ ಒಟ್ಟಾರೆ ಟಾಪರ್ ಆಗಿ ಹೊರಹೊಮ್ಮಿದರೆ, ಜಿಐಐಎಸ್ ವೈಟ್‌ಫೀಲ್ಡ್‌ನ ಇಲಾ ರಾಜೀವ್ ನಾಯರ್ 98.60% ಗಳಿಸಿ, ಶಾಂತನು ಜಸ್ರಾಜ್ ಜೋಗ್ 98.40% ಗಳಿಸಿ ನಂತರದ ಸ್ಥಾನದಲ್ಲಿದ್ದಾರೆ.

# ವಿದ್ಯುತ್ ಲೋಡ್ ಶೆಡ್ಡಿಂಗ್; ಗುಡಿ ಕೈಗಾರಿಕೆಗಳ ಮಾಲೀಕರಿಗೆ ಸಂಕಷ್ಟ

ವಿಜಯಪುರ

ಒಂದು ಕಡೆ ಬಿಸಿಲಿನ ತಾಪಮಾನ ಏರಿಕೆಯಿಂದಾಗಿ, ಜನರು ಪರದಾಡುತ್ತಿದ್ದರೆ, ಮತ್ತೊಂದು ಕಡೆ ವಿದ್ಯುತ್ ಲೋಡ್ ಶೆಡ್ಡಿಂಗ್ ನಿಂದಾಗಿ ವಿದ್ಯುತ್ ಮಗ್ಗಗಳು ಸೇರಿದಂತೆ, ಗುಡಿಕೈಗಾರಿಕೆಗಳು, ಸಣ್ಣ ಕೈಗಾರಿಕೆಗಳ ಮಾಲೀಕರು, ಉತ್ಪಾದನೆ ಮಾಡಲಾಗದೆ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ.

ಬೆಸ್ಕಾಂ ನವರು, ಇದ್ದಕಿದ್ದಂತೆ ವಿದ್ಯುತ್ ಕಡಿತಗೊಳಿಸುತ್ತಾರೆ. ಸುಮಾರು ಮೂರರಿಂದ ನಾಲ್ಕ ಗಂಟೆಗಳ ಕಾಲ ವಿದ್ಯುತ್ ಸ್ಥಗಿತವಾಗುತ್ತಿದೆ. ಇದರಿಂದ ಮಗ್ಗಗಳನ್ನು ನಂಬಿಕೊಂಡು ಜೀವನ ಮಾಡುವವರು, ರೇಷ್ಮೆನೂಲು ಬಿಚ್ಚಾಣಿಕೆ ಘಟಕಗಳು, ನೀರು ಶುದ್ಧೀಕರಣ ಘಟಕಗಳು, ಪ್ಲೋರ್ ಮಿಲ್ ಗಳು, ಹಾಲಿನ ವ್ಯಾಪಾರಿಗಳು ಸೇರಿದಂತೆ ಬಹುತೇಕ ವ್ಯಾಪಾರಿಗಳಿಗೆ ನಷ್ಟವುಂಟಾಗುತ್ತಿದೆ.

ವಿದ್ಯುತ್ ಮಗ್ಗದಲ್ಲಿ ಒಂದು ದಿನಕ್ಕೆ ನಾವು, ಒಂದು ಸೀರೆ ನೇಯುತ್ತೇವೆ. ಒಂದು ಸೀರೆ ಸಿದ್ಧವಾದರೆ, ನಮಗೆ ಖರ್ಚು ಕಳೆದು 200 ರೂಪಾಯಿ ಸಿಗುತ್ತದೆ. ಸರಕಾರ ಮಗ್ಗಗಳಿಗೆ ವಿದ್ಯುತ್ ಉಚಿತವಾಗಿ ಕೊಡುತ್ತಿದೆಯಾದರೂ, ಪದೇ ಪದೇ ಲೋಡ್ ಶೆಡ್ಡಿಂಗ್ ಮಾಡುತ್ತಲೇ ಇದ್ದರೆ, ನಾವು ಕೆಲಸ ಮಾಡುವುದು ಹೇಗೆ? ಬದುಕು ಕಟ್ಟಿಕೊಳ್ಳುವುದು ಹೇಗೆ? ಒಂದು ದಿನವೆಲ್ಲಾ ಅರ್ಧ ಸೀರೆಯನ್ನಷ್ಟೇ ನೇಯ್ಗೆ ಮಾಡಿದ್ದೇವೆ. ಎಂದು ಮಗ್ಗದ ಕಾರ್ಮಿಕರು ಅಳಲು ತೋಡಿಕೊಂಡಿದ್ದಾರೆ.



**ನೀರಿನ ಶುದ್ಧೀಕರಣ ಘಟಕಕ್ಕೆ ನಷ್ಟ:** ಪಟ್ಟಣದಲ್ಲಿ ಪದೇ ಪದೇ ವಿದ್ಯುತ್ ಕಡಿತ ಮಾಡುತ್ತಿರುವ ಕಾರಣ, ನಾವು ದಿನಕ್ಕೆ 1 ಸಾವಿರ ಕೇಸ್ ನೀರು ತಯಾರಿಸಬೇಕಾದವರು, 300 ಕೇಸ್ ಮಾಡುವುದಕ್ಕೆ ಸಾಧ್ಯವಾಗುತ್ತಿಲ್ಲ. ತಿಂಗಳಿಗೆ 15 ಲಕ್ಷದಷ್ಟು ವಿದ್ಯುತ್ ಬಿಲ್ ಕಟ್ಟಬೇಕು. ಕಾರ್ಮಿಕರಿಗೆ ವೇತನ ಕೊಡಬೇಕು. ವಿದ್ಯುತ್ ಕಣ್ಣಾಮುಚ್ಚಾಲೆ ಆಡಿದರೆ, ನಾವು ವ್ಯವಹಾರ ಮಾಡುವುದು ಹೇಗೆ? ಬೆಸ್ಕಾಂ ಇಲಾಖೆಯ ಮೇಲಾಧಿಕಾರಿಗಳು, ಲೋಡ್ ಶೆಡ್ಡಿಂಗ್ ಮಾಡುತ್ತಿಲ್ಲವೆನ್ನುತ್ತಾರೆ. ಸ್ಥಳೀಯ ಅಧಿಕಾರಿಗಳು ಲೋಡ್ ಶೆಡ್ಡಿಂಗ್ ಎನ್ನುತ್ತಾರೆ ಎಂದು ನೀರಿನ ಘಟಕದ ಮಾಲೀಕ ಮಹಾದೇವ್ ಆಕ್ರೋಶ ವ್ಯಕ್ತಪಡಿಸಿದರು.

**ಮನೆಗಳಲ್ಲಿರುವುದು ದುಬಾರಿಯಾಗುತ್ತಿದೆ:** ಬಿಸಿಲಿನ ತಾಪಮಾನ 35 ಡಿಗ್ರಿ ದಾಖಲಾಗುತ್ತಿದ್ದು, ವಿದ್ಯುತ್ ಕಡಿತದಿಂದಾಗಿ ಮನೆಗಳಲ್ಲಿರುವುದು ದುಬಾರಿಯಾಗುತ್ತಿದೆ. ಎಳೆಮಕ್ಕಳನ್ನು ಸಂಭಾಳಿಸುವುದು ತುಂಬಾ ಕಷ್ಟವಾಗಿದೆ. ಬೆಳಿಗ್ಗೆ 10 ಗಂಟೆಗೆ ತೆಗೆದಿರುವ ಕರೆಂಟ್ ಮೂರು ಗಂಟೆಯವರೆಗೂ ಕೊಟ್ಟಿಲ್ಲ. ಬೆಸ್ಕಾಂ ಇಲಾಖೆಯವರು, ವಿದ್ಯುತ್ ಕಡಿತ ಮಾಡದೇ ಸಹಕಾರ ನೀಡಿ ಎಂದು ಮಹಿಳೆಯರು ಮನವಿ ಮಾಡುತ್ತಿದ್ದಾರೆ.

> **ಲೋಡ್ ಶೆಡ್ಡಿಂಗ್ ಮಾಡುತ್ತಿರುವ ಕಾರಣ, ವಿದ್ಯುತ್ ಕಡಿತ ಮಾಡಲಾಗುತ್ತಿದೆ. ಈ ಬಗ್ಗೆ ವಾಟ್ಸಪ್ ಗ್ರೂಪ್ ಗಳಲ್ಲಿ ರೈತರಿಗೆ ಮಾಹಿತಿಯನ್ನೂ ನೀಡುತ್ತಿದ್ದೇವೆ. ಕೆಪಿಟಿಸಿಎಲ್ ನಿಂದ ಬರುವ ಸೂಚನೆಗಳನ್ನು ನಾವು ಪಾಲಿಸುತ್ತಿದ್ದೇವೆ.**
> **- ಹರೀಶ್ ಸಹಾಯಕ ಇಂಜಿನಿಯರ್ ಬೆಸ್ಕಾಂ ವಿಜಯಪುರ**

**ಪಂಪು ಮೋಟಾರುಗಳಿಗೆ ಕಂಟಕ:** ರೈತರ ತೋಟಗಳಲ್ಲಿ ಪಂಪು ಮೋಟಾರುಗಳು ಚಾಲನೆಯಲ್ಲಿರುವಾಗ, ಇದ್ದಕಿದ್ದಂತೆ ವಿದ್ಯುತ್ ಕಡಿತಗೊಳಿಸಿ, ಕೆಲವೊಮ್ಮೆ ತಕ್ಷಣ ಚಾರ್ಜ್ ಮಾಡುತ್ತಾರೆ. ಈ ವೇಳೆ ಪಂಪು ಮೋಟಾರುಗಳು ಸುಟ್ಟುಹೋಗುತ್ತಿರುವುದರಿಂದ ಅವುಗಳನ್ನು ರಿಪೇರಿ ಮಾಡಿಸುವುದು ಸವಾಲಿನ ಕೆಲಸವಾಗುತ್ತಿದೆ. ಪಂಪು, ಮೋಟಾರುಗಳು ರಿಪೇರಿ ಮಾಡಿಸಿಕೊಂಡು ಬರುವ ತನಕ ತೋಟಗಳು ಒಣಗುತ್ತವೆ, ಇದರಿಂದ ರೈತರಿಗೆ ಗಾಯದ ಮೇಲೆ ಬರೆ ಎಳೆದಂತಾಗುತ್ತಿದೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

# ಹೆಚ್ಚು ಅಂಕಗಳಿಸಿ ಸಾಧನೆಗೈದ ವಿದ್ಯಾರ್ಥಿಗಳು

ಬೆಂಗಳೂರು




2026ರ ಕರ್ನಾಟಕ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಫಿಸಿಕ್ಸ್‌ವಾಲಾ (ಪಿಡಬ್ಲ್ಯೂ) ವಿದ್ಯಾರ್ಥಿಗಳು ಅತ್ಯುತ್ತಮ ಫಲಿತಾಂಶಗಳನ್ನು ಗಳಿಸಿದ್ದಾರೆ, ರಾಜ್ಯಾದ್ಯಂತ ಹಲವಾರು ವಿದ್ಯಾರ್ಥಿಗಳು ಉನ್ನತ ಶ್ರೇಣಿಗಳನ್ನು ಗಳಿಸಿದ್ದಾರೆ. ಅವರಲ್ಲಿ, ಧ್ರುವಿ ಇಶಾನಿ ಎಸ್ 600 ರಲ್ಲಿ 594 ಅಂಕಗಳನ್ನು ಗಳಿಸಿದರೆ, ಆಶಯ್ ಜೈನ್ 593 ಅಂಕಗಳನ್ನು ಗಳಿಸಿ, ಅತಿ ಹೆಚ್ಚು ಅಂಕಗಳನ್ನು ಗಳಿಸಿದವರಾಗಿದ್ದಾರೆ.

ಕರ್ನಾಟಕ ದ್ವಿತೀಯ ಪಿಯುಸಿ 2026 ಪರೀಕ್ಷೆಗಳಲ್ಲಿ, ಫಿಸಿಕ್ಸ್‌ವಾಲಾ (ಪಿಡಬ್ಲ್ಯೂ) ವಿದ್ಯಾರ್ಥಿಗಳು ಅತ್ಯದ್ಭುತ ಫಲಿತಾಂಶಗಳನ್ನು ನೀಡಿದ್ದಾರೆ.

ಸುಮಾರು 20 ವಿದ್ಯಾರ್ಥಿಗಳು 98% ಮತ್ತು ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಗಳಿಸಿದರೆ, 145 ವಿದ್ಯಾರ್ಥಿಗಳು 96% ಮತ್ತು ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಗಳಿಸಿದ್ದಾರೆ ಮತ್ತು 220 ಕ್ಕೂ ಹೆಚ್ಚು ವಿದ್ಯಾರ್ಥಿಗಳು 95% ಮತ್ತು ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಗಳಿಸಿದ್ದಾರೆ.

ಈ ವಿದ್ಯಾರ್ಥಿಗಳು ಕರ್ನಾಟಕ ಮಂಡಳಿಯ ಅಭ್ಯರ್ಥಿಗಳನ್ನು ಬೆಂಬಲಿಸುವ ಸಲುವಾಗಿ ಪರಿಕಲ್ಪನಾತ್ಮಕ ಸ್ಪಷ್ಟತೆ, ಆಗಾಗ್ಗೆ ಮೌಲ್ಯಮಾಪನಗಳು ಮತ್ತು ಸ್ಥಿರವಾದ ಪರಿಷ್ಕರಣೆಯ ಮೇಲೆ ಕೇಂದ್ರೀಕರಿಸಿದ ಪಿಡಬ್ಲ್ಯೂನ ಸಂಘಟಿತ ಕಾರ್ಯಕ್ರಮಗಳಿಗೆ ದಾಖಲಾಗಿದ್ದರು.

## ಎಡಬ್ಲ್ಯೂಎಸ್ ಮತ್ತು ಎಸ್‌ಎಚ್‌ಐ ಇಂಡಿಯಾ ಕೈಜೋಡಿಕೆ

ಬೆಂಗಳೂರು

ಭಾರತದಲ್ಲಿ ಕೃತಕ ಬುದ್ಧಿಮತ್ತೆ ಕ್ಷೇತ್ರದ ಬೆಳವಣಿಗೆಗೆ ಮತ್ತೊಂದು ಮಹತ್ವದ ಹೆಜ್ಜೆ ಇಡಲಾಗಿದೆ. ಅಮೆಜಾನ್ ವೆಬ್ ಸರ್ವಿಸಸ್ ಸಂಸ್ಥೆಯು ಇಂಡಿಯಾ ಎಐ ಮಿಷನ್ ಅಡಿಯಲ್ಲಿ ಎಐ ಮೂಲಸೌಕರ್ಯವನ್ನು ಒದಗಿಸಲು ಎಸ್‌ಎಚ್‌ಐ ಇಂಡಿಯಾ ಸಂಸ್ಥೆಯೊಂದಿಗೆ ಸಹಯೋಗ ಘೋಷಿಸಿದೆ.

ಈ ಉಪಕ್ರಮವು ದೇಶದಾದ್ಯಂತ ಸರ್ಕಾರಿ ಇಲಾಖೆಗಳು, ಸ್ಟಾರ್ಟ್‌ಅಪ್‌ಗಳು, ಉದ್ಯಮಗಳು, ಶೈಕ್ಷಣಿಕ ಸಂಸ್ಥೆಗಳು ಮತ್ತು ಸಂಶೋಧನಾ ಸಂಸ್ಥೆಗಳಿಗೆ ಎಐ ಸಾಮರ್ಥ್ಯಗಳನ್ನು ಸುಲಭವಾಗಿ ಲಭ್ಯವಾಗುವಂತೆ ಮಾಡುವ ಉದ್ದೇಶ ಹೊಂದಿದೆ. ಎಸ್‌ಎಚ್‌ಐ ಇಂಡಿಯಾ ಸಂಸ್ಥೆಯು ಎಡಬ್ಲ್ಯೂಎಸ್ ಪಾಲುದಾರ ಜಾಲದ ಭಾಗವಾಗಿದ್ದು, ಇಂಡಿಯಾ ಎಐ ಮಿಷನ್ ಅಡಿಯಲ್ಲಿ ಆಯ್ಕೆಯಾಗಿದೆ.

ಈ ಸಹಯೋಗದ ಭಾಗವಾಗಿ, ಅಮೆಜಾನ್ ಸೇಜ್‌ಮೇಕರ್ ಸೇರಿದಂತೆ ವಿವಿಧ ಎಐ ಸೇವೆಗಳು ಒದಗಿಸಲಾಗುತ್ತಿವೆ.

ಇದರಿಂದ ಸಂಕೀರ್ಣ ಎಐ ಮೂಲಸೌಕರ್ಯ ಪರಿಣತಿಯ ಅಗತ್ಯವಿಲ್ಲದೆಯೇ ದೊಡ್ಡ ಭಾಷಾ ಮಾದರಿಗಳನ್ನು ತರಬೇತುಗೊಳಿಸಲು ಮತ್ತು ಸಂಸ್ಥೆಗಳ ಅಗತ್ಯಗಳಿಗೆ ಅನುಗುಣವಾಗಿ ರೂಪಾಂತರಿಸಲು ಸಾಧ್ಯವಾಗುತ್ತದೆ. ಇದರೊಂದಿಗೆ ಅಮೆಜಾನ್ ಬೆಡ್‌ರಾಕ್ ಸೇರಿದಂತೆ ಜನರೇಟಿವ್ ಎಐ ತಂತ್ರಜ್ಞಾನಗಳು, ಸ್ಥಳೀಯ ಅನುಷ್ಠಾನದ ಸಾಮರ್ಥ್ಯಗಳೊಂದಿಗೆ ಸೇರಿ, ಭಾರತದ ತಾಂತ್ರಿಕ ಸ್ವಾವಲಂಬನೆ ಮತ್ತು ಎಐ ನಾಯಕತ್ವದ ಗುರಿಗಳಿಗೆ ಬಲ ನೀಡಲಿವೆ.

ಅಮೆಜಾನ್ ಸೇಜ್‌ಮೇಕರ್ ದೊಡ್ಡ ಮಟ್ಟದ ಜಿಪಿಯು ಆಧಾರಿತ ಮಾದರಿ ತರಬೇತಿಯಲ್ಲಿ ಎದುರಾಗುವ ಸವಾಲುಗಳನ್ನು ಸರಳಗೊಳಿಸುತ್ತದೆ. ಸ್ವಯಂಚಾಲಿತ ಕ್ಲಸ್ಟರ್ ವ್ಯವಸ್ಥೆ, ಚೆಕ್‌ಪಾಯಿಂಟ್ ರಹಿತ ತರಬೇತಿ ಮತ್ತು ಸ್ವಯಂ ಪುನಶ್ಚೇತನ ನೋಡ್ ವ್ಯವಸ್ಥೆಗಳ ಮೂಲಕ, ತರಬೇತಿ ಪ್ರಕ್ರಿಯೆ ನಿರಂತರವಾಗಿ ನಡೆಯುವಂತೆ ಮಾಡುತ್ತದೆ. ಯಾವುದೇ ನೋಡ್ ವೈಫಲ್ಯ ಉಂಟಾದರೂ ಮಾನವ ಹಸ್ತಕ್ಷೇಪವಿಲ್ಲದೆ ಕಾರ್ಯಾಚರಣೆ ಮುಂದುವರಿಯುವ ವ್ಯವಸ್ಥೆ ಇದರಲ್ಲಿ ಇದೆ.

## ಲ್ಯಾಪ್‌ಟಾಪ್ ಬಿಡುಗಡೆ

ಬೆಂಗಳೂರು

ಡೆಲ್ ಟೆಕ್ನಾಲಜೀಸ್ ಭಾರತದಲ್ಲಿ 'ಡೆಲ್ 15' ಲ್ಯಾಪ್‌ಟಾಪ್ ಅನ್ನು ಬಿಡುಗಡೆ ಮಾಡಿದ್ದು, ದಿನವಿಡೀ ಹೆಚ್ಚಿನ ಕಾರ್ಯಗಳನ್ನು ಸಾಧಿಸಲು ಬಯಸುವ ಬಳಕೆದಾರರ ಅಗತ್ಯಗಳನ್ನು ಗಮನದಲ್ಲಿಟ್ಟು ವಿನ್ಯಾಸಗೊಳಿಸಲಾಗಿದೆ.



ಈ ಹೊಸ ಲ್ಯಾಪ್‌ಟಾಪ್‌ನಲ್ಲಿ ಇಂಟೆಲ್ ಕೋರ್ ಅಲ್ಟ್ರಾ 2 ಸರಣಿ ಎಚ್ ಪ್ರೊಸೆಸರ್‌ಗಳು ಮತ್ತು ಅರೋ ಲೇಕ್ ತಂತ್ರಜ್ಞಾನವನ್ನು ಬಳಸಲಾಗಿದೆ. ಜೊತೆಗೆ ಸುಧಾರಿತ ಆನ್-ಡಿವೈಸ್ ಕೃತಕ ಬುದ್ಧಿಮತ್ತೆ ಕಾರ್ಯಗಳಿಗಾಗಿ ಮೀಸಲಾದ ಎನ್‌ಪಿಯು ಒಳಗೊಂಡಿದೆ. ಇದರ ಮೂಲಕ ಓದು, ಕೆಲಸ ಹಾಗೂ ಕುಟುಂಬ ಮತ್ತು ಸ್ನೇಹಿತರೊಂದಿಗೆ ಸಂಪರ್ಕದಲ್ಲಿರುವ ಸಂದರ್ಭಗಳಲ್ಲಿ ಬಳಕೆದಾರರಿಗೆ ಹೆಚ್ಚು ಸ್ಮಾರ್ಟ್ ಮತ್ತು ಸುಗಮ ಮಲ್ಟಿಟಾಸ್ಕಿಂಗ್ ಅನುಭವ ದೊರೆಯುತ್ತದೆ.

ಡೆಲ್ 15 ಲ್ಯಾಪ್‌ಟಾಪ್‌ನಲ್ಲಿ ವಿಂಡೋಸ್ 11 ಕಾರ್ಯಾಚರಣೆ ವ್ಯವಸ್ಥೆಯೊಂದಿಗೆ ಮೀಸಲಾದ ಕೋಪೈಲಟ್ ಕೀ ನೀಡಲಾಗಿದೆ.

ಇದರ ಸಹಾಯದಿಂದ ಬಳಕೆದಾರರು ತಕ್ಷಣವೇ ಬುದ್ಧಿವಂತ ಸಹಾಯವನ್ನು ಪಡೆಯಬಹುದು. ಇದರಿಂದ ಟಾಸ್ಕ್ ನಿರ್ವಹಣೆ, ವಿಷಯ ಸೃಷ್ಟಿ ಮತ್ತು ದೈನಂದಿನ ಕಂಪ್ಯೂಟಿಂಗ್ ಕಾರ್ಯಗಳು ಇನ್ನಷ್ಟು ಸರಳವಾಗುತ್ತವೆ.

ಸಾಧನದಲ್ಲಿ ಅಡಾಪ್ಟಿವ್ ಥರ್ಮಲ್ ತಂತ್ರಜ್ಞಾನವನ್ನು ಬಳಸಿದ್ದು, ಇದು ಶಾಂತ ಮತ್ತು ಸಮತೋಲನ ಕಾರ್ಯಕ್ಷಮತೆಯನ್ನು ಒದಗಿಸುತ್ತದೆ. ಜೊತೆಗೆ ಎಕ್ಸ್‌ಪ್ರೆಸ್‌ಚಾರ್ಜ್ ಸೌಲಭ್ಯದಿಂದ ವೇಗವಾಗಿ ಚಾರ್ಜ್ ಆಗುವ ವ್ಯವಸ್ಥೆಯೂ ಇದೆ, ಇದರಿಂದ ಬಳಕೆದಾರರು ದೀರ್ಘಕಾಲ ಸಂಪರ್ಕದಲ್ಲಿರಬಹುದು.

## ಅಸೂಸ್ ಡ್ರಾಪ್ ಝೋನ್ ನೆಟ್‌ವರ್ಕ್ 22 ಮಳಿಗೆಗಳಿಗೆ ವಿಸ್ತರಿಸಿದೆ

ಬೆಂಗಳೂರು: ತನ್ನ ಡ್ರಾಪ್ ಝೋನ್ ಉಪಕ್ರಮದ ಯಶಸ್ವಿ ಅನುಷ್ಠಾನದ ಮೇಲೆ ನಿರ್ಮಿಸುತ್ತಾ, ಅಸೂಸ್ ಇಂಡಿಯಾ ಇಂದು ಈ ಕಾರ್ಯಕ್ರಮವನ್ನು 22 ಹೆಚ್ಚುವರಿ ಮಳಿಗೆಗಳಿಗೆ ವಿಸ್ತರಿಸುವುದಾಗಿ ಘೋಷಿಸಿದೆ, ಇದು ದೇಶಾದ್ಯಂತ ಸುಲಭವಾಗಿ ಪ್ರವೇಶಿಸಬಹುದಾದ, ಪಾರದರ್ಶಕ ಮತ್ತು ಪರಿಣಾಮಕಾರಿ ಮಾರಾಟದ ನಂತರದ ಬೆಂಬಲವನ್ನು ನೀಡುವ ತನ್ನ ಬದ್ಧತೆಯನ್ನು ಮತ್ತಷ್ಟು ಬಲಪಡಿಸುತ್ತದೆ.




ಮಾಲೀಕತ್ವದ ಅನುಭವವನ್ನು ಹೆಚ್ಚಿಸುವತ್ತ ಗಮನಹರಿಸುವ ನಿರಂತರ ಭಾಗವಾಗಿ, ಡ್ರಾಪ್ ಝೋನ್ ಉಪಕ್ರಮವು ಗ್ರಾಹಕರು ತಮ್ಮ ಲ್ಯಾಪ್‌ಟಾಪ್‌ಗಳನ್ನು ಅಸೂಸ್ ಎಕ್ಸ್‌ಕ್ಲೂಸಿವ್ ಸ್ಟೋರ್‌ಗಳಲ್ಲಿ ಸೇವೆಗಾಗಿ ಅನುಕೂಲಕರವಾಗಿ ಸಲ್ಲಿಸಲು ಅನುವು ಮಾಡಿಕೊಡುತ್ತದೆ, ಇದು ಮೀಸಲಾದ ಸೇವಾ ಕೇಂದ್ರಗಳಿಗೆ ಭೇಟಿ ನೀಡುವ ಅಗತ್ಯವನ್ನು ನಿವಾರಿಸುತ್ತದೆ. ಈ ವಿಸ್ತರಣೆಯು, ವಿಶೇಷವಾಗಿ ಉದಯೋನ್ಮುಖ ಮಾರುಕಟ್ಟೆಗಳಲ್ಲಿ ಪ್ರವೇಶಸಾಧ್ಯತೆ, ಟರ್ನ್‌ಅರೌಂಡ್ ಸಮಯ ಮತ್ತು ಸೇವಾ ಗೋಚರತೆಯ ಸುತ್ತಲಿನ ಪ್ರಮುಖ ಗ್ರಾಹಕರ ಸವಾಲುಗಳನ್ನು ಪರಿಹರಿಸುವ ಅಸೂಸ್‌ನ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ.

ಎರಡನೇ ಹಂತದ ಬಿಡುಗಡೆಯು ದೆಹಲಿ ಎನ್‌ಸಿಆರ್, ಹರಿಯಾಣ, ಕರ್ನಾಟಕ, ಕೇರಳ, ಮಹಾರಾಷ್ಟ್ರ, ತಮಿಳುನಾಡು, ಉತ್ತರಾಖಂಡ, ಉತ್ತರ ಪ್ರದೇಶ ಮತ್ತು ಪಶ್ಚಿಮ ಬಂಗಾಳ ಸೇರಿದಂತೆ ಪ್ರಮುಖ ಪ್ರದೇಶಗಳಲ್ಲಿ ಡ್ರಾಪ್ ಝೋನ್ ನೆಟ್‌ವರ್ಕ್ ಅನ್ನು ವಿಸ್ತರಿಸುತ್ತದೆ, ಮೆಟ್ರೋ ನಗರಗಳು ಹಾಗೂ ಟೈಯರ್-2 ಮತ್ತು ಟೈಯರ್-3 ಮಾರುಕಟ್ಟೆಗಳಲ್ಲಿ ಅಸೂಸ್‌ನ ಸೇವಾ ಹೆಜ್ಜೆಗುರುತನ್ನು ಬಲಪಡಿಸುತ್ತದೆ.

ಅನುಕೂಲತೆ ಮತ್ತು ನಮ್ಯತೆಯನ್ನು ಮತ್ತಷ್ಟು ಹೆಚ್ಚಿಸಲು, ಅಸೂಸ್ ವೈವಿಧ್ಯಮಯ ಗ್ರಾಹಕರ ಅಗತ್ಯತೆಗಳು ಮತ್ತು ವೇಳಾಪಟ್ಟಿಗಳಿಗೆ ಅನುಗುಣವಾಗಿ ವಿನ್ಯಾಸಗೊಳಿಸಲಾದ ಸೇವಾ ಆಯ್ಕೆಗಳನ್ನು ನೀಡುತ್ತದೆ. ಗ್ರಾಹಕರು ತಮ್ಮ ಸೇವಾ ಪ್ರಯಾಣವನ್ನು ತಕ್ಷಣದ, ವೈಯಕ್ತಿಕ ಸಮಾಲೋಚನೆಗಾಗಿ ಕ್ಯಾರಿ-ಇನ್ ಬೆಂಬಲದ ಮೂಲಕ ಪ್ರಾರಂಭಿಸಬಹುದು, ತಮ್ಮ ಸ್ಥಳದಲ್ಲಿ ಪರಿಣಿತ ತಂತ್ರಜ್ಞರು ನೀಡುವ ಆನ್-ಸೈಟ್ ಸೇವೆಯನ್ನು ಆಯ್ಕೆ ಮಾಡಬಹುದು ಅಥವಾ ಗೊತ್ತುಪಡಿಸಿದ ಅಸೂಸ್ ಎಕ್ಸ್‌ಕ್ಲೂಸಿವ್ ಸ್ಟೋರ್‌ಗಳ ಮೂಲಕ ಸರಾಗವಾಗಿ ಸಾಧನ ಸಲ್ಲಿಕೆ ಮತ್ತು ಸಂಗ್ರಹಣೆಯನ್ನು ಸಕ್ರಿಯಗೊಳಿಸುವ ಡ್ರಾಪ್ ಝೋನ್ ಸೇವೆಯನ್ನು ಬಳಸಿಕೊಳ್ಳಬಹುದು.

"ಅಸೂಸ್ನಲ್ಲಿ, ನಮ್ಮ ಗಮನವು ಯಾವಾಗಲೂ ಉತ್ಪನ್ನವನ್ನು ಮೀರಿ ವಿಶ್ವಾಸಾರ್ಹ ಮತ್ತು ಸ್ಥಿರವಾದ ಮಾಲೀಕತ್ವದ ಅನುಭವವನ್ನು ನೀಡುವುದರ ಮೇಲೆ ಕೇಂದ್ರೀಕರಿಸಿದೆ.

# ಸಾಮಾನ್ಯನ ಶಕ್ತಿಯುತ ಅಸ್ತ್ರ ಮಾಹಿತಿ ಹಕ್ಕು ಕಾಯ್ದೆ: ಡಿಸಿ ರವಿ

ಕೋಲಾರ

ಮಾಹಿತಿ ಹಕ್ಕು ಕಾಯ್ದೆಯು ಪ್ರಜಾ ಪ್ರಭುತ್ವದಲ್ಲಿ ಸಾಮಾನ್ಯ ನಾಗರಿಕನಿಗೆ ನಿಜವಾದ ಅಧಿಕಾರವನ್ನು ನೀಡುವ ಶಕ್ತಿಯುತ ಅಸ್ತ್ರವಾಗಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ತಿಳಿಸಿದರು.

ಶನಿವಾರ ಜಿಲ್ಲಾಧಿಕಾರಿಗಳ ಕಚೇರಿಯ ಆಡಿಟೋರಿಯಂನಲ್ಲಿ ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಮತ್ತು ಜಿಲ್ಲಾಡಳಿತದ ಸಹಯೋಗದೊಂದಿಗೆ 'ಮಾಹಿತಿ ಹಕ್ಕು ಅಧಿನಿಯಮ 2005'ರ ಕುರಿತು ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.



<u>ಆಡಳಿತದಲ್ಲಿ ಪಾರದರ್ಶಕತೆ:</u> ಆಡಳಿತವು ಸಾರ್ವಜನಿಕರಿಗೆ ಉತ್ತರದಾಯಿತ್ವವನ್ನು ಹೊಂದಿರಬೇಕು ಮತ್ತು ಈ ನಿಟ್ಟಿನಲ್ಲಿ ಮಾಹಿತಿ ಹಕ್ಕು ಕಾಯ್ದೆಯು ಅತ್ಯಂತ ನಿರ್ಣಾಯಕವಾಗಿದೆ. ಡಿಜಿಟಲೀಕರಣದ ಮಹತ್ವದಿಂದ ಆಡಳಿತದಲ್ಲಿ ಪಾರದರ್ಶಕತೆಯನ್ನು ತರಲು 'ಇ-ಗವರ್ನನ್ಸ್' ಅಳವಡಿಕೆ ಅವಶ್ಯಕವಾಗಿದೆ. ಕಡತಗಳ ಡಿಜಿಟಲೀಕರಣದ ಮೂಲಕ ಸಾರ್ವಜನಿಕರಿಗೆ ಮಾಹಿತಿ ಲಭ್ಯವಾಗುವಂತೆ ಮಾಡುವ ನಿಟ್ಟಿನಲ್ಲಿ ಜಿಲ್ಲಾಡಳಿತ ಹಲವು ಕ್ರಮಗಳನ್ನು ಕೈಗೊಂಡಿದೆ ಎಂದು ಅವರು ತಿಳಿಸಿದರು.

ಪ್ರತಿಯೊಂದು ಇಲಾಖೆಯಲ್ಲೂ ಸಾರ್ವಜನಿಕ ಮಾಹಿತಿ ಅಧಿಕಾರಿಯ ಪಾತ್ರ ಮುಖ್ಯವಾಗಿದೆ ಮತ್ತು ಈ ಕಾಯ್ದೆಯ ಅಡಿಯಲ್ಲಿ ನಾಗರಿಕರಿಗೆ ಸಮರ್ಪಕ ಮಾಹಿತಿ ನೀಡುವುದು ಸರ್ಕಾರದ ಕರ್ತವ್ಯವಾಗಿದೆ ಎಂದು ಅವರು ಒತ್ತಿ ಹೇಳಿದರು.

ಭೂಸುರಕ್ಷಾ ಯೋಜನೆ ಸೇರಿದಂತೆ ಕಂದಾಯ ಇಲಾಖೆಯ ಹಲವು ಸೇವೆಗಳನ್ನು ಡಿಜಿಟಲೀಕರಣಗೊಳಿಸಲಾಗುತ್ತಿದೆ. ಇದರಿಂದ ಲಕ್ಷಾಂತರ ಪುಟಗಳ ದಾಖಲೆಗಳು ಸಾರ್ವಜನಿಕರಿಗೆ ಆನ್‌ಲೈನ್‌ನಲ್ಲಿ ಲಭ್ಯವಾಗುತ್ತಿವೆ. ಸಕಾಲ ಅಡಿಯಲ್ಲಿ ಸಿಗುವ ಸೇವೆಗಳನ್ನು ನಿಗದಿತ ಸಮಯದೊಳಗೆ ಜನರು ವಿಳಂಬವಿಲ್ಲದೆ ಪಡೆದುಕೊಳ್ಳಬಹುದು ಎಂದು ಜಿಲ್ಲಾಧಿಕಾರಿಗಳು ಮಾಹಿತಿ ನೀಡಿದರು.

ರಾಜ್ಯ ಮಾಹಿತಿ ಆಯುಕ್ತರಾದ ಡಾ. ಹರೀಶ್ ಕುಮಾರ್ ಅವರು ಮಾತನಾಡಿ, "ಪ್ರಜಾಪ್ರಭುತ್ವದಲ್ಲಿ ಸರ್ಕಾರ ಮತ್ತು ಆಡಳಿತ ವ್ಯವಸ್ಥೆಯು ಜನರಿಗೆ ಉತ್ತರದಾಯಿಯಾಗಿರಬೇಕು. ಮಾಹಿತಿ ಹಕ್ಕು ಕಾಯ್ದೆಯು ಈ ವ್ಯವಸ್ಥೆಯನ್ನು ಜನರಿಗೆ ತಲುಪಿಸುವ ಕೊಂಡಿಯಾಗಿದೆ. ಒಬ್ಬ ಸಾಮಾನ್ಯ ವ್ಯಕ್ತಿ ಕೇವಲ ಹತ್ತು ರೂಪಾಯಿಗಳ ವೆಚ್ಚದಲ್ಲಿ ಮಾಹಿತಿ ಪಡೆಯುವ ಮೂಲಕ ಇಡೀ ಆಡಳಿತದ ತಪ್ಪುಗಳನ್ನು ಪ್ರಶ್ನಿಸುವ ಶಕ್ತಿಯನ್ನು ಈ ಕಾಯ್ದೆ ನೀಡಿದೆ" ಎಂದು ತಿಳಿಸಿದರು.

ಯುವಜನತೆ ಮತ್ತು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, "ಇಂದಿನ ಯುವಕರು ಸಾಮಾಜಿಕ ಜಾಲತಾಣಗಳಲ್ಲಿ ಸಮಯ ವ್ಯರ್ಥ ಮಾಡುವುದಕ್ಕಿಂತ ಹೆಚ್ಚಾಗಿ, ಕಾನೂನುಗಳ ಬಗ್ಗೆ, ಅದರಲ್ಲೂ ವಿಶೇಷವಾಗಿ ಮಾಹಿತಿ ಹಕ್ಕು ಕಾಯ್ದೆಯ ಬಗ್ಗೆ ಜ್ಞಾನ ಗಳಿಸಿಕೊಳ್ಳಬೇಕು. ಜವಾಬ್ದಾರಿಯುತ ಪ್ರಜೆಯಾಗಿ ಬೆಳೆದಾಗ ಮಾತ್ರ ನಮ್ಮ ದೇಶದ ಅಭಿವೃದ್ಧಿ ಸಾಧ್ಯ" ಎಂದು ಕಿವಿಮಾತು ಹೇಳಿದರು.

ನೆಹರೂ ಅವರ ಕಾಲದ ಒಂದು ಪ್ರಸಂಗವನ್ನು ಉಲ್ಲೇಖಿಸಿದ ಅವರು, ಪ್ರಜಾಪ್ರಭುತ್ವದ ಮೌಲ್ಯ ಮತ್ತು ಸ್ವಾತಂತ್ರ್ಯದ ಮಹತ್ವವನ್ನು ವಿವರಿಸಿದರು. ಅಧಿಕಾರಶಾಹಿಯ ಅಡೆತಡೆಗಳ ನಡುವೆಯೂ ಸಾರ್ವಜನಿಕರು ಮಾಹಿತಿ ಪಡೆಯುವ ಹಕ್ಕನ್ನು ಚಲಾಯಿಸುವಾಗ ಎದುರಾಗುವ ಸವಾಲುಗಳನ್ನು ಹೇಗೆ ಎದುರಿಸಬೇಕು ಎಂಬುದರ ಕುರಿತು ಕಾರ್ಯಾಗಾರದಲ್ಲಿ ಉಪಯುಕ್ತ ಮಾಹಿತಿಯನ್ನು ಹಂಚಿಕೊಂಡರು.

ಮಾಹಿತಿ ಹಕ್ಕು ಕಾಯ್ದೆಯ ವಿವಿಧ ಮಗ್ಗುಲುಗಳು, ಅರ್ಜಿ ಸಲ್ಲಿಕೆ ವಿಧಾನ ಹಾಗೂ ಅದರಿಂದ ಸಿಗುವ ಪರಿಹಾರಗಳ ಕುರಿತು ಗೋಷ್ಠಿಗಳು ನಡೆದವು.

ರಾಜ್ಯ ಮಾಹಿತಿ ಆಯುಕ್ತೆ ಡಾ. ಬಿ.ಆರ್. ಮಮತ ಅವರು ಮಾತನಾಡಿ ಮಾಹಿತಿ ಹಕ್ಕು ಕಾಯಿದೆಯು ಆಡಳಿತದಲ್ಲಿ ಪಾರದರ್ಶಕತೆಯನ್ನು ಮತ್ತು ಹೊಣೆಗಾರಿಕೆಯನ್ನು ಖಚಿತಪಡಿಸಿಕೊಳ್ಳಲು ಇರುವ ಅತ್ಯಂತ ಪ್ರಮುಖ ಸಾಧನವಾಗಿದೆ ಎಂದು ಒತ್ತಿ ಹೇಳಿದರು.

ಮಾಹಿತಿ ಹಕ್ಕು ಆಂದೋಲನದ ಇತಿಹಾಸವನ್ನು ಸ್ಮರಿಸಿದ ಅವರು, ರಾಜಸ್ಥಾನದ ಮಜ್ದೂರ್ ಕಿಸಾನ್ ಶಕ್ತಿ ಸಂಘಟನೆ (MKSS) ಮತ್ತು ಅರುಣಾ ರಾಯ್ ಅವರಂತಹ ವ್ಯಕ್ತಿಗಳು ಈ ಹಕ್ಕಿಗಾಗಿ ನಡೆಸಿದ ಹೋರಾಟವನ್ನು ಉಲ್ಲೇಖಿಸಿದರು.

ಆಡಳಿತಾತ್ಮಕ ಸಂಸ್ಕೃತಿಯಲ್ಲಿ 'ಅಧಿಕೃತ ರಹಸ್ಯ ಕಾಯಿದೆ'ಯ ಮನಸ್ಥಿತಿಯಿಂದ ಹೊರಬಂದು, ಪಾರದರ್ಶಕತೆಯನ್ನು ಅಳವಡಿಸಿಕೊಳ್ಳುವಂತೆ ಅವರು ಅಧಿಕಾರಿಗಳಿಗೆ ಕರೆ ನೀಡಿದರು.

RTI ಅಪ್ಲಿಕೇಶನ್‌ಗಳಿಗೆ ಸಂಬಂಧಿಸಿದ ಕಾನೂನು ವಿಧಾನಗಳು ಮತ್ತು ಗೌಪ್ಯತೆ ಅಥವಾ ಭದ್ರತೆಯ ಕಾರಣದಿಂದಾಗಿ ಇರುವ ವಿನಾಯಿತಿಗಳ ಬಗ್ಗೆ ಅವರು ವಿವರವಾಗಿ ತಿಳಿಸಿದರು.

ಮಾಹಿತಿ ಹಕ್ಕು ಕಾಯಿದೆಯು 'ಸಕಾಲ' ಯೋಜನೆಯೊಂದಿಗೆ ಹೇಗೆ ಸಹಕರಿಸುತ್ತದೆ ಎಂಬುದನ್ನು ವಿವರಿಸಿದ ಅವರು, ಡಿಜಿಟಲ್ ಸಾಧನಗಳು ಮತ್ತು ವಿದ್ಯಾರ್ಥಿ ಐಡಿಗಳನ್ನು ಬಳಸುವುದರಿಂದ ಆಡಳಿತದಲ್ಲಿನ ವಿಳಂಬವನ್ನು ಕಡಿಮೆ ಮಾಡಬಹುದು ಎಂದು ತಿಳಿಸಿದರು.

RTI ವಿಚಾರಣೆಗಳಿಗೆ ಸಮಯಕ್ಕೆ ಸರಿಯಾಗಿ ಪ್ರತಿಕ್ರಿಯಿಸದ ಅಧಿಕಾರಿಗಳು ದಂಡ ತೆರಬೇಕಾಗುತ್ತದೆ ಎಂಬುದನ್ನು ನೆನಪಿಸಿದ ಅವರು, ಇದು ಸಮಯಬದ್ಧ ಸೇವೆಯನ್ನು ಉತ್ತೇಜಿಸುವ ಕ್ರಮವಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ರಾಜ್ಯ ಮಾಹಿತಿ ಆಯುಕ್ತರಾದ ರಾಜಶೇಖರ್. ಸಿಂಡಿಕೇಟ್ ಸದಸ್ಯ ಗೋಪಾಲ ಗೌಡ, ಕುಲಸಚಿವ ಪ್ರೊ. ಎನ್ ಲೋಕನಾಥ್, ಕುಮುದ, ಮುಖ್ಯ ಲೆಕ್ಕಾಧಿಕಾರಿ ವಸಂತಕುಮಾರ್, ಸೇರಿದಂತೆ ವಿಶ್ವವಿದ್ಯಾಲಯದ ಅಧಿಕಾರಿಗಳು, ವಿವಿಧ ಇಲಾಖೆಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಆಸಕ್ತ ವಿದ್ಯಾರ್ಥಿಗಳು ಮತ್ತು ಮಾಧ್ಯಮದವರು ಉಪಸ್ಥಿತರಿದ್ದರು.

## ಗೊಬ್ಬರ ಸರಬರಾಜುದಾರರಿಗೆ ಕಟ್ಟುನಿಟ್ಟಿನ ಸೂಚನೆ

ತುಮಕೂರು

ಮುಂಗಾರು ಹಂಗಾಮಿಗೆ ಜಿಲ್ಲೆಗೆ ಬೇಡಿಕೆ ಇರುವ ರಸಗೊಬ್ಬರ ಮತ್ತು ಬಿತ್ತನೆ ಬೀಜವನ್ನು ದಾಸ್ತಾನಿಕರಿಸಲು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸರಬರಾಜುದಾರರಿಗೆ ಸೂಚನೆ ನೀಡಿದ್ದಾರೆ.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ 2026ರ ಮುಂಗಾರು ಹಂಗಾಮು ಪೂರ್ವ ಸಿದ್ಧತೆ ಸಂಬಂಧ ರಸಗೊಬ್ಬರ ಮತ್ತು ಬಿತ್ತನೆ ಬೀಜ ಸರಬರಾಜುದಾರರು, ಮಾರಾಟಗಾರರು ಹಾಗೂ ದಾಸ್ತಾನು ವಿತರಣೆ ಸಂಬಂಧ ನಡೆದ ಜಿಲ್ಲಾ ಮಟ್ಟದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ರಸಗೊಬ್ಬರ ಮಾರಾಟಗಾರರು ರಸಗೊಬ್ಬರ ವಿತರಣೆ ಸಮಯದಲ್ಲಿ ಕೃತಕ ಅಭಾವ ಸೃಷ್ಟಿಯಾಗದಂತೆ, ಹೆಚ್ಚಿನ ದರದಲ್ಲಿ ಮಾರಾಟ ಮಾಡದಂತೆ ರಸಗೊಬ್ಬರ ವಿತರಿಸಬೇಕೆಂದು ತಿಳಿಸಿದ ಅವರು, ರಸಗೊಬ್ಬರ ಮಾರಾಟದಲ್ಲಿ ಉಲ್ಲಂಘನೆ ಕಂಡು ಬಂದಲ್ಲಿ ಸಂಬಂಧಪಟ್ಟ ಮಾರಾಟಗಾರರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಮುಂದುವರೆದು ಯೂರಿಯಾ ರಸಗೊಬ್ಬರ ವಿತರಣೆಯನ್ನು ಕೆ-ಕಿಸಾನ್ ತಂತ್ರಾಂಶದ ಮೂಲಕ ರೈತರ FRUITS FID ಬಳಸಿ ಕಡ್ಡಾಯವಾಗಿ ಯೂರಿಯಾ ವಿತರಿಸಬೇಕೆಂದು ಹಾಜರಿದ್ದ ಮಾರಾಟಗಾರರಿಗೆ ಸೂಚಿಸಿದರು.

ಪ್ರಸಕ್ತ ಸಾಲಿನಲ್ಲಿ ನ್ಯಾನೋ ಯೂರಿಯಾ, ನ್ಯಾನೋ ಡಿ.ಎ.ಪಿ. ಹಾಗೂ ಸಮತೋಲನಾ ಗೊಬ್ಬರ ಬಳಕೆ ಮತ್ತು ಉಪಯುಕ್ತತೆ ಬಗ್ಗೆ ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಹೆಚ್ಚಿನ ಪ್ರಚಾರ ಕೈಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ್ ಎಸ್., ತೋಟಗಾರಿಕೆ ಉಪನಿರ್ದೇಶಕಿ ಶಾರದಮ್ಮ ಸೇರಿದಂತೆ ಗೊಬ್ಬರ ವಿತರಕರು, ಬೆಳೆ ವಿಮೆದಾರರು ಹಾಗೂ ತಾಲೂಕು ಮಟ್ಟದ ಸಹಾಯಕ ನಿರ್ದೇಶಕರುಗಳು ಭಾಗವಹಿಸಿದ್ದರು.

## ಮೆ.ಫಿಜಾ ಗ್ಲೋಬಲ್ ಆಗ್ರೋವೆಂಚರ್ಸ್ ಪ್ರೈ.ಲಿ., ಹೊರ ಹಾಕಲು ನಿರ್ಧಾರ

ಬೆಂಗಳೂರು



ಪರವಾನಗಿ ಶುಲ್ಕವನ್ನು ಪಾವತಿಸದಿರುವುದು, ಸೌಲಭ್ಯದ ಕಾರ್ಯನಿರ್ವಹಣೆಯಿಲ್ಲದಿರುವುದು, ಪರಿಸರ ಉಲ್ಲಂಘನೆ, ಅನಧಿಕೃತ ವಾಣಿಜ್ಯ ಚಟುವಟಿಕೆಗಳಿಗೆ ದುರುಪಯೋಗ, ಒಪ್ಪಂದದ ಮುಕ್ತಾಯ, ಅನಧಿಕೃತ ಉದ್ಯೋಗವನ್ನು ತೆರವುಗೊಳಿಸಲು ಮುಂದುವರಿದ ನಿರಾಕರಣೆ, ಶೋಕಾಸ್ ನೋಟಿಸ್ ಮತ್ತು ಡೀಫಾಲ್ಟ್ ಇನ್ ಗೋಚರತೆ ಸೇರಿ ಹಲವು ಕಾರಣಗಳಿಂದ ಮೆಸರ್ಸ್ ಫಿಜಾ ಗ್ಲೋಬಲ್ ಅಗ್ರೋವೆಂಚರ್ಸ್ ಪ್ರೈ.ಲಿ. ಹೊರ ಹಾಕಲು ಸಕ್ಷಮ ಅಧಿಕಾರಿಗಳು ನಿರ್ಧರಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಲಾಗಿದ್ದು, ಕರ್ನಾಟಕ ಸಾರ್ವಜನಿಕ ಆವರಣ (ಅನಧಿಕೃತ ನಿವಾಸಿಗಳ ಹೊರಹಾಕುವಿಕೆ) ಕಾಯ್ದೆ, 1974 ರ ಸೆಕ್ಷನ್ 5ರ ಉಪ-ವಿಭಾಗ (1) ರ ಅಡಿಯಲ್ಲಿ ಸಕ್ಷಮ ಅಧಿಕಾರಿಯಾಗಿ ನೀಡಲಾದ ಅಧಿಕಾರವನ್ನು ಚಲಾಯಿಸಿ ಮೆಸರ್ಸ್ ಫಿಜಾ ಗ್ಲೋಬಲ್ ಅಗ್ರೋವೆಂಚರ್ಸ್ ಪ್ರೈ.ಲಿ., ನ ವ್ಯವಸ್ಥಾಪಕ ನಿರ್ದೇಶಕ ಬಾವಾ ಮೊಹಮ್ಮದ್ ಫಾರೂಖ್ ಪ್ರತಿನಿಧಿಸುವ ಮೆಸ್ಸರ್ಸ್ ಫಿಜಾ ಗ್ಲೋಬಲ್ ಆಗ್ರೋವೆಂಚರ್ಸ್ ಪ್ರೈವೇಟ್ ಲಿಮಿಟೆಡ್ ಮತ್ತು ಸದರಿ ಸಾರ್ವಜನಿಕ ಆವರಣದಲ್ಲಿ ಅಥವಾ ಅದರ ಯಾವುದೇ ಭಾಗದಲ್ಲಿ ವಾಸವಿರಬಹುದಾದ ಎಲ್ಲಾ ವ್ಯಕ್ತಿಗಳನ್ನು ನ್ಯಾಯಾಲಯದ ಆದೇಶದ ಪ್ರಕಾರ ನಲವತ್ತೈದು (45) ದಿನಗಳ ಒಳಗೆ ಸದರಿ ಸಾರ್ವಜನಿಕ ಆವರಣವನ್ನು ಖಾಲಿ ಮಾಡಲು ನಿರ್ಧರಿಸಲಾಗಿದೆ. ಕಾಯಿದೆಯ ಸೆಕ್ಷನ್ 5 ರ ಉಪ-ವಿಭಾಗ (1) ರ ಅಡಿ ನಿರ್ದಿಷ್ಟಪಡಿಸಿದ ಅವಧಿಯೊಳಗೆ ಈ ಆದೇಶವನ್ನು ಪಾಲಿಸಲು ನಿರಾಕರಿಸಿದರೆ ಮೆಸ್ಸರ್ಸ್ ಫಿಜಾ ಗ್ಲೋಬಲ್ ಆಗ್ರೋವೆಂಚರ್ಸ್ ಪ್ರೈವೇಟ್ ಲಿಮಿಟೆಡ್, ಸಂಬಂಧಪಟ್ಟ ಎಲ್ಲಾ ಇತರ ವ್ಯಕ್ತಿಗಳನ್ನು ಸದರಿ ಸಾರ್ವಜನಿಕ ಆವರಣದಿಂದ ಬಲವಂತವಾಗಿ ಹೊರಹಾಕಲಾಗುತ್ತದೆ. ಸಕ್ಷಮ ಅಧಿಕಾರಿ ಅಥವಾ ಸಕ್ಷಮ ಅಧಿಕಾರಿಯಿಂದ ಅಧಿಕೃತಗೊಳಿಸಲ್ಪಟ್ಟ ಯಾವುದೇ ಅಧಿಕಾರಿಯು ಅಗತ್ಯವಿದ್ದಲ್ಲಿ, ಕಾಯಿದೆಯ ಸೆಕ್ಷನ್ 5 ರ ಉಪ-ವಿಭಾಗ (2) ರ ಅಡಿಯಲ್ಲಿ ಅಗತ್ಯವಿರುವಂತೆ ಬಲಪ್ರಯೋಗ ಮಾಡುವ ಮೂಲಕ ಅದನ್ನು ಸ್ವಾಧೀನಪಡಿಸಿಕೊಳ್ಳಲಾಗುತ್ತದೆ. ಈ ವೇಳೆ ಸದರಿ ನಿವಾಸಿಯ ಅಪಾಯ, ವೆಚ್ಚ ಮತ್ತು ಪರಿಣಾಮಗಳನ್ನು ಸಂಪೂರ್ಣವಾಗಿ ಭರಿಸಬೇಕಾಗುತ್ತದೆ ಎಂದು ನೋಟೀಸ್ ನಲ್ಲಿ ನೀಡಲಾಗಿದೆ. ಕಾಯಿದೆಯ ಸೆಕ್ಷನ್ 7ರ ಅಡಿಯಲ್ಲಿ, ಸಕ್ಷಮ ಅಧಿಕಾರಿಯು ಸಾರ್ವಜನಿಕ ಆವರಣದ ಅನಧಿಕೃತ ಆಕ್ರಮಣದ ಸಂಪೂರ್ಣ ಅವಧಿಗೆ ಅಂದರೆ, 2025ರ ಜು. 28ರಿಂದ ನಿಜವಾದ ರಜೆ, ಸ್ವಾಧೀನದ ಮರುಪಡೆಯುವಿಕೆವರೆಗೆ ಬಳಕೆ ಮತ್ತು ಸ್ವಾಧೀನಕ್ಕಾಗಿ ಹಾನಿಯನ್ನು ನಿರ್ಣಯಿಸಲು ಮುಂದುವರಿಯುತ್ತಾರೆ. ಬಾಕಿ ಇರುವ ಪರವಾನಗಿ ಶುಲ್ಕ ರೂ. 2,48,69,000 ಮತ್ತು ದಿನಕ್ಕೆ ರೂ. 50,969 ರಷ್ಟು ಸಂಗ್ರಹವಾಗುವ ಜೊತೆಗೆ, ಇದನ್ನು ಕಾಯಿದೆಯ ಸೆಕ್ಷನ್ 15 ರ ಅಡಿಯಲ್ಲಿ ಭೂಕಂದಾಯದ ಬಾಕಿಯಾಗಿ ವಸೂಲಿ ಮಾಡಲಾಗುತ್ತದೆ ಎಂದು ಎಚ್ಚರಿಕೆ ನೀಡಲಾಗಿದೆ. ಇಂಟಿಗ್ರೇಟೆಡ್ ಕೋಲ್ಡ್ ಚೈನ್ ಫೆಸಿಲಿಟಿಯು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಪೂಜೇನಹಳ್ಳಿ ತೋಟಗಾರಿಕಾ ಫಾರ್ಮ್ ಕನ್ನಮಂಗಲ ಗ್ರಾಮದ ಸೈ.ನಂ. 90, ಕಸಬಾ ಹೋಬಳಿಯಲ್ಲಿದ್ದು ಕರ್ನಾಟಕ ರಾಜ್ಯ ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮ ಲಿಮಿಟೆಡ್ ಮಾಲೀಕತ್ವದಲ್ಲಿದೆ. ಇದೊಂದು ಕರ್ನಾಟಕ ಸರ್ಕಾರದ ಉದ್ಯಮವಾಗಿದ್ದು, ಕರ್ನಾಟಕ ಸರ್ಕಾರವು ಕನಿಷ್ಠ 51% ಪಾವತಿಸಿದ ಷೇರು ಬಂಡವಾಳವನ್ನು ಹೊಂದಿರುವ ಕಂಪನಿ ಕಾಯಿದೆಯ ವಿಭಾಗದ ಸಾರ್ವಜನಿಕ ಆಸ್ತಿಯಾಗಿದೆ. 2024ರ ಜೂನ್ 6 ರಂದು ಸ್ವಾಧೀನ ಹಸ್ತಾಂತರ ಪ್ರಮಾಣ ಪತ್ರದ ಮೂಲಕ ಸ್ವಾಧೀನವನ್ನು ಹಸ್ತಾಂತರಿಸಲಾಗಿದೆ. 2025ರ ಜು. 28ಕ್ಕೆ ಒಪ್ಪಂದವನ್ನು ಮುಕ್ತಾಯಗೊಳಿಸಲಾಗಿದ್ದು, 2025ರ ಮೇ 28 ರಂದು ಮುಕ್ತಾಯ ಸೂಚನೆಯ ಮೂಲಕ ನೀಡಲಾಗಿತ್ತು. 2025ರ ಜು. 28 ರಿಂದ ಅನಧಿಕೃತ ಉದ್ಯೋಗದ ಅವಧಿ ಮುಂದುವರಿದಿದೆ. ಬಾಕಿಗಳು: 22,48,69,000 ರೂ. (ಮತ್ತು ದಿನಕ್ಕೆ 150,969 ರೂ. ರಂತೆ ಸಂಗ್ರಹವಾಗಲಿದೆ. ಜೊತೆಗೆ ಬಡ್ಡಿ ಮತ್ತು ಹಾನಿಗಳನ್ನು ಕರ್ನಾಟಕ ಸಾರ್ವಜನಿಕ ಆವರಣ ಅನಧಿಕೃತ ನಿವಾಸಿಗಳ ಹೊರಹಾಕುವಿಕೆ ಕಾಯ್ದೆ, 1974ರ ಸೆಕ್ಷನ್ 7ರ ಪ್ರಕಾರ ಲೆಕ್ಕಹಾಕಲಾಗುತ್ತದೆ ಎಂದು ರಾಜ್ಯ ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮತ್ತು ಸಕ್ಷಮ ಅಧಿಕಾರಿ ಸಿ.ಎನ್.ಶಿವಪ್ರಕಾಶ್ ತಿಳಿಸಿದ್ದಾರೆ.

## 'ಮಹಿಳಾ ವಿರೋಧಿ ನಿಲುವಿನಿಂದ ಕಾಂಗ್ರೆಸ್‌ಗೆ ಮುಖಭಂಗ'

ಬೆಂಗಳೂರು

ಕಾಂಗ್ರೆಸ್ಸಿನ ಮಹಿಳಾ ವಿರೋಧಿ ಕ್ರಮದಿಂದ ಮುಂದಿನ ದಿನಗಳಲ್ಲಿ ಆ ಪಕ್ಷಕ್ಕೆ ಮುಖಭಂಗ ಆಗಲಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.



ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಶನಿವಾರ ಮಾಧ್ಯಮಗಳ ಜೊತೆ ಅವರು ಮಾತನಾಡಿದರು. ಪ್ರಧಾನಿ ನರೇಂದ್ರ ಮೋದಿಜೀ ಅವರು ಹೇಳುವ ಘೋಷವಾಕ್ಯ 'ಸಬ್ ಕಾ ಸಾಥ್...' ಸತ್ಯ ಎಂದು ಎಲ್ಲರಿಗೂ ಮನವರಿಕೆ ಆಗಿರಬೇಕು ಎಂದು ವಿಶ್ಲೇಷಿಸಿದರು. ಇಂಡಿ ಒಕ್ಕೂಟದ ಬ್ರದರ್ಸ್‌ಗೆ ಸಿಸ್ಟರ್‌ಗಳ ಬಗ್ಗೆ ಗೌರವ ಇಲ್ಲ ಎಂದು ಟೀಕಿಸಿದರು. ಕುತಂತ್ರದಿಂದ ಮಹಿಳಾ ಮೀಸಲಾತಿ ಮಸೂದೆಗೆ ಸೋಲಾಗಿದೆ. ದಲಿತರು, ಹಿಂದುಳಿದವರನ್ನು, ಮುಸ್ಲಿಂ ಹೆಣ್ಮಕ್ಕಳನ್ನು ಕಾಂಗ್ರೆಸ್ ಪಕ್ಷ ಶೋಷಣೆ ಮಾಡಿತ್ತು ಎಂದು ಆಕ್ಷೇಪಿಸಿದರು. ಕಾಂಗ್ರೆಸ್ ಪಕ್ಷ ಇರುವುದೇ ದೇಶವನ್ನು ಪೋಷಣೆ ಮಾಡಲಿಕ್ಕಲ್ಲ. ಶೋಷಣೆ ಮಾಡಲಿಕ್ಕೆ ಎಂಬುದು ಸ್ಪಷ್ಟವಾಗಿ ಗೊತ್ತಾಗಿದೆ ಎಂದರು.

ಶೇ 50ರಷ್ಟಿರುವ ಮಹಿಳೆಯರಿಗೆ ಮೀಸಲಾತಿ ಕೊಡುವ ಕಾಂಗ್ರೆಸ್ ಪ್ರಯತ್ನವು 'ತೊಟ್ಟಿಲು ತೂಗುವುದೂ ಅವರೇ.. ಮಗುವನ್ನು ಗಿಲ್ಲುವುದು ಅವರೇ' ಎಂಬಂತಿತ್ತು ಎಂದು ದೂರಿದರು. ಮಸೂದೆಗೆ ಕಾಂಗ್ರೆಸ್, ಅವರ ಮಿತ್ರ ಪಕ್ಷಗಳಿಂದ ಆದ ಸೋಲು ದೇಶದಲ್ಲಿರುವ ಶೇ 50 ಮಹಿಳೆಯರಿಗೆ ಮಾಡಿದ ದ್ರೋಹ, ಅನ್ಯಾಯ, ಶೋಷಣೆ ಎಂದು ತಿಳಿಸಿದರು.

ಮಹಿಳಾ ಮೀಸಲಾತಿಯ ಬಿಲ್ ಸೋಲು ಕಾಂಗ್ರೆಸ್ಸಿನ ಗೆಲುವು ಎಂದು ಸಂಭ್ರಮಿಸುತ್ತಿದ್ದಾರೆ. ಬಿಜೆಪಿ, ಎನ್‌ಡಿಎಗೆ ಮುಖಭಂಗ ಎನ್ನುತ್ತಿದ್ದಾರೆ. ಇದು ಬಿಜೆಪಿಯ ಮುಖಭಂಗವೂ ಅಲ್ಲ; ಬಿಜೆಪಿಯ ಸೋಲೂ ಅಲ್ಲ. ಕಾಂಗ್ರೆಸ್ ವ್ಯವಸ್ಥಿತವಾಗಿ ಮಾಡಿಕೊಂಡು ಬಂದ ಮಹಿಳಾ ಮುಖಭಂಗವನ್ನು ಇವತ್ತೂ ಮಾಡಿದ್ದೀರಿ ಎಂದು ಟೀಕಿಸಿದರು.

ಮಹಿಳಾ ಮೀಸಲಾತಿಗೆ ಸೋಲಾಗಬೇಕೆಂಬ ನಿಮ್ಮ ಮನಸ್ಥಿತಿ ಇತ್ತು. ಆ ಸೋಲನ್ನು ಮಹಿಳೆಯರಿಗೆ ಉಣಿಸಿದ್ದೀರಿ ಎಂದು ಆಕ್ಷೇಪಿಸಿದರು. ನೀವು ಮಹಿಳಾ ಸಬಲೀಕರಣಕ್ಕಾಗಿ ಗ್ಯಾರಂಟಿ ತಂದಿದ್ದಲ್ಲವೇ?

ಮತ್ತೊಂದು ಕಡೆಯಿಂದ ಶೋಷಣೆ ಆಗುತ್ತಿದೆ. ಅವರಿಗೆ ನಿಮ್ಮ 2 ಸಾವಿರ ರೂ. ಬೇಕಾಗಿರುವುದಲ್ಲ. ಈ ದೇಶದ ಸಂಸತ್ತಿನಲ್ಲಿ ಕುಳಿತು ಕಾನೂನು ರಚನೆ, ನ್ಯಾಯನೀತಿ ನಿರೂಪಣೆಯಲ್ಲಿ ಗಂಡಸರಂತೆ ಸರ್ವರಿಗೂ ಸಮಾನ ಹಕ್ಕು ಬೇಕೆಂದು ಅವರ ಅಪೇಕ್ಷೆ. ನಿಮ್ಮ ಪುಡಿಗಾಸು, ಬಸ್ಸಿನಲ್ಲಿ ಹೋಗಲು ಅವಕಾಶ- ಇವು ಸಬಲೀಕರಣ ಅಲ್ಲ ಎಂದು ತಿಳಿಸಿದರು.

ರಾಜ್ಯದ ಮಹಿಳೆಯರೇ.. ನಿಮಗೆ ಈ ಗ್ಯಾರಂಟಿಯೇ ಸಾಕೇ?

ಸಮಾನ ಹಕ್ಕುಗಳ ಗ್ಯಾರಂಟಿ ಬೇಕೇ ಎಂದು ತೀರ್ಮಾನ ಮಾಡಿ. ಕಾಂಗ್ರೆಸ್ ಯಾವತ್ತೂ ಮಹಿಳಾಪರ ಅಲ್ಲ ಎಂದರು. ಡಾ. ಬಾಬಾ ಸಾಹೇಬರ ಪರಿಶ್ರಮದಿಂದ ಮಹಿಳೆಯರಿಗೆ ಮತದಾನದ ಹಕ್ಕು ಕೊಡಲಾಗಿತ್ತು ಎಂದು ನೆನಪಿಸಿದರು.

## *ಕರಡಿ ಜೀವಂತ ಹಿಡಿಯಲು ವಿಫಲರಾದ ಅರಣ್ಯ ಸಿಬ್ಬಂದಿ*

ಕೊರಟಗೆರೆ

*ಪಟ್ಟಣದ ಹೊರವಲಯದ ಗೌಡನಕೆರೆ ಸಮೀಪದ ರೈತರ ಜಮೀನುಗಳಲ್ಲಿ ಶನಿವಾರ ಬೆಳಿಗ್ಗೆ ಹುಚ್ಚು ಕರಡಿಯೊಂದು ಭೀತಿ ಸೃಷ್ಟಿಸಿತ್ತು. ಕರಡಿಯನ್ನು ಸೆರೆಹಿಡಿಯಲು ಅರಣ್ಯ ಇಲಾಖೆ ನಡೆಸಿದ ಹರಸಾಹಸದ ಕಾರ್ಯಾಚರಣೆಯ ಅಂತ್ಯದಲ್ಲಿ ಕರಡಿ ಮೃತಪಟ್ಟಿರುವ ಘಟನೆ ನಡೆದಿದೆ.*

*ಜಮೀನಿಗೆ ತೆರಳಿದ್ದ ರೈತರ ಮೇಲೆ ದಾಳಿಗೆ ಮುಂದಾಗಿದ್ದ ಕರಡಿಯನ್ನು ಕಂಡು ಗ್ರಾಮಸ್ಥರು ಭಯಭೀತರಾಗಿದ್ದರು. ತಕ್ಷಣ ಸ್ಥಳಕ್ಕೆ ಧಾವಿಸಿದ ಅರಣ್ಯ ಇಲಾಖೆ ಸಿಬ್ಬಂದಿಯ ಮೇಲೆಯೂ ಕರಡಿ ಏಕಾಏಕಿ ದಾಳಿ ನಡೆಸಿದೆ.*

*<u>ವಾಹನದ ಟೈರ್ ಕಚ್ಚಿ ಕಿತ್ತ ಕರಡಿ:</u> ಕಾರ್ಯಾಚರಣೆ ವೇಳೆ ರೊಚ್ಚಿಗೆದ್ದ ಕರಡಿ ಅರಣ್ಯ ಇಲಾಖೆಯ ವಾಹನದ ಮೇಲೆ ಹಾರಿ ತನ್ನ ಚೂಪಾದ ಉಗುರು ಮತ್ತು ಹಲ್ಲುಗಳಿಂದ ವಾಹನದ ಟೈರ್‌ಗಳನ್ನು ಕಿತ್ತುಹಾಕಲು ಪ್ರಯತ್ನಿಸಿದೆ. ಈ ಸಂದರ್ಭದಲ್ಲಿ ವಾಹನದೊಳಗಿದ್ದ ಸಿಬ್ಬಂದಿಗಳು ಕೆಲಕಾಲ ಆತಂಕದಲ್ಲಿ ಕಳೆದರೂ, ನಂತರ ಸುರಕ್ಷಿತವಾಗಿ ಹೊರಬಂದು ಪ್ರಾಣಾಪಾಯದಿಂದ ಪಾರಾಗಿದ್ದಾರೆ.*

*<u>ಶೆಡ್‌ನಲ್ಲಿ ಬಂಧನ - ಅರವಳಿಕೆ ನಂತರ ಸಾವು:</u> ಸಿಬ್ಬಂದಿಗಳು ಕರಡಿಯನ್ನು ಹಿಂಬಾಲಿಸಿ ಸಮೀಪದ ಶೆಡ್‌ವೊಂದರಲ್ಲಿ ಕೂಡಿಹಾಕುವಲ್ಲಿ ಯಶಸ್ವಿಯಾದರು. ಬಳಿಕ ಅರವಳಿಕೆ ತಜ್ಞರು ಬಂದೂಕಿನ ಮೂಲಕ ಚುಚ್ಚುಮದ್ದು ನೀಡಿದರು. ಆದರೆ, ಮದ್ದು ನೀಡಿದ ಹತ್ತು ನಿಮಿಷಗಳ ನಂತರ ಪರಿಶೀಲಿಸಿದಾಗ ಕರಡಿ ಮೃತಪಟ್ಟಿರುವುದು ದೃಢಪಟ್ಟಿದೆ.*

*"ಕರಡಿಗೆ ಮೊದಲೇ ಹುಚ್ಚು ಲಕ್ಷಣಗಳು ಕಾಣಿಸಿಕೊಂಡಿದ್ದವು, ಅದೇ ಕಾರಣದಿಂದ ಸಾವು ಸಂಭವಿಸಿರುವ ಸಾಧ್ಯತೆಯಿದೆ" ಎಂದು ಪಶುವೈದ್ಯಾಧಿಕಾರಿಗಳು ಪ್ರಾಥಮಿಕ ಅಂದಾಜು ಮಾಡಿದ್ದಾರೆ.*

*<u>ಸ್ಥಳಕ್ಕೆ ಅಧಿಕಾರಿಗಳ ಭೇಟಿ:</u> ಘಟನಾ ಸ್ಥಳಕ್ಕೆ ತಹಶೀಲ್ದಾರ್ ಮಂಜುನಾಥ್, ಡಿಎಫ್‌ಒ ಶಶಿಧರ್, ಎಸಿಎಫ್ ಮಲ್ಲಿಕಾರ್ಜುನ್, ಆರ್‌ಎಫ್‌ಒ ಹನುಮಂತರಾಜು ಸೇರಿದಂತೆ ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಭೇಟಿ ನೀಡಿದ್ದರು. ಅಧಿಕಾರಿಗಳ ಸಮ್ಮುಖದಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಗಿದ್ದು, ವರದಿ ಬಂದ ನಂತರವಷ್ಟೇ ಸಾವಿಗೆ ನಿಖರ ಕಾರಣ ತಿಳಿಯಲಿದೆ ಎಂದು ಇಲಾಖೆ ತಿಳಿಸಿದೆ.*

*ಪಟ್ಟಣದ ಹೊರವಲಯದ ಗೌಡನಕೆರೆ ಸಮೀಪದ ರೈತರ ಜಮೀನುಗಳಲ್ಲಿ ಶನಿವಾರ ಬೆಳಿಗ್ಗೆ ಹುಚ್ಚು ಕರಡಿಯೊಂದು ಭೀತಿ ಸೃಷ್ಟಿಸಿತ್ತು. ಕರಡಿಯನ್ನು ಸೆರೆಹಿಡಿಯಲು ಅರಣ್ಯ ಇಲಾಖೆ ನಡೆಸಿದ ಹರಸಾಹಸದ ಕಾರ್ಯಾಚರಣೆಯ ಅಂತ್ಯದಲ್ಲಿ ಕರಡಿ ಮೃತಪಟ್ಟಿರುವ ಘಟನೆ ನಡೆದಿದೆ.*

*ಜಮೀನಿಗೆ ತೆರಳಿದ್ದ ರೈತರ ಮೇಲೆ ದಾಳಿಗೆ ಮುಂದಾಗಿದ್ದ ಕರಡಿಯನ್ನು ಕಂಡು ಗ್ರಾಮಸ್ಥರು ಭಯಭೀತರಾಗಿದ್ದರು. ತಕ್ಷಣ ಸ್ಥಳಕ್ಕೆ ಧಾವಿಸಿದ ಅರಣ್ಯ ಇಲಾಖೆ ಸಿಬ್ಬಂದಿಯ ಮೇಲೆಯೂ ಕರಡಿ ಏಕಾಏಕಿ ದಾಳಿ ನಡೆಸಿದೆ.*

*<u>ವಾಹನದ ಟೈರ್ ಕಚ್ಚಿ ಕಿತ್ತ ಕರಡಿ:</u> ಕಾರ್ಯಾಚರಣೆ ವೇಳೆ ರೊಚ್ಚಿಗೆದ್ದ ಕರಡಿ ಅರಣ್ಯ ಇಲಾಖೆಯ ವಾಹನದ ಮೇಲೆ ಹಾರಿ ತನ್ನ ಚೂಪಾದ ಉಗುರು ಮತ್ತು ಹಲ್ಲುಗಳಿಂದ ವಾಹನದ ಟೈರ್‌ಗಳನ್ನು ಕಿತ್ತುಹಾಕಲು ಪ್ರಯತ್ನಿಸಿದೆ. ಈ ಸಂದರ್ಭದಲ್ಲಿ ವಾಹನದೊಳಗಿದ್ದ ಸಿಬ್ಬಂದಿಗಳು ಕೆಲಕಾಲ ಆತಂಕದಲ್ಲಿ ಕಳೆದರೂ, ನಂತರ ಸುರಕ್ಷಿತವಾಗಿ ಹೊರಬಂದು ಪ್ರಾಣಾಪಾಯದಿಂದ ಪಾರಾಗಿದ್ದಾರೆ.*

*<u>ಶೆಡ್‌ನಲ್ಲಿ ಬಂಧನ - ಅರವಳಿಕೆ ನಂತರ ಸಾವು:</u> ಸಿಬ್ಬಂದಿಗಳು ಕರಡಿಯನ್ನು ಹಿಂಬಾಲಿಸಿ ಸಮೀಪದ ಶೆಡ್‌ವೊಂದರಲ್ಲಿ ಕೂಡಿಹಾಕುವಲ್ಲಿ ಯಶಸ್ವಿಯಾದರು. ಬಳಿಕ ಅರವಳಿಕೆ ತಜ್ಞರು ಬಂದೂಕಿನ ಮೂಲಕ ಚುಚ್ಚುಮದ್ದು ನೀಡಿದರು. ಆದರೆ, ಮದ್ದು ನೀಡಿದ ಹತ್ತು ನಿಮಿಷಗಳ ನಂತರ ಪರಿಶೀಲಿಸಿದಾಗ ಕರಡಿ ಮೃತಪಟ್ಟಿರುವುದು ದೃಢಪಟ್ಟಿದೆ.ಜಮೀನಿಗೆ ತೆರಳಿದ್ದ ರೈತರ ಮೇಲೆ ದಾಳಿಗೆ ಮುಂದಾಗಿದ್ದ ಕರಡಿಯನ್ನು ಕಂಡು ಗ್ರಾಮಸ್ಥರು ಭಯಭೀತರಾಗಿದ್ದರು. ತಕ್ಷಣ ಸ್ಥಳಕ್ಕೆ ಧಾವಿಸಿದ ಅರಣ್ಯ ಇಲಾಖೆ ಸಿಬ್ಬಂದಿಯ ಮೇಲೆಯೂ ಕರಡಿ ಏಕಾಏಕಿ ದಾಳಿ ನಡೆಸಿದೆ.*


*<u>ವಾಹನದ ಟೈರ್ ಕಚ್ಚಿ ಕಿತ್ತ ಕರಡಿ:</u> ಕಾರ್ಯಾಚರಣೆ ವೇಳೆ ರೊಚ್ಚಿಗೆದ್ದ ಕರಡಿ ಅರಣ್ಯ ಇಲಾಖೆಯ ವಾಹನದ ಮೇಲೆ ಹಾರಿ ತನ್ನ ಚೂಪಾದ ಉಗುರು ಮತ್ತು ಹಲ್ಲುಗಳಿಂದ ವಾಹನದ ಟೈರ್‌ಗಳನ್ನು ಕಿತ್ತುಹಾಕಲು ಪ್ರಯತ್ನಿಸಿದೆ. ಈ ಸಂದರ್ಭದಲ್ಲಿ ವಾಹನದೊಳಗಿದ್ದ ಸಿಬ್ಬಂದಿಗಳು ಕೆಲಕಾಲ ಆತಂಕದಲ್ಲಿ ಕಳೆದರೂ, ನಂತರ ಸುರಕ್ಷಿತವಾಗಿ ಹೊರಬಂದು ಪ್ರಾಣಾಪಾಯದಿಂದ ಪಾರಾಗಿದ್ದಾರೆ.*

*<u>ಶೆಡ್‌ನಲ್ಲಿ ಬಂಧನ - ಅರವಳಿಕೆ ನಂತರ ಸಾವು:</u> ಸಿಬ್ಬಂದಿಗಳು ಕರಡಿಯನ್ನು ಹಿಂಬಾಲಿಸಿ ಸಮೀಪದ ಶೆಡ್‌ವೊಂದರಲ್ಲಿ ಕೂಡಿಹಾಕುವಲ್ಲಿ ಯಶಸ್ವಿಯಾದರು. ಬಳಿಕ ಅರವಳಿಕೆ ತಜ್ಞರು ಬಂದೂಕಿನ ಮೂಲಕ ಚುಚ್ಚುಮದ್ದು ನೀಡಿದರು. ಆದರೆ, ಮದ್ದು ನೀಡಿದ ಹತ್ತು ನಿಮಿಷಗಳ ನಂತರ ಪರಿಶೀಲಿಸಿದಾಗ ಕರಡಿ ಮೃತಪಟ್ಟಿರುವುದು ದೃಢಪಟ್ಟಿದೆ. "ಕರಡಿಗೆ ಮೊದಲೇ ಹುಚ್ಚು ಲಕ್ಷಣಗಳು ಕಾಣಿಸಿಕೊಂಡಿದ್ದವು, ಅದೇ ಕಾರಣದಿಂದ ಸಾವು ಸಂಭವಿಸಿರುವ ಸಾಧ್ಯತೆಯಿದೆ" ಎಂದು ಪಶುವೈದ್ಯಾಧಿಕಾರಿಗಳು ಪ್ರಾಥಮಿಕ ಅಂದಾಜು ಮಾಡಿದ್ದಾರೆ.*

*ಮಂಜುನಾಥ್, ಡಿಎಫ್‌ಒ ಶಶಿಧರ್, ಎಸಿಎಫ್ ಮಲ್ಲಿಕಾರ್ಜುನ್, ಆರ್‌ಎಫ್‌ಒ ಹನುಮಂತರಾಜು ಸೇರಿದಂತೆ ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಭೇಟಿ ನೀಡಿದ್ದರು. ಅಧಿಕಾರಿಗಳ ಸಮ್ಮುಖದಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಗಿದ್ದು, ವರದಿ ಬಂದ ನಂತರವಷ್ಟೇ ಸಾವಿಗೆ ನಿಖರ ಕಾರಣ ತಿಳಿಯಲಿದೆ ಎಂದು ಇಲಾಖೆ ತಿಳಿಸಿದೆ.*

ಭಾರತ ಸಾರಥಿ
21/04/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಕಾಡಾನೆಗಳ ದಾಳಿಗೆ ತೆಂಗಿನ ತೋಟ ಫಿನಿಶ್!



ಕನಕಪುರ

ತಾಲ್ಲೂಕಿನ ಕೋಡಿಹಳ್ಳಿ ಹೋಬಳಿಯ ಗಡಿ ಅಂಚಿನ ಗ್ರಾಮಗಳಲ್ಲಿ ಕಾಡಾನೆಗಳ ಹಾವಳಿ ಮುಂದುವರಿದಿದ್ದು, ಅರೆಕೊಪ್ಪ ಗ್ರಾಮದಲ್ಲಿ ರೈತನೊಬ್ಬನ ತೆಂಗಿನ ತೋಟದ ಮೇಲೆ ದಾಳಿ ನಡೆಸಿರುವ ಆನೆಗಳ ಹಿಂಡು ಲಕ್ಷಾಂತರ ರೂಪಾಯಿ ಮೌಲ್ಯದ ಬೆಳೆ ನಾಶಪಡಿಸಿದೆ.

ಸಿದ್ದರಾಮೇಗೌಡ ಎಂಬುವರಿಗೆ ಸೇರಿದ ಜಮೀನಿಗೆ ಶುಕ್ರವಾರ ರಾತ್ರಿ ಲಗ್ಗೆ ಇಟ್ಟ ಕಾಡಾನೆಗಳು, ಫಲಕ್ಕೆ ಬಂದಿದ್ದ ನೂರಾರು ತೆಂಗಿನ ಮರಗಳನ್ನು ಧರಾಶಾಹಿ ಮಾಡಿವೆ. ವರ್ಷಗಳ ಕಾಲ ಕಷ್ಟಪಟ್ಟು ಬೆಳೆಸಿದ್ದ ತೆಂಗಿನ ಮರಗಳು ಆನೆಗಳ ಪಾಲಾಗಿರುವುದನ್ನು ಕಂಡು ರೈತ ಕಣ್ಣೀರು ಹಾಕುತ್ತಿದ್ದಾರೆ. ಕಳೆದ ಕೆಲವು ದಿನಗಳಿಂದ ಈ ಭಾಗದಲ್ಲಿ ಆನೆಗಳ ಹಿಂಡು ಬೀಡುಬಿಟ್ಟಿದ್ದು, ರೈತರು ರಾತ್ರಿ ವೇಳೆ ಹೊಲಗಳಿಗೆ ಹೋಗಲು ಭಯಪಡುವಂತಾಗಿದೆ. "ಸಾಲಸೋಲ ಮಾಡಿ ಬೆಳೆ ಬೆಳೆದಿದ್ದೆವು, ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ" ಎಂದು ಸಿದ್ದರಾಮೇಗೌಡ ಅಳಲು ತೋಡಿಕೊಂಡಿದ್ದಾರೆ. ದಾಳಿಯಿಂದ ಕಂಗಾಲಾಗಿರುವ ಗ್ರಾಮಸ್ಥರು ಅರಣ್ಯ ಇಲಾಖೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. "ಅರಣ್ಯ ಅಧಿಕಾರಿಗಳು ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಆನೆಗಳನ್ನು ಕಾಡಿಗೆ ಅಟ್ಟಲು ಶಾಶ್ವತ ಕ್ರಮ ಕೈಗೊಳ್ಳುವುದರ ಜೊತೆಗೆ, ನಷ್ಟ ಅನುಭವಿಸಿರುವ ಸಿದ್ದರಾಮೇಗೌಡ ಅವರಿಗೆ ಸರ್ಕಾರದಿಂದ ಸೂಕ್ತ ಪರಿಹಾರ ಕೊಡಿಸಬೇಕು" ಎಂದು

## ವಿಬಿಜಿ ರಾಮ್‌ಜಿ ಕಾಯ್ದೆ ರದ್ದಿಗೆ ಒತ್ತಾಯ: ಮೇ 15ಕ್ಕೆ ಪ್ರತಿಭಟನೆ

ಚಿಕ್ಕಬಳ್ಳಾಪುರ

ಬಡವರ ಬದುಕಿಗೆ ಮಾರಕವಾಗಿರುವ 'ವಿಬಿಜಿ ರಾಮ್‌ಜಿ' ಕಾಯ್ದೆಯನ್ನು ರದ್ದುಪಡಿಸಬೇಕು ಮತ್ತು ನರೇಗಾ ಯೋಜನೆಯಡಿ ಕೂಲಿ ಹೆಚ್ಚಿಸಬೇಕು ಎಂಬಿತ್ಯಾದಿ ಪ್ರಮುಖ ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ಮೇ 15ರಂದು ಜಿಲ್ಲೆಯಾದ್ಯಂತ ಎಲ್ಲಾ ಗ್ರಾಮ ಪಂಚಾಯಿತಿಗಳ ಮುಂದೆ ಪ್ರತಿಭಟನೆ ನಡೆಸಲು ಕರ್ನಾಟಕ ಕೃಷಿ ಮತ್ತು ಗ್ರಾಮೀಣ ಕಾರ್ಮಿಕರ ಸಂಘ ನಿರ್ಧರಿಸಿದೆ.

ನಗರದ ಸಿಪಿಐಎಂ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಸಂಘದ ಜಿಲ್ಲಾಧ್ಯಕ್ಷ ಎಂ.ಪಿ. ಮುನಿವೆಂಕಟಪ್ಪ, "ಇತ್ತೀಚೆಗೆ ಗುಡಿಬಂಡೆಯಲ್ಲಿ ನಡೆದ ಜಿಲ್ಲಾ ಸಮ್ಮೇಳನದಲ್ಲಿ ಕಾರ್ಮಿಕರ ಹಿತದೃಷ್ಟಿಯಿಂದ ಪ್ರಮುಖ ನಿರ್ಣಯಗಳನ್ನು ಕೈಗೊಳ್ಳಲಾಗಿದೆ. ಅದರಂತೆ ಮೊದಲ ಹಂತವಾಗಿ ಮೇ 15ರಂದು ಬೃಹತ್ ಚಳುವಳಿ



ಹಮ್ಮಿಕೊಳ್ಳಲಾಗುವುದು," ಎಂದರು.

ಪ್ರಮುಖ ಬೇಡಿಕೆಗಳು ಇಲ್ಲಿವೆ:

ನರೇಗಾ ಪುನರ್ ಸ್ಥಾಪಿಸಿ: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯನ್ನು ಹಳ್ಳ ಹಿಡಿಸುತ್ತಿರುವ ಕೇಂದ್ರದ ನೀತಿಗಳನ್ನು ಕೈಬಿಟ್ಟು, ಅದನ್ನು ಮರುಸ್ಥಾಪಿಸಬೇಕು.

ಕೂಲಿ ಹೆಚ್ಚಳ: ವಾರ್ಷಿಕ 200 ದಿನಗಳ ಕೆಲಸ ನೀಡಬೇಕು ಮತ್ತು ದಿನಗೂಲಿಯನ್ನು 800 ರೂಪಾಯಿಗೆ ಏರಿಸಬೇಕು.

ಶಾಶ್ವತ ನೀರಾವರಿ: ಜಿಲ್ಲೆಯ ಜನರ ಬಾಯಾರಿಕೆ ನೀಗಿಸಲು ಕೃಷ್ಣಾ ನದಿಯ ನೀರನ್ನು ಜಿಲ್ಲೆಗೆ ಹರಿಸುವ ನಿಟ್ಟಿನಲ್ಲಿ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು.

ಅಮೆರಿಕದೊಂದಿಗಿನ ವಾಣಿಜ್ಯ ಒಪ್ಪಂದಕ್ಕೆ ವಿರೋಧ: ಕೇಂದ್ರ ಸರ್ಕಾರವು ಅಮೆರಿಕದೊಂದಿಗೆ ಮಾಡಿಕೊಂಡಿರುವ ವಾಣಿಜ್ಯ ಒಪ್ಪಂದದಿಂದ ಜಿಲ್ಲೆಯ ಹೈನುಗಾರಿಕೆ ಮತ್ತು ಜೋಳ ಬೆಳೆಯುವ ರೈತರಿಗೆ ಭಾರಿ ಹೊಡೆತ ಬೀಳಲಿದೆ ಎಂದು ಸಂಘ ಆತಂಕ ವ್ಯಕ್ತಪಡಿಸಿದೆ. ಈ ಒಪ್ಪಂದದಿಂದಾಗಿ ಸ್ಥಳೀಯ ಮಾರುಕಟ್ಟೆ ನಾಶವಾಗಿ ಬಡ ರೈತರು ಸಂಕಷ್ಟಕ್ಕೆ ಸಿಲುಕಲಿದ್ದಾರೆ ಎಂದು ಮುನಿವೆಂಕಟಪ್ಪ ದೂರಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯದಂತೆ ಉದ್ಯೋಗವು ಮೂಲಭೂತ ಹಕ್ಕಾಗಬೇಕು. ಆದರೆ ಕೇಂದ್ರ ಸರ್ಕಾರವು ಬಡವರ ಆರ್ಥಿಕ ಸ್ಥಿತಿಯನ್ನು ಸುಧಾರಿಸುತ್ತಿದ್ದ ಯೋಜನೆಗಳಿಗೆ ಕುತ್ತು ತರುತ್ತಿದೆ ಎಂದು ಸಂಘದ ಪದಾಧಿಕಾರಿಗಳು ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾ ಕಾರ್ಯದರ್ಶಿ ಕೆ. ಮುನಿಯಪ್ಪ ಮಾತನಾಡಿ, "ಕಳೆದ ಜಿಲ್ಲಾ ಸಮ್ಮೇಳನದಲ್ಲಿ ಒಟ್ಟು 25 ನಿರ್ಣಯಗಳನ್ನು ಅಂಗೀಕರಿಸಲಾಗಿದೆ. ಮಹಿಳೆಯರ ಮೇಲಿನ ದೌರ್ಜನ್ಯ ತಡೆ, ದಲಿತರ ರಕ್ಷಣೆ, ಮತ್ತು ಹಾಸ್ಟೆಲ್ ನೌಕರರು ಹಾಗೂ ಗ್ರಾಮೀಣ ಕಾರ್ಮಿಕರಿಗೆ ಕನಿಷ್ಠ ವೇತನ ಕಲ್ಪಿಸುವ ನಿಟ್ಟಿನಲ್ಲಿ ಮುಂದಿನ ಮೂರು ವರ್ಷಗಳ ಕಾಲ ಹಂತ ಹಂತವಾಗಿ ಹೋರಾಟ ನಡೆಸಲಾಗುವುದು," ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಉಪಾಧ್ಯಕ್ಷ ಜಿ. ಕೃಷ್ಣಪ್ಪ, ಉತ್ತಣ್ಣ, ಸಹ ಕಾರ್ಯದರ್ಶಿಗಳಾದ ರವಿಕುಮಾರ್, ಸೋಮಶೇಖರ್, ಮಂಜುನಾಥ್ ಹಾಗೂ ಜಿಹಿರ್ ಬೇಗ್ ಉಪಸ್ಥಿತರಿದ್ದರು.

## 'ಹೆಣಗಳ ಮೇಲೆ ಹಣ ಮಾಡಿದವರಿಗೆ ರೈತರ ಬಗ್ಗೆ ಮಾತಾಡುವ ಹಕ್ಕಿಲ್ಲ'

ಶಿಡ್ಲಘಟ್ಟ



"ನನ್ನ ಕ್ಷೇತ್ರದ ಸ್ವಾಭಿಮಾನಿ ಮತದಾರರ ಬಗ್ಗೆ ಮಾತನಾಡುವಾಗ ಪ್ರಜ್ಞೆ ಇರಲಿ. ನಿಮ್ಮ ಅವಧಿಯಲ್ಲಿ ನಡೆದ ಅಕ್ರಮಗಳ ಎಲ್ಲಾ ದಾಖಲೆಗಳ ಸಮೇತ ನಾನು ಜಿಲ್ಲಾಧಿಕಾರಿ ಕಚೇರಿಗೆ ಬರುತ್ತೇನೆ, ಧೈರ್ಯವಿದ್ದರೆ ಬಹಿರಂಗ ಚರ್ಚೆಗೆ ಬನ್ನಿ" ಎಂದು ಚಿಕ್ಕಬಳ್ಳಾಪುರ ಸಂಸದ ಡಾ. ಕೆ. ಸುಧಾಕರ್ ಅವರಿಗೆ ಶಾಸಕ ಬಿ.ಎನ್. ರವಿಕುಮಾರ್ ನೇರ ಪಂಥಾಹ್ವಾನ ನೀಡಿದ್ದಾರೆ.

ಮೇಲೂರಿನ ತಮ್ಮ ಗೃಹ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಸದರ ವಿರುದ್ಧ ವಾಗ್ದಾಳಿ ನಡೆಸುತ್ತಾ ಹಲವು ಗಂಭೀರ ಆರೋಪಗಳನ್ನು ಮಾಡಿದರು.

ಲೂಟಿ ಮಾಡಿದ ಹಣದ ಲೆಕ್ಕ ಕೊಡಿ:

ಸುಧಾಕರ್ ವಿರುದ್ಧ ಆಕ್ರೋಶ ಹೊರಹಾಕಿದ ಶಾಸಕರು, "ಹೆಚ್.ಎನ್. ವ್ಯಾಲಿ ಯೋಜನೆ, ನಂದಿ ಮೆಡಿಕಲ್ ಕಾಲೇಜು, ನಾರ್ತ್ ಯೂನಿವರ್ಸಿಟಿ ಹಾಗೂ ಸಾದಲಿಯಲ್ಲಿ ಆಂಧ್ರದವರಿಂದ ಪಡೆದ ಲಂಚದ ಬಗ್ಗೆ ನನ್ನ ಬಳಿ ದಾಖಲೆಗಳಿವೆ. ಪುರಭೈರದೇನಹಳ್ಳಿ ಸರ್ವೆ ನಂಬರ್ ವಿಚಾರದಲ್ಲಿ ನಡೆದ ಲೂಟಿಯ ಬಗ್ಗೆಯೂ ನಾನು ಬಹಿರಂಗವಾಗಿ ದಾಖಲೆ ನೀಡುತ್ತೇನೆ" ಎಂದು ಗುಡುಗಿದರು.

ಮೋದಿ, ದೇವೇಗೌಡರ ಹೆಸರಲ್ಲಿ ಗೆದ್ದಿದ್ದೀರಿ:

"ಕಳೆದ ಲೋಕಸಭಾ ಚುನಾವಣೆಯಲ್ಲಿ ಪ್ರಧಾನಿ ಮೋದಿ ಮತ್ತು ಹೆಚ್.ಡಿ. ದೇವೇಗೌಡರ ಮುಖ ನೋಡಿ ಜನರು ನಿಮಗೆ ಮತ ನೀಡಿದ್ದಾರೆಯೇ ಹೊರತು, ನಿಮ್ಮ ಸಾಧನೆ ನೋಡಿಯಲ್ಲ. ಮೂರು ಬಾರಿ ಶಾಸಕರಾಗಿ, ಸಚಿವರಾಗಿದ್ದರೂ ಹೇಗೆ ಮಾತನಾಡಬೇಕೆಂಬ ಅರಿವಿಲ್ಲದಿರುವುದು ವಿಷಾದನೀಯ" ಎಂದು ಟೀಕಿಸಿದರು.

ಪ್ರಮುಖ ಆರೋಪಗಳು ಮತ್ತು ಎಚ್ಚರಿಕೆ:

ಕೋವಿಡ್ ಅಕ್ರಮ:

"ಸರ್ಕಾರಿ ಅಧಿಕಾರಿಗಳು ಜೈಲಿಗೆ ಹೋಗುತ್ತಾರೆಂಬ ಕಾರಣಕ್ಕೆ ನೀವು ಕೋವಿಡ್ ಹಗರಣದ ವರದಿ ಬಹಿರಂಗವಾಗದಂತೆ ನೋಡಿಕೊಂಡಿದ್ದೀರಿ. ಮುಂದೆ ಕುಮಾರಣ್ಣ ಮುಖ್ಯಮಂತ್ರಿಯಾದಾಗ ವರದಿ ಹೊರಬೀಳಲಿದೆ, ನಿಮ್ಮನ್ನು ಜೈಲಿಗೆ ಕಳುಹಿಸುವುದು ಖಚಿತ" ಎಂದರು.

ನೀರಿನ ಯೋಜನೆ:

"ಬಯಲುಸೀಮೆಯ ನೀರಿನ ಬಗ್ಗೆ ನಿಮಗೆ ಕಾಳಜಿಯಿಲ್ಲ. ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹಾಗೂ ಸಂಸದ ಮಲ್ಲೇಶ್ ಬಾಬು ಅವರು ಕೃಷ್ಣಾ ಮೇಲ್ದಂಡೆ ಯೋಜನೆಯಡಿ ನೀರು ತರಲು ಪ್ರಯತ್ನಿಸುತ್ತಿದ್ದಾರೆ. ನೀವೇನು ಮಾಡಿದ್ದೀರಿ?" ಎಂದು ಪ್ರಶ್ನಿಸಿದರು.

ದೌರ್ಜನ್ಯದ ರಾಜಕಾರಣ:

"ಸಚಿವ ಡಾ. ಎಂ.ಸಿ. ಸುಧಾಕರ್ ಅವರ ಸಜ್ಜನಿಕೆಯ ರಾಜಕಾರಣ ನೋಡಿ ಕಲಿಯಿರಿ. ಜನರ ಮೇಲೆ ಕೇಸು ಹಾಕಿಸಿ, ದೌರ್ಜನ್ಯ ನಡೆಸುವುದೇ ನಿಮ್ಮ ಕೆಲಸ" ಎಂದು ಆಕ್ರೋಶ ವ್ಯಕ್ತಪಡಿಸಿದರು.

"ನಾನು ವ್ಯವಸಾಯ ಮಾಡಿಕೊಂಡಿರುವವನು, ದೇವೇಗೌಡರ ಮೇಲಿನ ಅಭಿಮಾನಕ್ಕೆ ರಾಜಕಾರಣ ಮಾಡುತ್ತಿದ್ದೇನೆ. ನಿಮ್ಮ ಅಕ್ರಮಗಳ ಬಗ್ಗೆ ಅಂಕಿ-ಅಂಶಗಳ ಸಮೇತ ದಾಖಲೆ ನೀಡಲು ಸಿದ್ಧನಿದ್ದೇನೆ" ಎಂದು ರವಿಕುಮಾರ್ ಸವಾಲು ಹಾಕಿದರು.

## ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ರೈತನ ಪರದಾಟ



ಬೂದಿಕೋಟೆ

ವಡಗೇರಿ ಗ್ರಾಮದ ನಂಜಪ್ಪ ಎಂಬುವರಿಗೆ ಸೇರಿದ 4.5 ಎಕರೆ ಜಮೀನಿನ ಎಲ್ಲಾ ದಾಖಲೆಗಳು ಸರಿಯಿದ್ದರೂ, ಹದ್ದುಬಸ್ತು ಮಾಡಿಕೊಡಲು ಎಡಿಎಲ್‌ಆರ್ ಅಧಿಕಾರಿಗಳು ಮೀನಾಮೇಷ ಎಣಿಸುತ್ತಿದ್ದಾರೆ. ಈ ಕೂಡಲೇ ಕ್ರಮ ಕೈಗೊಳ್ಳದಿದ್ದರೆ ಲೋಕಾಯುಕ್ತಕ್ಕೆ ದೂರು ನೀಡಲಾಗುವುದು ಎಂದು ಕರ್ನಾಟಕ ರಿಪಬ್ಲಿಕನ್ ಸಂಘಟನೆಯ ರಾಜ್ಯಾಧ್ಯಕ್ಷ ಜಿ. ಚಿಕ್ಕನಾರಾಯಣ ಎಚ್ಚರಿಸಿದ್ದಾರೆ.

ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆಯಿಂದ ರೈತರಿಗೆ ಆಗುತ್ತಿರುವ ಅನ್ಯಾಯವನ್ನು ಖಂಡಿಸಿದರು.

ಪ್ರಕರಣದ ಹಿನ್ನೆಲೆ:

ವಡಗೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರ್ವೆ ನಂ. 152 (ಹೊಸದು 152/2) ರಲ್ಲಿರುವ 4.5 ಎಕರೆ ಜಮೀನನ್ನು ನಂಜಪ್ಪ ಅವರು 14 ವರ್ಷಗಳ ಹಿಂದೆ ಮುನಿರಾಜು ಎಂಬುವರಿಂದ ಜಿಪಿಎ ಮೂಲಕ ಪಡೆದಿದ್ದರು. ಅಂದಿನಿಂದ ಇಂದಿನವರೆಗೆ ನಂಜಪ್ಪ ಅವರೇ ಜಮೀನಿನ ಸ್ವಾಧೀನದಲ್ಲಿದ್ದು, ಬಾವಿ ತೋಡಿಸಿ, ಡ್ರಿಪ್ ಇರಿಗೇಷನ್ ಅಳವಡಿಸಿ ಕೃಷಿ ಮಾಡುತ್ತಿದ್ದಾರೆ.

ಆದರೆ, ಇತ್ತೀಚೆಗೆ ಮೂಲ ಮಾಲೀಕ ಮುನಿರಾಜು ಅವರು ಜಮೀನು ತಮ್ಮದೆಂದು ತಹಶೀಲ್ದಾರ್ ಕಚೇರಿಯಲ್ಲಿ ಕೇಸ್ ದಾಖಲಿಸಿದ್ದರು. ಆದರೆ ನ್ಯಾಯಾಲಯಕ್ಕೆ ಹಾಜರಾಗದ ಹಿನ್ನೆಲೆಯಲ್ಲಿ ಈ ಪ್ರಕರಣ ಎಸಿ ಕಚೇರಿಗೆ ವರ್ಗಾವಣೆಯಾಗಿತ್ತು. ಮೂರ್ನಾಲ್ಕು ವರ್ಷಗಳ ಸುದೀರ್ಘ ವಿಚಾರಣೆಯ ನಂತರ ಸಹಾಯಕ ಕಮಿಷನರ್ ಅವರು ನಂಜಪ್ಪ ಅವರ ಪರವಾಗಿ ಆದೇಶ ನೀಡಿದ್ದಾರೆ.

ಅಧಿಕಾರಿಗಳ ವಿಳಂಬ ನೀತಿಗೆ ಆಕ್ರೋಶ:

"ಎಸಿ ಕಚೇರಿಯಿಂದ ನಂಜಪ್ಪ ಅವರ ಪರವಾಗಿ ಸ್ಪಷ್ಟ ಆದೇಶ ಬಂದಿದ್ದರೂ, ಬಂಗಾರಪೇಟೆ ತಾಲೂಕು ಸರ್ವೆ ಅಧಿಕಾರಿಗಳು ಹದ್ದುಬಸ್ತು ಮಾಡಲು ವಿಳಂಬ ಮಾಡುತ್ತಿದ್ದಾರೆ. ಪಹಣಿ, ಮ್ಯೂಟೇಶನ್, ಸ್ಕೆಚ್ ಸೇರಿದಂತೆ ಎಲ್ಲಾ ದಾಖಲೆಗಳು ನಂಜಪ್ಪ ಅವರ ಹೆಸರಿನಲ್ಲಿವೆ. ಆದರೂ ಅಧಿಕಾರಿಗಳು ಕೆಲಸ ಮಾಡುತ್ತಿಲ್ಲ," ಎಂದು ಚಿಕ್ಕನಾರಾಯಣ ದೂರಿದರು.

ಲೋಕಾಯುಕ್ತ ತನಿಖೆಗೆ ಆಗ್ರಹ:

ದಾಖಲೆಗಳನ್ನು ಪರಿಶೀಲಿಸಿ ತಕ್ಷಣವೇ ಹದ್ದುಬಸ್ತು ಮಾಡಿಕೊಡಬೇಕು. ಇಲ್ಲವಾದಲ್ಲಿ ಎಡಿಎಲ್‌ಆರ್ ವಿರುದ್ಧ ಲೋಕಾಯುಕ್ತದಲ್ಲಿ ಭ್ರಷ್ಟಾಚಾರ ಮತ್ತು ಕರ್ತವ್ಯ ಲೋಪದ ದೂರು ದಾಖಲಿಸಿ, ಉಗ್ರ ಹೋರಾಟ ರೂಪಿಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಜಮೀನು ಮಾಲೀಕ ನಂಜಪ್ಪ, ಬಿಎಸ್‌ಪಿ ಜಿಲ್ಲಾಧ್ಯಕ್ಷ ಅಮರೇಶ್, ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ನಾರಾಯಣ್ ಹಾಗೂ ದಲಿತ ನಾಯಕ ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

## 'ಹಳ್ಳಿಗಳಲ್ಲಿ ನೀರಿನ ಸಮಸ್ಯೆ ಎದುರಾದರೆ ಅಧಿಕಾರಿಗಳೇ ಹೊಣೆ'

ಬೂದಿಕೋಟೆ

"ಗ್ರಾಮ ಮಟ್ಟದಲ್ಲಿ ಸಾರ್ವಜನಿಕರ ಸಮಸ್ಯೆಗಳಿಗೆ ಅಧಿಕಾರಿಗಳು ತಕ್ಷಣ ಸ್ಪಂದಿಸಬೇಕು. ಅದರಲ್ಲೂ ಕುಡಿಯುವ ನೀರಿನ ಸಮಸ್ಯೆ ತಲೆದೋರಿದಾಗ ಪತ್ರ ವ್ಯವಹಾರಗಳಿಗೆ ಕಾಯದೆ, ಸಮರೋಪಾದಿಯಲ್ಲಿ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು," ಎಂದು ಕೋಲಾರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಸಿಇಒ) ಪ್ರವೀಣ್ ಪಿ. ಬಾಗೇವಾಡಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಆಯೋಜಿಸಿದ್ದ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿಗಳು, ಪಿಡಿಒಗಳು ಹಾಗೂ ಕಾರ್ಯದರ್ಶಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನೀರಿಗಾಗಿ ಪ್ರತಿಭಟನೆ ನಡೆಸುವಂತೆ ಮಾಡಬೇಡಿ:

"ಬೇಸಿಗೆಯ ಪ್ರಖರತೆ ಹೆಚ್ಚುತ್ತಿರುವುದರಿಂದ ಹಳ್ಳಿಗಳಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಕೊಳವೆಬಾವಿ ಕೆಟ್ಟರೆ ಅಥವಾ ಪೈಪ್‌ಲೈನ್ ಒಡೆದರೆ ಸಾರ್ವಜನಿಕರು ಬೀದಿಗಿಳಿದು ಪ್ರತಿಭಟನೆ ಮಾಡುವವರೆಗೂ ಕಾಯಬೇಡಿ. ಕುಡಿಯುವ ನೀರು ಜನರ ಮೂಲಭೂತ ಹಕ್ಕು, ಅದಕ್ಕೆ ಮೊದಲ ಆದ್ಯತೆ ನೀಡಿ," ಎಂದು ತಿಳಿಸಿದರು.

ತೆರಿಗೆ ವಸೂಲಿಯಲ್ಲಿ ಮಂದಗತಿ: ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ತೆರಿಗೆ ವಸೂಲಿ ಪ್ರಕ್ರಿಯೆ ಮಂದಗತಿಯಲ್ಲಿ ಸಾಗುತ್ತಿರುವುದಕ್ಕೆ ಸಿಇಒ ಅಸಮಾಧಾನ ವ್ಯಕ್ತಪಡಿಸಿದರು. "ಅಭಿವೃದ್ಧಿ ಕಾರ್ಯಗಳಿಗೆ ಅನುದಾನದ ಕೊರತೆಯಾಗದಂತೆ ನೋಡಿಕೊಳ್ಳಲು ಶೇ. 100ರಷ್ಟು ತೆರಿಗೆ ವಸೂಲಿ ಗುರಿ ತಲುಪಬೇಕು. ಬಾಕಿ ಇರುವ ಆಡಿಟ್ ವರದಿಗಳನ್ನು ಕೂಡಲೇ ಪೂರ್ಣಗೊಳಿಸಿ ಸಲ್ಲಿಕೆ ಮಾಡಬೇಕು," ಎಂದು ಆದೇಶಿಸಿದರು.

ಸ್ವಚ್ಛ ಗ್ರಾಮಗಳ ನಿರ್ಮಾಣಕ್ಕೆ ಆದ್ಯತೆ: ಸ್ವಚ್ಛ ಭಾರತ್ ಮಿಷನ್ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ಚರಂಡಿ ಸ್ವಚ್ಛತೆ, ಬೀದಿ ದೀಪಗಳ ನಿರ್ವಹಣೆ ಹಾಗೂ ತ್ಯಾಜ್ಯ ವಿಲೇವಾರಿ ಕಡೆಗೆ ಪಿಡಿಒಗಳು ಹೆಚ್ಚಿನ ಗಮನ ಹರಿಸುವ ಮೂಲಕ ಗ್ರಾಮಗಳನ್ನು ಮುಕ್ತ ಶೌಚಾಲಯ ಮುಕ್ತ ಹಾಗೂ ಸ್ವಚ್ಛ ಗ್ರಾಮಗಳನ್ನಾಗಿ ಪರಿವರ್ತಿಸಬೇಕು ಎಂದು ಸೂಚಿಸಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ರಮೇಶ್, ಗ್ರೇಡ್-2 ತಹಶೀಲ್ದಾರ್ ಗಾಯತ್ರಿ, ತಾ.ಪಂ. ಇಒ ಎಚ್. ರವಿಕುಮಾರ್ ಸೇರಿದಂತೆ ತಾಲ್ಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.



## ರಾಜ್ಯ ಅಂಬೇಡ್ಕರ್ ಪ್ರಶಸ್ತಿ ಪುರಸ್ಕೃತ ಸಿ.ಎಂ. ಮುನಿಯಪ್ಪರಿಗೆ ಅಭಿನಂದನೆ



ಕೋಲಾರ

ರಾಜ್ಯ ಸರ್ಕಾರದ ಪ್ರತಿಷ್ಠಿತ 'ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿ'ಗೆ ಭಾಜನರಾಗಿರುವ ಹಿರಿಯ ದಲಿತ ಮುಖಂಡ ಸಿ.ಎಂ. ಮುನಿಯಪ್ಪ ಅವರಿಗೆ ಕೋಲಾರ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಶನಿವಾರ ನಗರದ ಸಿ.ಎಂ. ಮುನಿಯಪ್ಪ ಅವರ ನಿವಾಸಕ್ಕೆ ತೆರಳಿದ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ ನೇತೃತ್ವದ ವಿವಿಧ ಸಮುದಾಯಗಳ ಮುಖಂಡರು, ಅವರಿಗೆ ಹಾರ ಹಾಕಿ ಸಿಹಿ ಹಂಚಿ ಅಭಿನಂದನೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಯುವ ಕಾಂಗ್ರೆಸ್ ಉಪಾಧ್ಯಕ್ಷ ಸಾದಿಕ್, ವೇಮಗಲ್ ಯೋಜನಾ ಪ್ರಾಧಿಕಾರದ ಸದಸ್ಯ ಚೌಡಪ್ಪ, ಮಹಿಳಾ ಕಾಲೇಜಿನ ಸಿಡಿಸಿ ಸದಸ್ಯ ಚಿನ್ನಾಪುರ ನಾರಾಯಣಸ್ವಾಮಿ, ಮುಖಂಡರಾದ ಹಾರೋಹಳ್ಳಿ ರಾಜೇಶ್, ಫೈರೋಜ್ ಸಥಾಯಿ, ಬಾಬರ್, ನೂರ್ ನಿಜಾಮ್, ಮಡಿವಾಳ ಭೈರೇಗೌಡ, ಯಲವಾರ ರಾಜಕುಮಾರ್, ರಾಜಕಲ್ಲಹಳ್ಳಿ ಶ್ರೀನಿವಾಸ್, ದಿಂಬಚಾಮನಹಳ್ಳಿ ಎಂ. ನಾರಾಯಣಸ್ವಾಮಿ, ಕೋಟೆ ಶ್ರೀನಿವಾಸ್, ನರಸಿಂಹಯ್ಯ, ಶೇಖರ್ ರಾಮಸಂದ್ರ, ರಾಮಚಂದ್ರ, ನರಸಾಪುರ ಜಗನ್ನಾಥ ಹಾಗೂ ನರಸಾಪುರ ವೆಂಕಟಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಭೆ ಮುಂದೂಡಿಕೆ

ರಾಮನಗರ

ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಏ.21ರಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆ ಕಾರಣಾಂತರಗಳಿಂದ ಮುಂದೂಡಲಾಗಿದೆ. ಮುಂದಿನ ಸಭೆಯನ್ನು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರು ದಿನಾಂಕವನ್ನು ನಿಗಧಿ ಪಡಿಸಿದ ನಂತರ ಆಯೋಜಿಸಲಾಗುವುದು ಎಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

# ದಕ್ಷಿಣ ರಾಜ್ಯಗಳಿಗೆ ಅಪಾಯ ತಪ್ಪಿತು: ಡಿಲಿಮಿಟೇಷನ್ ಬಿಲ್ ವಿಫಲಕ್ಕೆ ಕಾಂಗ್ರೆಸ್ ಹರ್ಷ

**ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರಾದ ಇಕ್ಬಾಲ್ ಅಹಮದ್ ಮಾತನಾಡಿ,ಮಹಿಳಾ ಮೀಸಲಾತಿ ಹೆಸರಿನಲ್ಲಿ ಅವೈಜ್ಞಾನಿಕ ಡಿಲಿಮಿಟೇಷನ್ ಬಿಲ್ ತರಲು ಹೊರಟಿದ್ದ ಬಿಜೆಪಿಗೆ ಸೋಲಾಗಿರುವುದು ನನ್ನಂತಹ ಕೋಟ್ಯಾಂತರ ಜನರಿಗೆ ಸಂತೋಷದ ವಿಚಾರವಾಗಿದೆ.ನಾರಿ ಶಕ್ತಿ ಹೆಸರಿನಲ್ಲಿ ದೇಶದ ಜಿಡಿಪಿಗೆ ಸಾಕಷ್ಟು ಕೊಡುಗೆ ನೀಡುತ್ತಿರುವ ದಕ್ಷಿಣ ರಾಜ್ಯಗಳನ್ನು ಮೂಲಗುಂಪು ಮಾಡುವ ಬಿಜೆಪಿಯ ಪ್ರಯತ್ನಕ್ಕೆ ಹಿನ್ನೆಡೆಯಾಗಿದೆ. ಇದೊಂದು ಐತಿಹಾಸಿಕ ಜಯ.ಮತದಾನದಲ್ಲಿ ಪಾಲ್ಗೊಂಡಿದ್ದ ಎಲ್ಲಾ ಸಂಸದರನ್ನು ಅಭಿನಂದಿಸುತ್ತೇನೆ.ಜನಸಂಖ್ಯೆ ಆಧಾರದಲ್ಲಿ ಎಂ.ಪಿ.ಕ್ಷೇತ್ರಗಳ ಪುನರ್ ವಿಂಗಡನೆಯಿಂದ ಸರಕಾರದ ನಿಯಮಗಳನ್ನು ಪಾಲಿಸಿ, ಜನಸಂಖ್ಯಾ ನಿಯಂತ್ರಣ ಅಳವಡಿಸಿಕೊಂಡು, ಅಭಿವೃದ್ಧಿಗೆ ಹೆಚ್ಚಿನ ತೆರಿಗೆ ನೀಡುತ್ತಿರುವ ದಕ್ಷಿಣ ರಾಜ್ಯಗಳಿಗೆ ಬಹಳ ದೊಡ್ಡ ನಷ್ಟವಾಗಲಿದೆ.ದಕ್ಷಿಣ ರಾಜ್ಯಗಳ ದ್ವನಿ ಅಡಗಿಸುವ ಬಿಜೆಪಿ ಹುನ್ನಾರಕ್ಕೆ ಎಂದಿಗೂ ಜನ ಬೆಲೆ ನೀಡುವುದಿಲ್ಲ ಎಂಬುದಕ್ಕೆ ನಿನ್ನೆಯ ಲೋಕಸಭಾ ಅಧಿವೇಶನ ಸಾಕ್ಷಿಯಾಗಿದೆ.ಡಿಲಿಮಿಟೇಷನ್ ಬಿಟ್ಟು, ಇರುವ 543 ಕ್ಷೇತ್ರಗಳಿಗೆ ಮಹಿಳಾ ಮೀಸಲಾತಿ ಬಿಲ್ ಮಂಡಿಸಿದರೆ ಕಾಂಗ್ರೆಸ್ ಬೆಂಬಲ ನೀಡಲು ಸಿದ್ದವಿದೆ.ಬಿಜೆಪಿಯ ಕುತಂತ್ರಕ್ಕೆ ದಕ್ಷಿಣ ಭಾರತದ ಜನರು ಬಲಿಯಾಗುವುದು ತಪ್ಪಿದಂತಾಗಿದೆ.**

ತುಮಕೂರು: ಪಾರ್ಲಿಮೆಂಟ್ ಅಧಿವೇಶನದಲ್ಲಿ ಮಂಡನೆಯಾಗಿದ್ದ ಲೋಕಸಭಾ ಕ್ಷೇತ್ರಗಳ ಪುನರ್‌ವಿಂಗಡನೆ (ಡಿಲಿಮಿಟೇಷನ್) ಬಿಲ್ ಲೋಕಸಭೆಯ ಅನುಮೋಧನೆ ಪಡೆಯಲು ವಿಫಲವಾಗಿರುವ ಹಿನ್ನೆಲೆ ಕಾಂಗ್ರೆಸ್ ಪಕ್ಷದವತಿಯಿಂದ ನಗರ ಟೌನ್‌ಹಾಲ್ ವೃತ್ತದಲ್ಲಿ ಶನಿವಾರ ಸಿಹಿ ಹಂಚಿ ಸಂಭ್ರಮಾಚರಣೆ ನಡೆಸಿದರು.

ಮಾಜಿ ಶಾಸಕ ಎಸ್.ಷಪಿ ಅಹಮದ್ ಹಾಗೂ ಇಕ್ಬಾಲ್ ಅಹಮದ್ ನೇತೃತ್ವದಲ್ಲಿ ಶನಿವಾರ ಕಾಂಗ್ರೆಸ್ ಪಕ್ಷದ ನೂರಾರು ಕಾರ್ಯಕರ್ತರು ಸಿಹಿ ಹಂಚಿ ಸಂಭ್ರಮಿಸುವ ಮೂಲಕ ಮಹಿಳಾ ಮೀಸಲಾತಿ ಮಸೂದೆಯ ಹೆಸರಿನಲ್ಲಿ ದಕ್ಷಿಣ ಭಾರತದ ರಾಜ್ಯಗಳಿಗೆ ಕಂಟಕ ಪ್ರಾಯವಾದ ಡಿಲಿಮಿಟೇಷನ್ ಬಿಲ್ ಮಂಡನೆ ಮಾಡಿ, ಒಂದೇ ಕಲ್ಲಿನಲ್ಲಿ ಎರಡು ಹಕ್ಕಿ ಹೊಡೆಯುವ ಬಿಜೆಪಿಯ ಹುನ್ನಾರವನ್ನು ಸಂಸದರು ತಡೆದಿದ್ದಾರೆ. ಇದೊಂದು ಐತಿಹಾಸಿಕ ಜಯ ಎಂದು ಬಣ್ಣಿಸಿದರು.

ಮಾಜಿ ಶಾಸಕ ಎಸ್.ಷಪಿ ಅಹಮದ್ ಮಾತನಾಡಿ, ಬಿಜೆಪಿ ಸರಕಾರ ತರಾತುರಿಯಲ್ಲಿ, ಅವೈಜ್ಞಾನಿಕವಾಗಿ ಜಾರಿಗೆ ತರಲು ಹೊರಟಿದ್ದುಲೋಕಸಭಾ ಕ್ಷೇತ್ರಗಳ ಪುನರ್ ವಿಂಗಡನೆ ಮಸೂದೆಗೆ ಸೋಲುಂಟಾಗಿದೆ. ಮಸೂದೆಯ ವಿರುದ್ದವಾಗಿ ಮತ ಚಲಾಯಿಸಿದ ಎಲ್ಲಾ 211 ಸಂಸದರಿಗೆ ತುಮಕೂರು ಜಿಲ್ಲಾ ಕಾಂಗ್ರೆಸ್ ಪಕ್ಷದವತಿಯಿಂದ ಅಭಿನಂದನೆ



ಸಲ್ಲಿಸುತ್ತೇವೆ.ಇತ್ತೀಚಿನ ದಿನಗಳಲ್ಲಿ ಇದು ಜನರಿಗೆ ಸಿಕ್ಕ ಜಯವಾಗಿದೆ.ತಮಿಳುನಾಡು ಮತ್ತು ಪಶ್ಚಿಮ ಬಂಗಾಳದ ಚುನಾವಣೆಯಲ್ಲಿ ಗೆಲುವು ಸಾಧಿಸಲು ಡಿಲಿಮಿಟೇಷನ್ ಮಾಡದೆ ಮಹಿಳಾ ಮೀಸಲಾತಿ ತರಲು ಹೊರಟಿದ್ದ ಬಿಜೆಪಿಯ ಹುನ್ನಾರವನ್ನು ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳು ವಿಫಲಗೊಳಿಸಿವೆ.ಹಾಗಾಗಿ ಪ್ರಧಾನಿ ನರೇಂದ್ರಮೋದಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂಬುದು ನಮ್ಮ ಒತ್ತಾಯವಾಗಿದೆ ಎಂದರು.

ಮಹಿಳಾ ಮೀಸಲಾತಿಗೆ ಕಾಂಗ್ರೆಸ್ ವಿರೋಧವಿಲ್ಲ. ಆದರೆ ಮಹಿಳಾ ಮೀಸಲಾತಿ ಹೆಸರಿನಲ್ಲಿ ಡಿಲಿಮಿಟೇಷನ್ ಬಿಲ್ ಮಂಡನೆ ಮಾಡಿ, ಅಭಿವೃದ್ದಿ ಹೊಂದಿದ ದಕ್ಷಿಣ ಭಾರತದ ರಾಜ್ಯಗಳ ಮೇಲೆ ಕಲ್ಲು ಚಪ್ಪಡಿ ಎಳೆಯಲು ಮುಂದಾಗಿದ್ದ ಪ್ರಧಾನಿ ಮತ್ತು ಗೃಹ ಸಚಿವರ ಷಡ್ಯಂತ್ರಕ್ಕೆ ತಕ್ಕ ಪಾಠವನ್ನು ಇಂಡಿಯಾ ಮೈತ್ರಿಕೂಟ ಮಾಡಿದೆ.ಇದೇ ರೀತಿಯ ಒಗ್ಗಟ್ಟು ಮುಂದಿನ ದಿನಗಳಲ್ಲಿಯೂ ಮುಂದುವರೆಯುವ ಮೂಲಕ ದೇಶವನ್ನು ಒಡೆಯುವ ಹುನ್ನಾರಗಳಿಗೆ ತೆರೆ ಎಳೆಯಬೇಕಿದೆ ಎಂದು ಡಾ. ಎಸ್.ಷಪಿ ಅಹಮದ್ ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರಾದ ಇಕ್ಬಾಲ್ ಅಹಮದ್ ಮಾತನಾಡಿ,ಮಹಿಳಾ ಮೀಸಲಾತಿ ಹೆಸರಿನಲ್ಲಿ ಅವೈಜ್ಞಾನಿಕ ಡಿಲಿಮಿಟೇಷನ್ ಬಿಲ್ ತರಲು ಹೊರಟಿದ್ದ ಬಿಜೆಪಿಗೆ ಸೋಲಾಗಿರುವುದು ನನ್ನಂತಹ ಕೋಟ್ಯಾಂತರ ಜನರಿಗೆ ಸಂತೋಷದ ವಿಚಾರವಾಗಿದೆ.ನಾರಿ ಶಕ್ತಿ ಹೆಸರಿನಲ್ಲಿ ದೇಶದ ಜಿಡಿಪಿಗೆ ಸಾಕಷ್ಟು ಕೊಡುಗೆ ನೀಡುತ್ತಿರುವ ದಕ್ಷಿಣ ರಾಜ್ಯಗಳನ್ನು ಮೂಲಗುಂಪು ಮಾಡುವ ಬಿಜೆಪಿಯ ಪ್ರಯತ್ನಕ್ಕೆ ಹಿನ್ನೆಡೆಯಾಗಿದೆ. ಇದೊಂದು ಐತಿಹಾಸಿಕ ಜಯ.ಮತದಾನದಲ್ಲಿ ಪಾಲ್ಗೊಂಡಿದ್ದ ಎಲ್ಲಾ ಸಂಸದರನ್ನು ಅಭಿನಂದಿಸುತ್ತೇನೆ.ಜನಸಂಖ್ಯೆ ಆಧಾರದಲ್ಲಿ ಎಂ.ಪಿ.ಕ್ಷೇತ್ರಗಳ ಪುನರ್ ವಿಂಗಡನೆಯಿಂದ ಸರಕಾರದ ನಿಯಮಗಳನ್ನು ಪಾಲಿಸಿ, ಜನಸಂಖ್ಯಾ ನಿಯಂತ್ರಣ ಅಳವಡಿಸಿಕೊಂಡು, ಅಭಿವೃದ್ದಿಗೆ ಹೆಚ್ಚಿನ ತೆರಿಗೆ ನೀಡುತ್ತಿರುವ ದಕ್ಷಿಣ ರಾಜ್ಯಗಳಿಗೆ ಬಹಳ ದೊಡ್ಡ ನಷ್ಟವಾಗಲಿದೆ. ದಕ್ಷಿಣ ರಾಜ್ಯಗಳ ದ್ವನಿ ಅಡಗಿಸುವ ಬಿಜೆಪಿ ಹುನ್ನಾರಕ್ಕೆ ಎಂದಿಗೂ ಜನ ಬೆಲೆ ನೀಡುವುದಿಲ್ಲ ಎಂಬುದಕ್ಕೆ ನಿನ್ನೆಯ ಲೋಕಸಭಾ ಅಧಿವೇಶನ ಸಾಕ್ಷಿಯಾಗಿದೆ.ಡಿಲಿಮಿಟೇಷನ್ ಬಿಟ್ಟು, ಇರುವ 543 ಕ್ಷೇತ್ರಗಳಿಗೆ ಮಹಿಳಾ ಮೀಸಲಾತಿ ಬಿಲ್ ಮಂಡಿಸಿದರೆ ಕಾಂಗ್ರೆಸ್ ಬೆಂಬಲ ನೀಡಲು ಸಿದ್ದವಿದೆ.ಬಿಜೆಪಿಯ ಕುತಂತ್ರಕ್ಕೆ ದಕ್ಷಿಣ ಭಾರತದ ಜನರು ಬಲಿಯಾಗುವುದು ತಪ್ಪಿದಂತಾಗಿದೆ. ಇದಕ್ಕಾಗಿ ಕಾಂಗ್ರೆಸ್ ಸಂಭ್ರಮಾಚರಣೆ ನಡೆಸುತ್ತಿದೆ ಎಂದರು. ಕೆಪಿಸಿಸಿ ಹಿರಿಯ ಉಪಾಧ್ಯಕ್ಷ ಮುರುಳೀಧರ ಹಾಲಪ್ಪ ಮಾತನಾಡಿ, ಡಾ. ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗಲೇ ಮಹಿಳಾ ಮೀಸಲಾತಿಯನ್ನು ತರಲು ಮುಂದಾಗಿದ್ದಾಗ, ಬಿಜೆಪಿ ಅಧಿವೇಶನ ಬಹಿಷ್ಕರಿಗೆ ಹೊರ ನಡೆದಿತ್ತು.2029ರ ಚುನಾವಣೆಗೆ 2011ರ ಜನಗಣತಿ ಆಧಾರದಲ್ಲಿ ಮಹಿಳಾ ಮೀಸಲಾತಿ ಕಲ್ಪಿಸಲು ಹೊರಟಿರುವುದು ಅತ್ಯಂತ ಖಂಡನೀಯ. ಕೇಂದ್ರ ಸರಕಾರಕ್ಕೆ ಮಹಿಳೆಯರ ಮೇಲೆ ಅಷ್ಟೊಂದು ಕಾಳಜಿ ಇದ್ದರೆ 2026 ಜನಗಣತಿ ನಂತರ ಡಿಲಿಮಿಟೇಷನ್ ನಡೆಸಿ, ಮಹಿಳಾ ಮೀಸಲಾತಿ ಜಾರಿಗೊಳಿಸಲಿ ಎಂದು ಸವಾಲು ಹಾಕಿದರು. ಈಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸುಜಾತ ಮಾತನಾಡಿ,ಕಾಂಗ್ರೆಸ್ ಎಂದಿಗೂ ಮಹಿಳಾ ಮೀಸಲಾತಿಗೆ ವಿರೋಧವಿಲ್ಲ. ಕಾಂಗ್ರೆಸ್ ಪಕ್ಷ ದೇಶದ ಪ್ರಧಾನಿಯಾಗಿ, ಲೋಕಸಭೆಯ ಸ್ಪೀಕರ್ ಆಗಿ, ದೇಶದ ಪ್ರಥಮ ಪ್ರಜೆ ರಾಷ್ಟ್ರಪತಿಗಳಾಗಿ ಮಹಿಳೆಯರನ್ನು ನೇಮಕ ಮಾಡಿದೆ.ಬಿಜೆಪಿಯಂತೆ ಮಹಿಳೆಯರ ಹೆಸರಿನಲ್ಲಿ ತಮ್ಮ ಬೆಳೆ ಬೆಯಿಸಿಕೊಳ್ಳಲು ಹೋಗಿಲ್ಲ. ಕಾಂಗ್ರೆಸ್‌ನ ವಿರೋಧವಿರುವುದು ಡಿಲಿಮಿಟೇಷನ್‌ಗೆ ಹೊರತು, ಮಹಿಳಾ ಮೀಸಲಾತಿಗೆ ಅಲ್ಲ ಎಂದು ಸ್ಪಷ್ಟಪಡಿಸಿದರು.

ಸಂಭ್ರಮಾಚರಣೆಯಲ್ಲಿ ಕಾಂಗ್ರೆಸ್ ಮುಖಂಡರಾದ ಷಣ್ಮುಗಪ್ಪ, ಹೆಚ್.ಸಿ. ಹನುಮಂತಯ್ಯ, ನರಸೀಯಪ್ಪ, ಎಸ್.ಸಿ.ಸೆಲ್ ಜಿಲ್ಲಾ ಉಪಾಧ್ಯಕ್ಷ ಸಿದ್ದಾಪುರ ರಂಗಸಾಮಯ್ಯ, ಗುರುಪ್ರಸಾದ್, ಸುವರ್ಣಮ್ಮ,ಸಂಜೀವಕುಮಾರ್, ಆಟೋ ರಾಜು, ಸೌಭಾಗ್ಯ, ನಾಗಮಣಿ, ಕವಿತಾ, ನಟರಾಜಶೆಟ್ಟಿ, ಶಂಕರಾನಂದ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಫಯಾಜ್, ಪಾಲಿಕೆ ಮಾಜಿ ಸದಸ್ಯ ನಯಾಜ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

# 543 ಸ್ಥಾನಗಳಿಗೇ ಮೀಸಲಾತಿ ತನ್ನಿ

ನವದೆಹಲಿ

ಪ್ರಸ್ತುತ ಇರುವ 543 ಲೋಕಸಭಾ ಸ್ಥಾನಗಳಲ್ಲೇ ಮಹಿಳೆಯರಿಗೆ 33% ಮೀಸಲಾತಿಯನ್ನು ತಕ್ಷಣವೇ ಜಾರಿಗೆ ತನ್ನಿ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸವಾಲು ಎಸೆದಿದ್ದಾರೆ.

ಮೋದಿ ಅವರು ದೇಶವನ್ನು ಉದ್ದೇಶಿಸಿ ಮಾತನಾಡಿದ ಬೆನ್ನಲ್ಲೇ ಎಕ್ಸ್‌ನಲ್ಲಿ ಖರ್ಗೆ ಅವರು ದೀರ್ಘ ಪೋಸ್ಟ್ ಮಾಡಿ ಮೋದಿ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ

ದೇಶವನ್ನು ಉದ್ದೇಶಿಸಿ ಮಾಡುವ ಅಧಿಕೃತ ಭಾಷಣವನ್ನು ಮೋದಿ ಅವರು ರಾಜಕೀಯ ಲಾಭಕ್ಕಾಗಿ ಬಳಸಿಕೊಂಡಿದ್ದಾರೆ. ಸರ್ಕಾರವು ಮಹಿಳಾ ಮೀಸಲಾತಿ ಮಸೂತೆ ಮತ್ತು ಕ್ಷೇತ್ರ ಮರುವಿಂಗಡಣೆ ಮಸೂದೆಗಳನ್ನು ಒಟ್ಟಿಗೆ ಸೇರಿಸಿ ಜನರಲ್ಲಿ ಗೊಂದಲ ಮೂಡಿಸುತ್ತಿದೆ ಎಂದು ದೂರಿದರು.

ಕ್ಷೇತ್ರ ಮರುವಿಂಗಡಣೆಯ ಹೆಸರಿನಲ್ಲಿ ಸಂವಿಧಾನ ಮತ್ತು ಒಕ್ಕೂಟ ವ್ಯವಸ್ಥೆಗೆ ಧಕ್ಕೆ ತರಲು ಮೋದಿ–ಶಾ ಜೋಡಿ ಯತ್ನಿಸುತ್ತಿದೆ. ಆದರೆ ಒಗ್ಗಟ್ಟಿನ ವಿರೋಧ ಪಕ್ಷಗಳ ಹೋರಾಟದಿಂದಾಗಿ ಸಂವಿಧಾನ ತಿದ್ದುಪಡಿ ವಿಧೇಯಕ ಬಿದ್ದುಹೋಗಿದೆ ಎಂದು ಇಂದು ಒಕ್ಕೂಟದ ನಿರ್ಧಾರವನ್ನು ಸಮರ್ಥಿಸಿ ಕೊಂಡಿದ್ದಾರೆ.

# ‘ತಿದ್ದುಪಡಿ ಮಸೂದೆಗೆ ಸೋಲು; ಕರಾಳ ಇತಿಹಾಸ ಮರುಕಳಿಸಲಿದೆ’

ನವದೆಹಲಿ

ತಿದ್ದುಪಡಿ ಮಸೂದೆ ಸೋಲುವ ಮೂಲಕ ಲೋಕಸಭೆಯಲ್ಲಿ ಮೂವತ್ತು ವರ್ಷಗಳ ಹಿಂದಿನ ಕರಾಳ ಇತಿಹಾಸ ಮತ್ತೆ ಮರುಕಳಿಸಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದ್ದಾರೆ.

ಲೋಕಸಭೆಯಲ್ಲಿ ಪ್ರತಿಪಕ್ಷಗಳ ಬೆಂಬಲ ಸಿಗದೆ ಮಸೂದೆ ಬಿದ್ದುಹೋದ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಕೇಂದ್ರ ಸಚಿವರು; 1996 ರಿಂದ 2026; ಕರಾಳ ಇತಿಹಾಸ ಮರುಕಳಿಸಿದೆ! ಮೂರು ದಶಕಗಳ ನಂತರವೂ ಕಾಂಗ್ರೆಸ್ ಪಕ್ಷದ ಮಹಿಳಾ ವಿರೋಧಿ ಮನಸ್ಥಿತಿ ಕೊಂಚವೂ ಬದಲಾಗಿಲ್ಲ ಎನ್ನುವುದಕ್ಕೆ ಲೋಕಸಭೆ ಮತ್ತೊಮ್ಮೆ ಸಾಕ್ಷಿಯಾಯಿತು ಎಂದು ಬೇಸರ ವ್ಯಕ್ತಪಡಿಸಿದ್ದಾರೆ.



ಅಂದು ಹೆಚ್.ಡಿ. ದೇವೇಗೌಡರ ನೇತೃತ್ವದ ಸಂಯುಕ್ತ ರಂಗ ಸರಕಾರವು ಲೋಕಸಭೆ, ವಿಧಾನಸಭೆಗಳಲ್ಲಿ ಮಹಿಳೆಯರಿಗೆ 33% ಮೀಸಲು ನೀಡುವ ಕ್ರಾಂತಿಕಾರಿ ನಿರ್ಧಾರ ಕೈಗೊಂಡು ಸಂಸತ್ತಿನಲ್ಲಿ ಮಸೂದೆ ಮಂಡಿಸಿತ್ತು. ಅಂದು ಇದೇ ಕಾಂಗ್ರೆಸ್ ಮತ್ತು ಅದರ ಸಹಚರ ಶಕ್ತಿಗಳು ಆ ಪ್ರಯತ್ನವನ್ನು ಸಂಘಟಿತವಾಗಿ ವಿಫಲಗೊಳಿಸಿದ್ದವು. ಇಂದು ಆವತ್ತು ಮಹಿಳೆಯರಿಗೆ ಆಗಿದ್ದ ಐತಿಹಾಸಿಕ ಅನ್ಯಾಯ ಸರಿಪಡಿಸಲು ಪ್ರಧಾನಿ ನರೇಂದ್ರ ಮೋದಿ ಅವರು ದಿಟ್ಟಹೆಜ್ಜೆ ಇರಿಸಿದ್ದರು.

ಪುನಾ ಅದೇ ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳು ಸೇರಿ ಸನ್ಮಾನ್ಯ ಮೋದಿ ಅವರ ಪ್ರಯತ್ನಕ್ಕೆ ತಡೆಯೊಡ್ಡಿವೆ ಎಂದು ಅವರು ಕಿಡಿಕಾರಿದ್ದಾರೆ.

ಮಹಿಳಾ ಮೀಸಲು ಮಸೂದೆಯನ್ನು ಸೋಲಿಸಿದ ಕೂಟದ ಶಕ್ತಿಗಳನ್ನು ರಾಷ್ಟ್ರದ ನಾರಿಶಕ್ತಿ ಎಂದಿಗೂ ಕ್ಷಮಿಸುವುದಿಲ್ಲ. ಇದು ಮಾತೃಶಕ್ತಿಗೆ ಆಗಿರುವ ಅಪಮಾನ. ಇದಕ್ಕೆ ಕಾರಣರಾದ ಎಲ್ಲರೂ ತಕ್ಕ ಶಾಸ್ತಿ ಅನುಭವಿಸಬೇಕಾಗುತ್ತದೆ ಎಂದು ಅವರು ಎಚ್ಚರಿಸಿದ್ದಾರೆ.

ರಾಷ್ಟ್ರದ ನಾರಿಶಕ್ತಿಗೆ ನನ್ನ ಮನವಿ ಇಷ್ಟೇ, ನಿಮಗೆ ನಿರಾಶೆ ಬೇಕಿಲ್ಲ.

ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಮುಂದೊಂದು ದಿನ ನಿಮಗೆ ಅಗ್ರಮನ್ನಣೆ ಸಿಕ್ಕೇ ಸಿಗುತ್ತದೆ. 33% ಮಹಿಳಾ ಮೀಸಲು ಗುರಿ ಸಾಧಿಸುವುದು ಶತಸಿದ್ಧ ಎಂದು ಅವರು ಭರವಸೆ ನೀಡಿದ್ದಾರೆ.

# ಇರಾನ್ ಸಚಿವರನ್ನೇ ಮೂರ್ಖರನ್ನಾಗಿಸಿದ ಸೇನೆ

ನವದೆಹಲಿ

ತನ್ನ ದೇಶದ ವಿದೇಶಾಂಗ ಸಚಿವರನ್ನೇ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ನೌಕಾ ಸೇನೆ ಮೂರ್ಖ ಎಂದು ಕರೆದಿದೆ.

ಲೆಬನಾನ್‌ನಲ್ಲಿ ಏರ್ಪಟ್ಟಿರುವ ಕದನ ವಿರಾಮದ ಹಿನ್ನೆಲೆಯಲ್ಲಿ, ಹಾರ್ಮುಜ್ ಜಲಸಂಧಿಯನ್ನು ಎಲ್ಲಾ ವಾಣಿಜ್ಯ ಹಡಗುಗಳಿಗೆ ಸಂಪೂರ್ಣವಾಗಿ ತೆರೆಯಲಾಗಿದೆ ಎಂದು ವಿದೇಶಾಂಗ ಸಚಿವರನ್ನೇ ಸಯ್ಯದ್ ಅಬ್ಬಾಸ್ ಅರಾಘ್ಚಿ ಎಕ್ಸ್‌ನಲ್ಲಿ ಪ್ರಕಟಿಸಿದ್ದರು.

ಇರಾನ್ ಸಚಿವರಿಂದ ಈ ಹೇಳಿಕೆ ಬಂದ ಹಿನ್ನೆಲೆಯಲ್ಲಿ ಇಂದು ಹಡಗಗಳು ಹಾರ್ಮುಜ್ ಜಲಸಂಧಿಯನ್ನು ದಾಟಲು ಮುಂದಾಗಿವೆ. ಜಲಸಂಧಿ ದಾಟಲು ಯತ್ನಿಸಿದಾಗ ಐಆರ್‌ಜಿಸಿ ರೇಡಿಯೋ ಸಿಗ್ನಲ್ ಕಳುಹಿಸಿ ಹಡಗುಗಳನ್ನು ತಡೆದಿದೆ.

ಈ ವೇಳೆ ಹಡಗಿನ ಕ್ಯಾಪ್ಟನ್ ವಿದೇಶಾಂಗ ಸಚಿವರು ಹಾರ್ಮುಜ್‌ನಲ್ಲಿ ಸಂಚರಿಸಲು ಅನುಮತಿ ನೀಡಿದ್ದಾರೆ ಎಂದಾಗ ಐಆರ್‌ಜಿಸಿ ನಾವು ಹಡಗುಗಳನ್ನು ನಮ್ಮ ನಾಯಕನ ಆದೇಶದ ಮೇರೆಗೆ ತೆರೆಯುತ್ತೇವೆ, ಯಾರೋ ಮೂರ್ಖರ ಟ್ವೀಟ್‌ಗಳಿಗೆ ಅಲ್ಲ ಎಂದು ಹೇಳಿದೆ. ಅಷ್ಟೇ ಅಲ್ಲದೇ ಹಡಗುಗಳ ಸಂಚಾರಕ್ಕೆ ಜಲಸಂಧಿಯನ್ನು ಮುಚ್ಚಿದ್ದೇವೆ ಎಂದು ತಿಳಿಸಿದೆ.

# ಆನಂದಭವನಕ್ಕೆ ಬೀಗ

ಮುಳಬಾಗಿಲು

ತಾಲೂಕಿನ ಹನುಮನಹಳ್ಳಿ ಕ್ರಾಸ್ ಬಳಿ ಇರುವ ಅಡಿಯಾರ್ ಆನಂದ್ ಭವನ ಹೋಟೆಲ್‌ಗೆ ಅಧಿಕಾರಿಗಳು ಬೀಗ ಮುದ್ರೆ ಹಾಕಿದ್ದಾರೆ.

ಶನಿವಾರ ತಾಲೂಕು ಆರೋಗ್ಯ ಅಧಿಕಾರಿಗಳ ತಂಡವು ಹೋಟೆಲ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ, ಅವಧಿ ಮೀರಿದ ಹಾಲು ಮತ್ತು ಮೊಸರು ಬಳಕೆ ಮಾಡುತ್ತಿರುವುದು ಪತ್ತೆಯಾಯಿತು.

ಜೊತೆಗೆ, ಹೋಟೆಲ್‌ನಲ್ಲಿ ಅಗತ್ಯವಾದ ಸ್ವಚ್ಛತೆ ಪಾಲನೆಯ ಕೊರತೆಯೂ ಕಂಡುಬಂದ ಹಿನ್ನೆಲೆಯಲ್ಲಿ ನಿರ್ವಹಣೆಗೆ ತಿಳುವಳಿಕೆ ನೋಟಿಸ್ ನೀಡಲಾಗಿತ್ತು.




ಆದರೆ ಸೂಚನೆಗಳ ಬಳಿಕವೂ ಪರಿಸ್ಥಿತಿಯಲ್ಲಿ ಸುಧಾರಣೆ ಕಾಣದ ಹಿನ್ನೆಲೆಯಲ್ಲಿ, ದಿನಾಂಕ 18–04–2026ರಂದು ಮುಳಬಾಗಿಲು ತಾಲೂಕು ದಂಡಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕ್ರಮ ಕೈಗೊಳ್ಳಲಾಯಿತು.

ಕಾರ್ಯಾಚರಣೆಯಲ್ಲಿ ಅಂಕಿತ ಅಧಿಕಾರಿಗಳಾದ ಡಾ.ರಾಕೇಶ್, ಕಾರ್ಯ ನಿರ್ವಹಣಾಧಿಕಾರಿ ಬಾಬು, ತಾಲೂಕು ಆರೋಗ್ಯಾಧಿಕಾರಿ ಡಾ.ಸುಗುಣ ಸಿ., ನೋಡಲ್ ಅಧಿಕಾರಿ ಪ್ರತೀಶ್ ಜೆ.ಪಿ., ಪೊಲೀಸ್ ಅಧಿಕಾರಿ ಭಾಷಾ ಹಾಗೂ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಎಂ.ಚಿದಾನಂದ, ವಂಶಿಕೃಷ್ಣ ಸೇರಿದಂತೆ ಅಧಿಕಾರಿಗಳ ತಂಡ ಭಾಗವಹಿಸಿ ಹೋಟೆಲ್‌ಗೆ ಬೀಗ ಮುದ್ರೆ ಹಾಕಿದರು.

# ಎಕ್ಸ್‌ಪ್ರೆಸ್ ರೈಲುಗಳ ಘೋಷಣೆ

ಮೈಸೂರು

ಬೇಸಿಗೆ ಅವಧಿಯಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿವಾರಿಸಲು ನೈರುತ್ಯ ರೈಲ್ವೆ ಮೈಸೂರು ಅಲಿಪುರ್ ದ್ವಾರ್ ಜಂಕ್ಷನ್ ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲುಗಳನ್ನು ಘೋಷಿಸಿದೆ.

ರೈಲು ಸಂಖ್ಯೆ 06289 ಮೈಸೂರಿನಿಂದ 20 ಏಪ್ರಿಲ್ 2026 (ಸೋಮವಾರ) ರಾತ್ರಿ 20:15ಕ್ಕೆ ಹೊರಟು, ಗುರುವಾರ ಬೆಳಿಗ್ಗೆ 05:30ಕ್ಕೆ ಅಲಿಪುರ್ ದ್ವಾರ್ ಜಂಕ್ಷನ್ ತಲುಪಲಿದೆ.

ಮರಳಿ ಪ್ರಯಾಣದಲ್ಲಿ, ರೈಲು ಸಂಖ್ಯೆ 06290 ಅಲಿಪುರ್ ದ್ವಾರ್ ಜಂಕ್ಷನ್‌ನಿಂದ 24 ಏಪ್ರಿಲ್ 2026 (ಶುಕ್ರವಾರ) ಬೆಳಿಗ್ಗೆ 04:45ಕ್ಕೆ ಹೊರಟು, ಭಾನುವಾರ ಮಧ್ಯಾಹ್ನ 13:15ಕ್ಕೆ ಮೈಸೂರಿಗೆ ಆಗಮಿಸಲಿದೆ.

ಈ ವಿಶೇಷ ರೈಲು ಮಾರ್ಗ ಮಧ್ಯದಲ್ಲಿ ಮಂಡ್ಯ, ಕೆಂಗೇರಿ, ಕೆಎಸ್‌ಆರ್ ಬೆಂಗಳೂರು, ಬಂಗಾರಪೇಟೆ, ಕುಪ್ಪಂ, ಜೋಲಾರಪೇಟೆ, ಕಟ್ಪಾಡಿ, ರೇಣಿಗುಂಟಾ, ಗುಡೂರು, ಒಂಗೋಲ್, ವಿಜಯವಾಡ, ರಾಜಮಂಡ್ರಿ, ಕೊತ್ತವಲಸ, ವಿಜಯನಗರಂ, ಶ್ರೀಕಾಕುಳಂ ರೋಡ್, ಪಾಲಾಸಾ, ಬ್ರಹ್ಮಪುರ, ಖುರ್ದಾ ರೋಡ್, ಭುವನೇಶ್ವರ, ಕಟಕ್, ಭದ್ರಕ್, ಖರಗ್ಪುರ್, ಅಂಡುಲ್, ಧನಕುಣಿ, ಬರ್ಧಮಾನ, ಬಾಲ್ಪೂರ್ ಎಸ್ ನಿಕ್ಟನ್, ರಾಮ್ಪುರ ಹಾಟ್, ನ್ಯೂ ಫರಕ್ಕಾ, ಮಾಲ್ಡಾ ಟೌನ್, ಭಾರಸೊಇ, ಕಿಶನ್ ಗಂಜ್, ನ್ಯೂ ಜಲ್ಪೈಗುಡಿ, ಸಿಲಿಗುರಿ, ಬಿನ್ನಗುರಿ, ಹಸೀಮರ ಸೇರಿದಂತೆ ಹಲವು ಪ್ರಮುಖ ನಿಲ್ದಾಣಗಳಲ್ಲಿ ನಿಲುಗಡೆಗಳನ್ನು ಹೊಂದಿರುತ್ತದೆ.

ಪ್ರಯಾಣಿಕರಿಗೆ ಸುಗಮ ಹಾಗೂ ಅನುಕೂಲಕರ ಪ್ರಯಾಣ ಕಲ್ಪಿಸುವ ಉದ್ದೇಶದಿಂದ ಈ ವಿಶೇಷ ಸೇವೆಯನ್ನು ಪ್ರಾರಂಭಿಸಲಾಗಿದೆ.

# ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026ರ ಅನುಷ್ಠಾನಕ್ಕೆ ಎಲ್ಲರೂ ಕೈ ಜೋಡಿಸಿ

ಬೆಂಗಳೂರು

ನಗರದಲ್ಲಿ ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026 ಅನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಎಲ್ಲಾ ಪಾಲುದಾರರ ಸಮನ್ವಯ ಹಾಗೂ ನಾಗರಿಕರ ಸಕ್ರಿಯ ಭಾಗವಹಿಸುವಿಕೆ ಅತ್ಯಗತ್ಯ ಎಂದು ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ನಿಯಮಿತದ ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾದ ಕರೀಗೌಡ ಅವರು ತಿಳಿಸಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ನಿಯಮಿತದ ವತಿಯಿಂದ ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026 ಅನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಕುರಿತು ನಗರದ ಟೌನ್ ಹಾಲ್‌ನಲ್ಲಿ ನಾಗರಿಕರು, ನಿವಾಸಿಗಳ ಕಲ್ಯಾಣ ಸಂಘಗಳು, ಸರ್ಕಾರೇತರ ಸಂಸ್ಥೆಗಳು, ಹೋಟೆಲ್ ಸಂಘಟನೆಗಳು ಹಾಗೂ ಬಿ.ಎಸ್.ಡಬ್ಲ್ಯು.ಎಂ.ಎಲ್‌ನ ಅಧಿಕಾರಿಗಳು ಮತ್ತು ಸಿಬ್ಬಂದಿಗಾಗಿ ಏರ್ಪಡಿಸಿದ್ದ ಕಾರ್ಯಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ನಗರದಲ್ಲಿ ರಸ್ತೆ ಬದಿಗಳಲ್ಲಿ ಹಾಗೂ ಖಾಲಿ ಜಾಗಗಳಲ್ಲಿ ಕಸವನ್ನು ಬಿಸಾಡದೆ, ಮನೆ–ಮನೆಗೆ ಭೇಟಿ ನೀಡುವ ಆಟೋ ಟಿಪ್ಪರ್‌ಗಳಿಗೆ ತ್ಯಾಜ್ಯವನ್ನು ನೀಡಬೇಕು. ಮಿಶ್ರ ತ್ಯಾಜ್ಯವನ್ನು ನೀಡದೆ, ಹಸಿ ಹಾಗೂ ಒಣ ತ್ಯಾಜ್ಯವನ್ನು ಪ್ರತ್ಯೇಕವಾಗಿ ವಿಂಗಡಿಸಿ ನೀಡುವಂತೆ ಮನವಿ ಮಾಡಿದರು.

ನಗರದ ದೊಡ್ಡ ಅಪಾರ್ಟ್‌ಮೆಂಟ್‌ಗಳಲ್ಲಿ ಉತ್ಪತ್ತಿಯಾಗುವ ಬೃಹತ್ ಪ್ರಮಾಣದ ತ್ಯಾಜ್ಯವನ್ನು ಹೇಗೆ ವಿಲೇವಾರಿ ಮಾಡಬೇಕು ಎಂಬುದರ ಕುರಿತು ಐದು ನಗರ ಪಾಲಿಕೆಗಳಲ್ಲಿ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳೊಂದಿಗೆ ಸಭೆಗಳನ್ನು ನಡೆಸಿ ಅಗತ್ಯ ಮಾಹಿತಿಯನ್ನು ನೀಡಲಾಗುವುದು ಎಂದು ತಿಳಿಸಿದರು.

ಮಿಶ್ರ ತ್ಯಾಜ್ಯವನ್ನು ನೀಡದೆ, ಹಸಿ ಹಾಗೂ ಒಣ ತ್ಯಾಜ್ಯವನ್ನು ಪ್ರತ್ಯೇಕವಾಗಿ ವಿಂಗಡಿಸಿ ನೀಡುವಂತೆ

# ‘ಮುಂದಿನ ವಾರದಿಂದ ಟೋಯಿಂಗ್’



ಬೆಂಗಳೂರು

ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಂಚಾರ ದಟ್ಟಣೆಯನ್ನು ನಿಯಂತ್ರಿಸುವ ಮತ್ತು ಅಕ್ರಮವಾಗಿ ನಿಲುಗಡೆ ಮಾಡಲಾದ ಹಾಗೂ ಅನಾಥ ವಾಹನಗಳನ್ನು ತೆರವುಗೊಳಿಸುವ ನಿಟ್ಟಿನಲ್ಲಿ ಟೋಯಿಂಗ್ ವಾಹನಗಳನ್ನು ಪಡೆದುಕೊಳ್ಳಲು ಉದ್ದೇಶಿಸಲಾಗಿರುತ್ತದೆ.

ಅದರಂತೆ ಬೆಂಗಳೂರು ದಕ್ಷಿಣ ನಗರ ಪಾಲಿಕೆಯು ಟೋಯಿಂಗ್ ವಾಹನ ಪರಿಶೀಲನಾ ಕಾರ್ಯವನ್ನು ಇಂದು ಪಾಲಿಕೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಟೋಯಿಂಗ್ ವಾಹನ ಪರಿಶೀಲನಾ ಕಾರ್ಯದಲ್ಲಿ ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಆಯುಕ್ತರಾದ ಶ್ರೀ ಕೆ.ಎನ್. ರಮೇಶ್ ಅವರು ಭಾಗವಹಿಸಿ, ಇಂದು ಟೋಯಿಂಗ್ ವಾಹನಗಳ ಕಾರ್ಯನಿರ್ವಹಣೆಯನ್ನು ವೀಕ್ಷಿಸಿದರು.

ಟೆಂಡರ್ ಪಡೆದ ಗುತ್ತಿಗೆದಾರರು ನಿಗದಿಪಡಿಸಿದ ಮಾನದಂಡಗಳನ್ನು ಪೂರೈಸುತ್ತಾರೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲು ಈ ಪರಿಶೀಲನಾ ಕಾರ್ಯವನ್ನು ನಡೆಸಲಾಗಿರುತ್ತದೆ.

ಪರಿಶೀಲನಾ ಕಾರ್ಯದ ನಂತರ ಮಾತನಾಡಿದ ಆಯುಕ್ತರು, ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸಲು ಒಟ್ಟು 6 ಟೋಯಿಂಗ್ ವಾಹನಗಳನ್ನು ಬಾಡಿಗೆಗೆ ಪಡೆಯಲಾಗಿದೆ. ವಾಹನಗಳ ಕಾರ್ಯಕ್ಷಮತೆ ಮತ್ತು ಗುತ್ತಿಗೆದಾರರ ಅರ್ಹತೆಯನ್ನು ಪರಿಶೀಲಿಸಿದ ನಂತರ, ಮುಂದಿನ ವಾರದಿಂದ ಈ ವಾಹನಗಳು ಅಧಿಕೃತವಾಗಿ ಟ್ರಾಫಿಕ್ ಪೊಲೀಸರ ಉಸ್ತುವಾರಿಯಲ್ಲಿ ರಸ್ತೆಗಿಳಿದು ಕಾರ್ಯನಿರ್ವಹಿಸಲಿವೆ ಎಂದು ತಿಳಿಸಿದರು. ಅನವಶ್ಯಕ ಪಾರ್ಕಿಂಗ್ ವಾಹನಗಳಿಂದ ಉಂಟಾಗುತ್ತಿದ್ದ ಕಿರಿಕಿರಿಯನ್ನು, ರಸ್ತೆಗಳಲ್ಲಿನ ಅಡೆತಡೆಗಳನ್ನು ನಿವಾರಿಸಿ ಸುಗಮ ಸಂಚಾರಕ್ಕೆ ಟೋಯಿಂಗ್ ವಾಹನಗಳು ಸಹಕಾರಿಯಾಗಲಿವೆ ಎಂದು ತಿಳಿಸುತ್ತಾ, ವಾಹನ ಸವಾರರು ಎಲ್ಲೆಂದರಲ್ಲಿ ವಾಹನಗಳನ್ನು ನಿಲ್ಲಿಸದಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಈ ವೇಳೆ ಮುಖ್ಯ ಇಂಜಿನಿಯರ್ ಆದ ಕೆ.ವಿ. ರವಿ ಹಾಗೂ ಟ್ರಾಫಿಕ್ ಇಂಜಿನಿಯರಿಂಗ್ ಮೊಬಿಲಿಟಿ ಸೆಲ್‌ನ ಕಾರ್ಯನಿರ್ವಾಹಕ ಇಂಜಿನಿಯರ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ವಿಶೇಷ ರೈಲು ಸೇವೆ ಮತ್ತೆ ವಿಸ್ತರಣೆ

ಬೆಂಗಳೂರು

ಬೇಸಿಗೆ ರಜೆ ಅವಧಿಯಲ್ಲಿ ಪ್ರಯಾಣಿಕರ ಹೆಚ್ಚಿದ ದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು, ಪ್ರಯಾಣಿಕರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಎಸ್‌ಎಸ್‌ಎಸ್ ಹುಬ್ಬಳ್ಳಿ ಹಾಗೂ ಪಶ್ಚಿಮ ಬಂಗಾಳದ ಅಲಿಪುರ್ ದ್ವಾರ್ ನಿಲ್ದಾಣಗಳ ನಡುವೆ ಸಂಚರಿಸುವ ವಿಶೇಷ ಎಕ್ಸ್‌ಪ್ರೆಸ್ ರೈಲು ಈಗ ಹೆಚ್ಚುವರಿಯಾಗಿ ಒಂದು ಟ್ರಿಪ್ ವಿಸ್ತರಣೆ ಮಾಡಲಾಗಿದೆ. ಈ ವಿಶೇಷ ರೈಲು ಬೆಂಗಳೂರು ಎಸ್‌ಎಂವಿಟಿ ಹಾಗೂ ಯಲಹಂಕ ಮಾರ್ಗವಾಗಿ ಸಂಚರಿಸಲಿದೆ.

ರೈಲು ಸಂಖ್ಯೆ 07323 ಎಸ್‌ಎಸ್‌ಎಸ್ ಹುಬ್ಬಳ್ಳಿ ಅಲಿಪುರ್ ದ್ವಾರ್ ವಿಶೇಷ ಎಕ್ಸ್‌ಪ್ರೆಸ್ 2026ರ ಏಪ್ರಿಲ್ 22ರ ಬುಧವಾರ ರಾತ್ರಿ 11:15ಕ್ಕೆ ಹುಬ್ಬಳ್ಳಿಯಿಂದ ಹೊರಟು, ಶನಿವಾರ ಮಧ್ಯಾಹ್ನ 01:50ಕ್ಕೆ ಅಲಿಪುರ್ ದ್ವಾರ್ ತಲುಪಲಿದೆ. ಮರು ಪ್ರಯಾಣದಲ್ಲಿ ರೈಲು ಸಂಖ್ಯೆ 07324 ಅಲಿಪುರ್ ದ್ವಾರ್ ಹುಬ್ಬಳ್ಳಿ ವಿಶೇಷ ಎಕ್ಸ್‌ಪ್ರೆಸ್ ಏಪ್ರಿಲ್ 26ರ ಭಾನುವಾರ ಸಂಜೆ 04:25ಕ್ಕೆ ಅಲಿಪುರ್ ದ್ವಾರ್‌ನಿಂದ ಹೊರಟು, ಬುಧವಾರ ಬೆಳಗ್ಗೆ 09:45ಕ್ಕೆ ಹುಬ್ಬಳ್ಳಿ ನಿಲ್ದಾಣ ತಲುಪಲಿದೆ. ಪ್ರಯಾಣಿಕರು ಈ ವಿಶೇಷ ರೈಲು ಸೇವೆಯನ್ನು ಬಳಸಿಕೊಂಡು ತಮ್ಮ ಪ್ರಯಾಣವನ್ನು ಮುಂಚಿತವಾಗಿ ಯೋಜಿಸಿಕೊಳ್ಳುವಂತೆ ತಿಳಿಸಲಾಗಿದೆ.

# ಸುರಕ್ಷತೆ, ಸ್ವಚ್ಛತೆ ಬಗ್ಗೆ ಜಾಗೃತಿ

ಹುಬ್ಬಳ್ಳಿ



ಶ್ರೀ ಸಿದ್ಧಾರೂಢ ಸ್ವಾಮೀಜಿ ಹುಬ್ಬಳ್ಳಿ ರೈಲು ನಿಲ್ದಾಣ ನಲ್ಲಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಬೇಲಾ ಮೀನಾ ಅವರ ನೇತೃತ್ವದಲ್ಲಿ ಶುಕ್ರವಾರ “ಫೋರ್ಟ್ರೆಸ್ ಚೆಕ್” ವಿಶೇಷ ಪರಿಶೀಲನಾ ಕಾರ್ಯಾಚರಣೆ ನಡೆಯಿತು.

ಈ ಕಾರ್ಯಾಚರಣೆಯಲ್ಲಿ ಪ್ರಯಾಣಿಕರಿಗೆ ಪ್ಲಾಟ್‌ಫಾರ್ಮ್ ಟಿಕೆಟ್ ಪಡೆದು ನಿಲ್ದಾಣ ಪ್ರವೇಶಿಸುವುದು, ಮಾನ್ಯ ಟಿಕೆಟ್ ಅಥವಾ ಪಾಸ್ ಹೊಂದಿ ಪ್ರಯಾಣಿಸುವುದು, ಪ್ರಯಾಣಿಕರ ಸೌಲಭ್ಯಗಳನ್ನು ಸರಿಯಾಗಿ ಬಳಸುವುದು, ಸುರಕ್ಷತೆ ಕಾಪಾಡುವುದು ಹಾಗೂ ನಿಲ್ದಾಣ ಪರಿಸರವನ್ನು ಸ್ವಚ್ಛವಾಗಿಡುವ ಕುರಿತು ಜಾಗೃತಿ ಮೂಡಿಸಲಾಯಿತು. ಅನಧಿಕೃತ ಪ್ರಯಾಣವನ್ನು ತಡೆಯುವತ್ತ ವಿಶೇಷ ಗಮನ ಹರಿಸಲಾಯಿತು.

ಪ್ಯಾಂಟ್ರಿ ಕಾರ್ ಸಿಬ್ಬಂದಿಗೆ ಸ್ವಚ್ಛತೆ ಮತ್ತು ಸೇವಾ ಗುಣಮಟ್ಟವನ್ನು ಕಾಪಾಡುವಂತೆ ಸಲಹೆ ನೀಡಲಾಯಿತು.

ಪರಿಶೀಲನೆ ವೇಳೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದು, ಕಾರ್ಯಾಚರಣೆಯ ಮೇಲ್ವಿಚಾರಣೆ ನಡೆಸಿದರು. ಟಿಕೆಟ್ ಪರಿಶೀಲನಾ ಸಿಬ್ಬಂದಿ, ಸ್ಕೌಟ್ಸ್ & ಗೈಡ್ಸ್ ಹಾಗೂ ಆರ್‌ಪಿಎಫ್ ಸಿಬ್ಬಂದಿ ಸಕ್ರಿಯವಾಗಿ ಭಾಗವಹಿಸಿದರು.

# ಜಿಬಿಎ ವ್ಯಾಪ್ತಿಯಲ್ಲಿ 88ಲಕ್ಷ ಮತದಾರರು: ಮಹೇಶ್ವರ್‌ರಾವ್

ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಐದು ನಗರ ಪಾಲಿಕೆಗಳ ವಾರ್ಡ್‌ವಾರು ಮತದಾರರ ಪಟ್ಟಿಯಲ್ಲಿ ಒಟ್ಟು 88,95,361 ಮತದಾರರಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅವರು ತಿಳಿಸಿದರು.

ಜಿಬಿಎ ವ್ಯಾಪ್ತಿಯಲ್ಲಿ ಚುನಾವಣೆಗೆ ಸಂಬಂಧಿಸಿದಂತೆ ಇಂದು ಅಂತಿಮ ಮತದಾರರ ಪಟ್ಟಿಯನ್ನು ಬಿಡುಗಡೆ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾರ್ಚ್ 09 ರಂದು ಪರಿಷ್ಕೃತ ಕರಡು ಮತದಾರರ ಪಟ್ಟಿಯನ್ನು ಬಿಡುಗಡೆಗೊಳಿಸಲಾಗಿತ್ತು. ಅದರಲ್ಲಿದ್ದ ಲೋಪದೋಷಗಳನ್ನು ಸರಿಪಡಿಸಿ, ಮಾರ್ಪಾಡುಗಳು ಮಾಡಿ ಇಂದು ಅಂತಿಮ ಮತದಾರರ ಪಟ್ಟಿಯನ್ನು ಬಿಡುಗಡೆ ಮಾಡಲಾಗುತ್ತಿದೆ ಎಂದು ಹೇಳಿದರು.



ಜಿಬಿಎ ವ್ಯಾಪ್ತಿಯಲ್ಲಿ ಬೆಂಗಳೂರು ಕೇಂದ್ರ, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಪೂರ್ವ ಮತ್ತು ಬೆಂಗಳೂರು ಪಶ್ಚಿಮ ನಗರ ಪಾಲಿಕೆಗಳು ಸೇರಿದಂತೆ ಒಟ್ಟು 05 ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ 369 ವಾರ್ಡಗಳು ರಚನೆಯಾಗಿದೆ. ಜಿಬಿಎ ನಗರ ಪಾಲಿಕೆಗಳ ಚುನಾವಣೆಗೆ ಸಂಬಂಧಿಸಿದಂತೆ ಪರಿಷ್ಕೃತ ಕರಡು ಮತದಾರರ ಪಟ್ಟಿಯಲ್ಲಿ 45,71,169 ಪುರುಷರು, 43,22,557 ಮಹಿಳೆಯರು ಹಾಗೂ 1,635 ಇತರೆ ಮತದಾರರು ಸೇರಿದಂತೆ, ಒಟ್ಟು 88,95,361 ಮತದಾರರು ಇದ್ದು, 8,023 ಮತಕಟ್ಟೆಗಳು ಬರಲಿವೆ ಎಂದು ವಿವರಿಸಿದರು.

ಜಿಬಿಎ ವ್ಯಾಪ್ತಿಯಲ್ಲಿ ಒಟು 369 ವಾರ್ಡ್ ಗಳ ಪೈಕಿ ಬೆಂಗಳೂರು ದಕ್ಷಿಣ ನಗರಪಾಲಿಕೆಯ ವಾರ್ಡ್ ಸಂಖ್ಯೆ 51–ಸುಬ್ರಮಣ್ಯ ಪುರ ಅತಿ ಹೆಚ್ಚು 53,660 ಮತದಾರರನ್ನು ಹೊಂದಿರುತ್ತದೆ. ಬೆಂಗಳೂರು ಪೂರ್ವ ನಗರಪಾಲಿಕೆಯ ವಾರ್ಡ್ ಸಂಖ್ಯೆ 24–ವಿಜ್ಞಾನನಗರ ದಲ್ಲಿ ಅತಿ ಕಡಿಮೆ 12,897 ಮತದಾರರನ್ನು ಹೊಂದಿರುತ್ತದೆ. ಅಂತಿಮ ಮತದಾರರ ಪಟ್ಟಿಯಲ್ಲಿ 2,833 ಮತದಾರರು ಹೆಚ್ಚಾಗಿದ್ದಾರೆ.

## ಸೋಮಶೇಖರ್ ನೇಮಕ

ಬೆಂಗಳೂರು

ಬ್ರಿಟನ್ ಮತ್ತು ಯುರೋಪಿಯನ್ ಯೂನಿಯನ್‌ನಲ್ಲಿ ಸಂಸತ್ತಿನ ಪ್ರಕ್ರಿಯೆಗಳ ಕುರಿತು ವಿಶೇಷ ತರಬೇತಿಯನ್ನು ಪಡೆದಿದ್ದಾರೆ. ಜೊತೆಗೆ ಜಿನೀವಾದಲ್ಲಿ ನಡೆದ ಇಂಟರ್–ಪಾರ್ಲಿಮೆಂಟರಿ ಯೂನಿಯನ್ ಸಭೆಗಳಲ್ಲಿ ಭಾಗವಹಿಸಿದ್ದಾರೆ.

ರಾಜ್ಯಸಭೆ ಕಾರ್ಯದರ್ಶಿ ಹುದ್ದೆಗೆ ಏರಿರುವುದರಿಂದ ಕೋಲಾರ ಜಿಲ್ಲೆ ಹಾಗೂ ಕರ್ನಾಟಕದ ಕೀರ್ತಿ ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಕೋಲಾರ ಜಿಲ್ಲಾ ಜನಪರ ವೇದಿಕೆಯ ಸಂಚಾಲಕರಾದ ಶ್ರೀನಿವಾಸಪುರ ರಮೇಶ್ ಬಾಬು ಹಾಗೂ ಗೂಳಿಗಾನಹಳ್ಳಿ ನಾಗರಾಜ್ ಅವರು ಅಭಿನಂದನೆಗಳನ್ನು ತಿಳಿಸಿದ್ದಾರೆ.

# ಕಾಂಗ್ರೆಸ್ ಪಕ್ಷದಂತೆ ಡಿಎಂಕೆ ಇತಿಹಾಸ ದೊಡ್ಡದಿದೆ: ಡಿಸಿಎಂ ಡಿ.ಕೆ.ಶಿವಕುಮಾರ್

ಪೊನ್ನೇರಿ

“ಕಾಂಗ್ರೆಸ್ ಪಕ್ಷ ದೊಡ್ಡ ಇತಿಹಾಸ ಹೊಂದಿರುವಂತೆ ತಮಿಳುನಾಡಿನಲ್ಲಿ ಡಿಎಂಕೆ ಪಕ್ಷ ಕೂಡ ದೊಡ್ಡ ಇತಿಹಾಸ ಹೊಂದಿದೆ” ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ತಮಿಳುನಾಡಿನ ಪೊನ್ನೇರಿಯಲ್ಲಿ ನಡೆದ ಸಾರ್ವಜನಿಕ ಸಮಾವೇಶದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿದರು.

“ಮುಂದಿನ ಒಂದು ವಾರದಲ್ಲಿ ತಮಿಳುನಾಡಿನ ವಿಧಾನಸಭೆ ಚುನಾವಣೆ ಮುಕ್ತಾಯಗೊಳ್ಳಲಿದೆ. ಇಡೀ ದೇಶ ನಿಮ್ಮ ತೀರ್ಪಿಗಾಗಿ ಎದುರುನೋಡುತ್ತಿದೆ ಎಂದು ಹೇಳಬಯಸುತ್ತೇನೆ. ನಾನು ಇಂದು ಕಾಂಗ್ರೆಸ್ ಪಕ್ಷದ ಪರವಾಗಿ ಬಂದಿದ್ದು, ಕಾಂಗ್ರೆಸ್ ಇತಿಹಾಸ ದೇಶದ ಇತಿಹಾಸ, ಕಾಂಗ್ರೆಸ್ ಶಕ್ತಿ ದೇಶದ ಶಕ್ತಿ, ಕಾಂಗ್ರೆಸ್ ಹಾಗೂ ಅದರ ಮೈತ್ರಿ ಪಕ್ಷಗಳು ಅಧಿಕಾರಕ್ಕೆ ಬಂದಾಗೆಲ್ಲ ಸಮಾಜದ ಎಲ್ಲಾ ವರ್ಗದ ಜನ ಅಧಿಕಾರಕ್ಕೆ ಬಂದಂತೆ” ಎಂದು ತಿಳಿಸಿದರು.

“ಡಿಎಂಕೆ ತಮಿಳುನಾಡಿನ ಸಂಸ್ಕೃತಿ, ಭಾವನೆ ಕಾಪಾಡಿಕೊಂಡು ಬಂದಿದೆ. ಕಾಂಗ್ರೆಸ್ ಹಾಗೂ ಡಿಎಂಕೆ ನಡುವೆ 40 ವರ್ಷಗಳ ಐತಿಹಾಸಿಕ ಮೈತ್ರಿ ಹೊಂದಿದ್ದು, ಈ ಮೈತ್ರಿ ದೇಶ



ಶನಿವಾರ ಬೆಂಗಳೂರಿನಲ್ಲಿ ಡಿ.ಕೆ.ಶಿವಕುಮಾರ್ ಅವರು ಆರ್‌ಸಿಬಿ ಪಂದ್ಯ ವೀಕ್ಷಿಸಿದರು

ಹಾಗೂ ತಮಿಳುನಾಡನ್ನು ಮುನ್ನಡೆಸಿಕೊಂಡು ಹೋಗುತ್ತಿದೆ. ಬ್ರಿಟೀಷರು ನೂರಾರು ವರ್ಷಗಳ ಕಾಲ ಈ ದೇಶವನ್ನು ಆಳಿದರು. ನಾವು ನಮ್ಮ ಮಕ್ಕಳನ್ನು ಶಾಲೆಗೆ ಸೇರಿಸುವಾಗ ಮಾತೃಭಾಷೆ ಯಾವುದು ಎಂದು ನಮೂದಿಸುತ್ತೇವೆ. ನಾನು ಕರ್ನಾಟಕದವನಾಗಿದ್ದು ನನ್ನ ಮಾತೃಭಾಷೆ ಕನ್ನಡ, ಇದು ತಮಿಳುನಾಡು ನಿಮ್ಮ ಮಾತೃಭಾಷೆ ತಮಿಳು, ಕೇರಳಿಗರ ಮಾತೃಭಾಷೆ ಮಲಯಾಳಂ, ಆಂಧ್ರಪ್ರದೇಶದವರದ್ದು ತೆಲುಗು, ಮಹಾರಾಷ್ಟ್ರದವರದ್ದು ಮರಾಠಿ. ಬ್ರಿಟೀಷರ ಕಾಲದಿಂದಲೂ ಮಾತೃಭಾಷೆಗೆ ಗೌರವ ನೀಡುತ್ತಾ ಬಂದಿದ್ದೇವೆ” ಎಂದು ತಿಳಿಸಿದರು.

“ಬಿಜೆಪಿ ಹಾಗೂ ಎನ್ ಡಿಎ ಸರ್ಕಾರ ನೀವು ನಿಮ್ಮ ಮಾತೃಭಾಷೆ ಮರೆತು ಹಿಂದಿ ಭಾಷೆ ಕಲಿಯಬೇಕು ಎಂದು ಒತ್ತಡ ಹೇರುತ್ತಿದೆ. ನಮ್ಮ ಮಾತೃಭಾಷೆಗೆ ಆಗುವ ಅಗೌರವವನ್ನು ನಾವು ಸಹಿಸುವುದಿಲ್ಲ. ಹೀಗಾಗಿ ಸ್ಟಾಲಿನ ಹಾಗೂ ದಕ್ಷಿಣ ಭಾರತದ ರಾಜ್ಯಗಳ ನಾಯಕರೆಲ್ಲರೂ ಒಟ್ಟಾಗಿ ಹೋರಾಟ ಮಾಡುತ್ತಿದ್ದೇವೆ” ಎಂದು ತಿಳಿಸಿದರು.

“ಕಳೆದ ಹತ್ತು ದಿನಗಳಿಂದ ತಮಿಳುನಾಡಿನಲ್ಲಿ ನಾನು ಚುನಾವಣಾ ಪ್ರಚಾರ ಮಾಡುತ್ತಿದ್ದು, ನಮ್ಮ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದ್ದೇನೆ. ಸ್ಟಾಲಿನ ಅವರ ನೇತೃತ್ವದ ಡಿಎಂಕೆ ಹಾಗೂ ಮೈತ್ರಿ ಪಕ್ಷಗಳ ಸರ್ಕಾರ ಜನಸಾಮಾನ್ಯರ ಹಕ್ಕು, ತಮಿಳುನಾಡಿನ ಹಿತವನ್ನು ರಕ್ಷಣೆ ಮಾಡಿಕೊಂಡು ಬಂದಿದೆ” ಎಂದು ತಿಳಿಸಿದರು.

“ನಿನ್ನೆ ಕೇಂದ್ರ ಸರ್ಕಾರ ಸಂಸತ್ತಿನಲ್ಲಿ ಮಹಿಳಾ ಮೀಸಲಾತಿ ವಿಧೇಯಕವನ್ನು ಮಂಡನೆ ಮಾಡಿತ್ತು. ಮಹಿಳಾ ಮೀಸಲಾತಿಗೆ ನಾವೆಲ್ಲರೂ ಬೆಂಬಲ ನೀಡುತ್ತೇವೆ. ಆದರೆ ಕ್ಷೇತ್ರ ಪುನರ್ ವಿಂಗಡಣೆ ಹೆಸರಿನಲ್ಲಿ ಕರ್ನಾಟಕ, ತಮಿಳುನಾಡು ಸೇರಿದಂತೆ ದಕ್ಷಿಣ ಭಾರತದ ರಾಜ್ಯಗಳ ಕ್ಷೇತ್ರಗಳನ್ನು ಕಡಿಮೆ ಮಾಡುವ ಷಡ್ಯಂತ್ರವನ್ನು ನಾವು ವಿರೋಧಿಸುತ್ತೇವೆ. ಕೇಂದ್ರ ಸರ್ಕಾರದ ಈ ನೀತಿ ವಿರುದ್ಧ ಸ್ಟಾಲಿನ್ ಅವರು ಧ್ವನಿ ಎತ್ತಿದ್ದು, ಇಡಿಯಾ ಮೈತ್ರಿಕೂಟದ ಎಲ್ಲಾ ನಾಯಕರು ಸೇರಿ ಈ ಮಸೂದೆಯನ್ನು ಮಣಿಸಿದ್ದೇವೆ. ಇದು ಪ್ರಜಾಪ್ರಭುತ್ವದ ಗೆಲುವಾಗಿದ್ದು, ಇದಕ್ಕಾಗಿ ಹೋರಾಟ ಮಾಡಿದ ತಮಿಳುನಾಡಿನ ಸಂಸದರಿಗೆ ನಾನು ಅಭಿನಂದಿಸುತ್ತೇನೆ” ಎಂದರು.

“ಈ ದೇಶದ ಭವಿಷ್ಯ ಇಂಡಿಯಾ ಮೈತ್ರಿಕೂಟದ ಜತೆಗಿದೆ. ತಮಿಳುನಾಡಿನ ಭವಿಷ್ಯ ನಿಮ್ಮ ಕೈಯಲ್ಲಿದೆ. ಸ್ಟಾಲಿನ್ ಅವರ ನಾಯಕತ್ವದಲ್ಲಿ ತಮಿಳುನಾಡಿನ ಜನರ ಹಿತವನ್ನು ಕಾಪಾಡಲಾಗುವುದು. ಎನ್ಡಿಎ ಹಾಗೂ ಎಐಎಡಿಎಂಕೆ ದುರಾಡಳಿತದಿಂದ ತಮಿಳುನಾಡನ್ನು ರಕ್ಷಣೆ ಮಾಡಿ ಈ ರಾಜ್ಯವನ್ನು ಸಮೃದ್ಧವಾಗಿ ಮುನ್ನಡೆಸಲಾಗುತ್ತಿದೆ. ತಮಿಳುನಾಡು ಈಗ ಪ್ರಗತಿಯ ಹಾದಿಯಲ್ಲಿ ಸಾಗುತ್ತಿದ್ದು, ನೀವೆಲ್ಲರೂ ಸ್ಟಾಲಿನ್ ಅವರನ್ನು ಮತ್ತೆ ಈ ರಾಜ್ಯದ ಮುಖ್ಯಮಂತ್ರಿಯನ್ನಾಗಿ ಮರುಆಯ್ಕೆ ಮಾಡಬೇಕು” ಎಂದು ಕರೆ ನೀಡಿದರು.

“ದೇಶವನ್ನು ಒಗ್ಗೂಡಿಸುವ ಭಾರತ ಜೋಡೋ ಯಾತ್ರೆಯನ್ನು ಮೊದಲು ಉದ್ಘಾಟನೆ ಮಾಡಿದ್ದು ಸ್ಟಾಲಿನ್ ಅವರು. ನಮ್ಮ ಸಹೋದರ ರಾಹುಲ್ ಗಾಂಧಿ ಮುಂದಿನ ಪ್ರಧಾನಮಂತ್ರಿಯಾಗಬೇಕು ಎಂದು ಹೇಳಿದ್ದರು. ಕಾಂಗ್ರೆಸ್ ಪಕ್ಷಕ್ಕೆ ಬೆಂಬಲವಾಗಿ ನಿಂತಿರುವ ಸ್ಟಾಲಿನ್ ಅವರಿಗೆ ಕಾಂಗ್ರೆಸ್ ಪಕ್ಷದ ಪರವಾಗಿ ಧನ್ಯವಾದ ತಿಳಿಸುತ್ತೇನೆ” ಎಂದರು.

# ರೈಲು ಮಾರ್ಗದಲ್ಲಿ ಬದಲಾವಣೆ

ಬೆಂಗಳೂರು

ಅಹಮದಾಬಾದ್ ರೈಲು ನಿಲ್ದಾಣದಲ್ಲಿ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ, ಮೈಸೂರು ಮತ್ತು ಜೋಧ್‌ಪುರ ನಡುವೆ ಸಂಚರಿಸುವ ವಿಶೇಷ ಎಕ್ಸ್‌ಪ್ರೆಸ್ ರೈಲುಗಳ ಮಾರ್ಗವನ್ನು ತಾತ್ಕಾಲಿಕವಾಗಿ ಬದಲಾವಣೆ ಮಾಡಲಾಗಿದೆ.

ರೈಲು ಸಂಖ್ಯೆ 06273 ಮೈಸೂರು ಜೋಧ್‌ಪುರ ವಿಶೇಷ ರೈಲು ದಿನಾಂಕ 20.04.2026 ಮತ್ತು 27.04.2026 ರಂದು ಮೈಸೂರಿನಿಂದ ಹೊರಡುವ ಈ ರೈಲು ವಡೋದರಾ, ರತ್ಲಾಮ್ ಮತ್ತು ಅಜ್ಮೀರ್ ಮಾರ್ಗವಾಗಿ ಜೋಧ್‌ಪುರ ತಲುಪಲಿದೆ. ರೈಲು ಸಂಖ್ಯೆ 06274 ಜೋಧ್‌ಪುರ ಮೈಸೂರು ವಿಶೇಷ ರೈಲು ದಿನಾಂಕ 23.04.2026 ಮತ್ತು 30.04.2026 ರಂದು ಜೋಧ್‌ಪುರದಿಂದ ಹೊರಡುವ ಈ ರೈಲು ಅಜ್ಮೀರ್, ರತ್ಲಾಮ್ ಮತ್ತು ವಡೋದರಾ ಮಾರ್ಗವಾಗಿ ಮೈಸೂರಿಗೆ ಬರಲಿದೆ.

21/04/2026

ಭಾರತ ಸಾರಥಿ
BHARATHA SARATHI KANNADA DAILY NEWS PAPER

ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ ।
ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ನ್ಯಾಯಾಂಗ ವ್ಯವಸ್ಥೆಯ ಮರುರೂಪಣೆಯ ಅಗತ್ಯತೆ ಒತ್ತಿ ಹೇಳಿದ ಸಿಎಂ ಸಿದ್ದು

ಬೆಂಗಳೂರು

ಕೃತಕ ಬುದ್ಧಿಮತ್ತೆಯ ಯುಗದಲ್ಲಿ ನ್ಯಾಯಾಂಗ ವ್ಯವಸ್ಥೆಯ ಮರುರೂಪಣೆಯ ಅಗತ್ಯತೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತಿಹೇಳಿದರು.

ಬೆಂಗಳೂರಿನ ಜಿಕೆವಿಕೆಯ ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಭಾಂಗಣದಲ್ಲಿ ನಡೆದ ನ್ಯಾಯಾಂಗ ಅಧಿಕಾರಿಗಳ 22ನೇ ದ್ವೈವಾರ್ಷಿಕ ರಾಜ್ಯಮಟ್ಟದ ಸಮ್ಮೇಳನದಲ್ಲಿ ಮಾತನಾಡಿದ ಅವರು, ಇಂದಿನ ಕಾಲಘಟ್ಟದಲ್ಲಿ ಕಾನೂನು ಮತ್ತು ತಂತ್ರಜ್ಞಾನ ಪ್ರತ್ಯೇಕ ಕ್ಷೇತ್ರಗಳಾಗಿಲ್ಲ; ಅವು ಪರಸ್ಪರ ಸಂಬಂಧ ಹೊಂದಿದ ಶಕ್ತಿಗಳಾಗಿ ರೂಪಾಂತರಗೊಂಡಿವೆ ಎಂದು ಹೇಳಿದರು.

ಕೃತಕ ಬುದ್ಧಿಮತ್ತೆ ನಮ್ಮ ನ್ಯಾಯಾಂಗ ವ್ಯವಸ್ಥೆಯಲ್ಲಿ ಪುರಾವೆಗಳ ಅರ್ಥೈಸುವಿಕೆ, ಸತ್ಯದ ಪರಿಶೀಲನೆ ಮತ್ತು ತೀರ್ಮಾನ ಪ್ರಕ್ರಿಯೆಯನ್ನೇ ಮರುನಿರ್ಮಾಣಗೊಳಿಸುವ ಪರಿವರ್ತನಾ ಶಕ್ತಿಯಾಗಿ ಹೊರಹೊಮ್ಮುತ್ತಿದೆ. ಇದರ ನೆರವಿನಿಂದ ತ್ವರಿತ ಕಾನೂನು ಸಂಶೋಧನೆ, ಸುಧಾರಿತ ಪ್ರಕರಣ ನಿರ್ವಹಣೆ ಮತ್ತು ಬಾಕಿ ಇರುವ ಪ್ರಕರಣಗಳ ಇಳಿಕೆ ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.




ಆದರೆ, ಎಐಬಳಕೆಯೊಂದಿಗೆ ಹಲವಾರು ಗಂಭೀರ ಸವಾಲುಗಳೂ ಎದುರಾಗುತ್ತವೆ ಎಂದು ಎಚ್ಚರಿಸಿದರು. ಅಲ್ಗಾರಿದಮಿಕ್ ಪಕ್ಷಪಾತವು ಕಾನೂನಿನ ಮುಂದೆ ಸಮಾನತೆಯನ್ನು ಹಾಳುಮಾಡುವ ಅಪಾಯವಿದೆ. ಅಪಾರದರ್ಶಕ ತಾಂತ್ರಿಕ ವ್ಯವಸ್ಥೆಗಳು ನ್ಯಾಯಾಂಗದ ತಾರ್ಕಿಕ ನಿರ್ಧಾರಗಳ ಸಿದ್ಧಾಂತವನ್ನು ದುರ್ಬಲಗೊಳಿಸಬಹುದೆಂದು ಹೇಳಿದರು.

ನ್ಯಾಯಾಂಗ ಸ್ವಾತಂತ್ರ್ಯವನ್ನು ಕೇವಲ ಬಾಹ್ಯ ಒತ್ತಡಗಳಿಂದ ಮಾತ್ರವಲ್ಲದೆ ತಾಂತ್ರಿಕ ಅವಲಂಬನೆಯಿಂದಲೂ ರಕ್ಷಿಸುವ ಹೊಣೆಗಾರಿಕೆ ನಮ್ಮ ಮೇಲಿದೆ ಎಂದು ತಿಳಿಸಿದರು. ನ್ಯಾಯಾಧೀಶರ ಅಧಿಕಾರವನ್ನು ಯಾವುದೇ ಅಲ್ಗಾರಿದಮ್ ಮೀರಬಾರದು ಎಂದು ಅವರು ಸ್ಪಷ್ಟಪಡಿಸಿದರು.

ಸಾಂವಿಧಾನಿಕ ನೈತಿಕತೆಯ ಮಹತ್ವವನ್ನು ಉಲ್ಲೇಖಿಸಿದ ಅವರು, ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿಂತನೆಗಳನ್ನು ಸ್ಮರಿಸಿದರು. ಸಾಂವಿಧಾನಿಕ ಮೌಲ್ಯಗಳು ತಾಂತ್ರಿಕ ಅಭಿವೃದ್ಧಿಗೆ ಮಾರ್ಗದರ್ಶನ ನೀಡಬೇಕು ಹೊರತು ಅದಕ್ಕೆ ಪರ್ಯಾಯವಾಗಬಾರದು ಎಂದು ಹೇಳಿದರು.

ಡೀಪ್‌ಫೇಕ್‌ಗಳು ಮತ್ತು ಸಂಶ್ಲೇಷಿತ ಡೇಟಾ ಹೊಸ ತಾಂತ್ರಿಕ ಸವಾಲುಗಳು ಪುರಾವೆಗಳ ವಿಶ್ವಾಸಾರ್ಹತೆಯನ್ನು ಪ್ರಶ್ನಿಸುತ್ತಿವೆ. ಈ ಹಿನ್ನೆಲೆಯಲ್ಲಿ, ಸತ್ಯದ ಪರಿಶೀಲನೆ ಮತ್ತು ಸಮಗ್ರತೆ ನ್ಯಾಯಾಂಗದ ಪ್ರಮುಖ ಕರ್ತವ್ಯವಾಗುತ್ತದೆ ಎಂದು ಹೇಳಿದರು.

ಭಾರತದಲ್ಲಿ ಎಐನಿಯಂತ್ರಣ ಚೌಕಟ್ಟನ್ನು ರೂಪಿಸುವಲ್ಲಿ ನ್ಯಾಯಾಂಗವು ಪ್ರಮುಖ ಪಾತ್ರ ವಹಿಸಬೇಕು. ಗೌಪ್ಯತೆ, ಸಮಾನತೆ ಮತ್ತು ಸರಿಯಾದ ಪ್ರಕ್ರಿಯೆಯಂತಹ ಸಾಂವಿಧಾನಿಕ ಸಿದ್ಧಾಂತಗಳ ಆಧಾರದ ಮೇಲೆ ತಂತ್ರಜ್ಞಾನವನ್ನು ಬಳಸಬೇಕು ಎಂದು ಅಭಿಪ್ರಾಯಪಟ್ಟರು.

ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ದೃಷ್ಟಿಯಿಂದ ಎಐವ್ಯವಸ್ಥೆಗಳು ಸರಿಯಾಗಿ ವಿನ್ಯಾಸಗೊಳ್ಳದಿದ್ದರೆ ಅಸ್ತಿತ್ವದಲ್ಲಿರುವ ಅಸಮಾನತೆಗಳನ್ನು ಮತ್ತಷ್ಟು ಗಾಢಗೊಳಿಸುವ ಅಪಾಯವಿದೆ ಎಂದು ಎಚ್ಚರಿಸಿದರು. ಜಾತಿ, ವರ್ಗ ಮತ್ತು ಪ್ರವೇಶದ ಅಸಮಾನತೆಗಳನ್ನು ಡಿಜಿಟಲ್ ಮಟ್ಟದಲ್ಲೂ ಪುನರಾವರ್ತಿಸುವ ಸಾಧ್ಯತೆ ಇದೆ ಎಂದು ಹೇಳಿದರು.

ನ್ಯಾಯಾಂಗದಲ್ಲಿ ಬಾಕಿ ಪ್ರಕರಣಗಳ ಸಮಸ್ಯೆ ಗಂಭೀರವಾಗಿದೆ. ತಂತ್ರಜ್ಞಾನವು ಇದಕ್ಕೆ ಪರಿಹಾರ ನೀಡಬಹುದಾದರೂ, ಮೂಲಸೌಕರ್ಯ ಬಲಪಡಿಸುವುದು, ನ್ಯಾಯಾಧೀಶರ ನೇಮಕಾತಿ ಮತ್ತು ಆಧುನಿಕ ನ್ಯಾಯಾಲಯ ವ್ಯವಸ್ಥೆಗಳನ್ನು ಜಾರಿಗೆ ತರುವುದು ಅಗತ್ಯವಾಗಿದೆ ಎಂದು ತಿಳಿಸಿದರು.

ದಕ್ಷಿಣ ಭಾರತದಲ್ಲಿ ಸುಪ್ರೀಂ ಕೋರ್ಟ್ ಪೀಠ ಸ್ಥಾಪನೆ ಅಗತ್ಯವಿದೆ ಎಂದು ಪುನರುಚ್ಚರಿಸಿದ ಅವರು, ಇದರಿಂದ ನ್ಯಾಯಕ್ಕೆ ಸುಲಭ ಪ್ರವೇಶ ಸಾಧ್ಯವಾಗುತ್ತದೆ ಎಂದು ಹೇಳಿದರು.

ಕರ್ನಾಟಕ ಸರ್ಕಾರ ನ್ಯಾಯಾಂಗ ಮೂಲಸೌಕರ್ಯ, ಡಿಜಿಟಲ್ ಪರಿವರ್ತನೆ, ಹೆಚ್ಚುವರಿ ನ್ಯಾಯಾಲಯಗಳ ಸ್ಥಾಪನೆ, ಸ್ಥಳೀಯ ಭಾಷೆಗಳಲ್ಲಿ ತೀರ್ಪು ನೀಡುವ ವ್ಯವಸ್ಥೆ ಸೇರಿದಂತೆ ಹಲವು ಸುಧಾರಣೆಗಳಿಗೆ ಬದ್ಧವಾಗಿದೆ ಎಂದು ಹೇಳಿದರು.

ನ್ಯಾಯವು ಕೇವಲ ವ್ಯವಸ್ಥೆಯಲ್ಲ, ಅದು ನೈತಿಕ ಜವಾಬ್ದಾರಿ. ಯಾವುದೇ ತಂತ್ರಜ್ಞಾನ ಮಾನವೀಯತೆಯನ್ನು ಬದಲಾಯಿಸಲಾರದು. ಎಐನೆರವಾಗಬಹುದು, ಆದರೆ ನ್ಯಾಯದ ಹೃದಯವಾದ ಮಾನವ ಆತ್ಮಸಾಕ್ಷಿಯನ್ನು ಬದಲಾಯಿಸಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು

## ಮಹಿಳಾ ಮೀಸಲು ಮಸೂದೆ ಸೋಲು; ಕಾಂಗ್ರೆಸ್ ವಿರುದ್ಧ ಜೆಡಿಎಸ್ ಪ್ರತಿಭಟನೆ




ಬೆಂಗಳೂರು

ಲೋಕಸಭೆ ಮತ್ತು ರಾಜ್ಯಗಳ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಶೇ.33ರಷ್ಟು ಮೀಸಲಾತಿ ನೀಡುವ ವಿಧೇಯಕಕ್ಕೆ ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳ ಷಡ್ಯಂತ್ರ್ಯದಿಂದ ಲೋಕಸಭೆಯಲ್ಲಿ ಲೋಕಸಭೆಯಲ್ಲಿ ಸೋಲಾಗಿದ್ದನ್ನು ಖಂಡಿಸಿ ಜೆಡಿಎಸ್ ಮಹಿಳಾ ಘಟಕ ನಗರದ ಫ್ರೀಡಂ ಪಾರ್ಕ್ ನಲ್ಲಿ ಬೃಹತ್ ಪ್ರತಿಭಟನೆ ನಡೆಸಿತು.

ಪಕ್ಷದ ಶಾಸಕರು, ವಿಧಾನಪರಿಷತ್ ಸದಸ್ಯರು ಸೇರಿದಂತೆ ಅನೇಕ ಮುಖಂಡರು ಭಾಗಿಯಾಗಿದ್ದ ಈ ಪ್ರತಿಭಟನೆಯಲ್ಲಿ ಜೆಡಿಎಸ್ ಕಾರ್ಯಕರ್ತೆಯರು ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕಾಂಗ್ರೆಸ್ ಮಿತ್ರಪಕ್ಷಗಳ ವಿರುದ್ಧ ಘೋಷಣೆಗಳನ್ನು ಕೂಗಿದರು.

ಪ್ರತಿಭಟನೆ ನೇತೃತ್ವ ವಹಿಸಿ ಮಾತನಾಡಿದ ಮಾಜಿ ಸಚಿವೆ ಲೀಲಾದೇವಿ ಆರ್ ಪ್ರಸಾದ್ ಅವರು; 1996ರಲ್ಲಿ ಶಾಸನಸಭೆಗಳಲ್ಲಿ ಮಹಿಳೆಯರಿಗೆ ನ್ಯಾಯೋಚಿತ ಮೀಸಲಾತಿ ನೀಡುವ ಉದ್ದೇಶದಿಂದ ಸಂಸತ್ತಿನಲ್ಲಿ ಮಹಿಳಾ ಮೀಸಲು ವಿಧೇಯಕವನ್ನು ಮಂಡಿಸಿದ್ದರು. ಅಂದು ಕೂಡ ಕಾಂಗ್ರೆಸ್ ಮತ್ತು ಸಂಯುಕ್ತ ರಂಗದ ಕೆಲ ಮಿತ್ರಪಕ್ಷಗಳ ಕುಯುಕ್ತಿಯಿಂದ ಆ ಮಸೂದೆಗೆ ಸೋಲಾಯಿತು. ಮತ್ತೆ ಅದೇ ಇತಿಹಾಸ ಮರುಕಳಿದ್ದು, ರಾಷ್ಟ್ರದ ಮಹಿಳೆಯರಿಗೆ ಕಾಂಗ್ರೆಸ್ ಮೋಸ ಮಾಡಿದೆ ಎಂದು ಟೀಕಿಸಿದರು.

ಕಾಂಗ್ರೆಸ್ ಹಿಂದಿನಿಂದಲೂ ಮಹಿಳಾ ವಿರೋಧಿ ನೀತಿಯನ್ನೇ ಅನುಸರಿಸಿಕೊಂಡು ಬರುತ್ತಿದೆ ಎಂದು ದೂರಿದ ಅವರು, ಮಹಿಳಾ ಮೀಸಲು ಮಸೂದೆ ಸೋಲಿಗೆ ಕಾರಣರಾದ ಕಾಂಗ್ರೆಸ್ಸಿಗರನ್ನು ರಾಷ್ಟ್ರದ ಮಹಿಳೆಯರು ಶಾಶ್ವತವಾಗಿ ಮನೆಯಲ್ಲಿ ಕೂರಿಸುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಹೆಚ್.ಎಂ. ರಮೇಶ್ ಗೌಡ, ಮಾಜಿ ಶಾಸಕ ಕೆ.ಎ. ತಿಪ್ಪೇಸ್ವಾಮಿ, ವಿಧಾನ ಪರಿಷತ್ ಸದಸ್ಯ ಟಿ.ಎ. ಶರವಣ, ನಗರ ಜೆಡಿಎಸ್ ಮಹಿಳಾ ಘಟಕದ ಅಧ್ಯಕ್ಷೆ ಶೈಲಜಾ ರಾವ್ ಸೇರಿದಂತೆ ಅನೇಕ ನಾಯಕರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

ಈ ಸಂದರ್ಭದಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ರಮೇಶ್ ಗೌಡ, ಶರವಣ ಮೊದಲಾದವರು; ಮಹಿಳೆಯರ ಭವಿಷ್ಯಕ್ಕೆ ಕಾಂಗ್ರೆಸ್ ಪಕ್ಷ ಹಾಗೂ ಅದರ ಮಿತ್ರಪಕ್ಷಗಳು ಧಕ್ಕೆ ಉಂಟು ಮಾಡಿವೆ. ಮಸೂದೆಯನ್ನು ಲೋಕಸಭೆಯಲ್ಲಿ ಅಂಗೀಕರಿಸಿ ಅನುಷ್ಠಾನ ಮಾಡಿದ್ದಿದ್ದರೆ ರಾಷ್ಟ್ರದಲ್ಲಿ ಇತಿಹಾಸ ಸೃಷ್ಟಿ ಆಗುತ್ತಿತ್ತು. ಕಾಂಗ್ರೆಸ್ ಪಕ್ಷ ಒಂದು ಸುವರ್ಣಾವಕಾಶವನ್ನು ಕೈಚೆಲ್ಲಿದೆ ಎಂದು ಕಿಡಿಕಾರಿದರು.

ಬೆಂಗಳೂರು ಉತ್ತರ ಜಿಲ್ಲಾ ಮಹಿಳಾ ಅಧ್ಯಕ್ಷೆ ಕವಿತಾ ರೆಡ್ಡಿ, ಪಶ್ಚಿಮ ಜಿಲ್ಲಾ ಅಧ್ಯಕ್ಷೆ ಮಂಗಳಮ್ಮ, ಮುಖಂಡರುಗಳಾದ ಮಲ್ಲೇಶ್ವರಿ, ಕವಿತಾ, ಅನುರಾಧ, ಜಯಲಕ್ಷ್ಮಿ ಕಾರ್ತಿಕ್, ವಿಜಯಲಕ್ಷ್ಮಿಹಾಗೂ ಇನ್ನಿತರ ಮಹಿಳಾ ಮುಖಂಡರು ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಕಾರ್ಯಕರ್ತೆಯರು ಭಾಗವಹಿಸಿದ್ದರು. ಈ ಮಹಿಳಾ ಪ್ರತಿಭಟನೆಗೆ ಶಾಸಕರು, ಮಾಜಿ ಶಾಸಕರು, ಜಿಬಿಎ ಜಿಲ್ಲಾಧ್ಯಕ್ಷರುಗಳು ಹಾಗೂ ಗ್ರೇಟರ್ ಬೆಂಗಳೂರು ಪದಾಧಿಕಾರಿಗಳು, ವಿಧಾನಸಭಾ ಕ್ಷೇತ್ರ ಅಧ್ಯಕ್ಷರುಗಳು ಸಹಕಾರ ನೀಡಿದರು.

## ‘ಎಐ ಅಳವಡಿಕೆಯಿಂದ ನ್ಯಾಯ ನಿರ್ಣಯ ಯಾಂತ್ರಿಕವಾಗಬಾರದು’

ಬೆಂಗಳೂರು

ಕೃತಕಬುದ್ಧಿಮತ್ತೆ ಸೇರಿದಂತೆ ಯಾವುದೇ ಆಧುನಿಕ ತಂತ್ರಜ್ಞಾನದ ಅಳವಡಿಕೆಗೆ ನ್ಯಾಯಾಂಗ ವ್ಯವಸ್ಥೆಯು ಹೊರತಾಗಿರಲು ಸಾಧ್ಯವಿಲ್ಲ. ಆದರೆ, ಈ ತಾಂತ್ರಿಕತೆಗಳು ನ್ಯಾಯನಿರ್ಣಯ ಪ್ರಕ್ರಿಯೆಯನ್ನು ಯಾಂತ್ರಿಕವಾಗಿಸಲು ಆಸ್ಪದ ನೀಡಬಾರದು ಎಂದು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಅವರು ಅಭಿಪ್ರಾಯಪಟ್ಟರು.

ಜಿಕೆವಿಕೆಯ ಆವರಣದಲ್ಲಿರು ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರ ರಾಷ್ಟ್ರೀಯ ಸಂಭಾಗಣದಲ್ಲಿ ಕರ್ನಾಟಕ ರಾಜ್ಯ ನ್ಯಾಯಾಂಗ ಅಧಿಕಾರಿಗಳ ಸಂಘವು (ಕೆಜೆಒಎ) ಆಯೋಜಿಸಿದ್ದ 22ನೇ ದ್ವೈವಾರ್ಷಿಕ ಸಮ್ಮೇಳನವನ್ನು ಉದ್ಘಾಟಿಸಿ ‘ಕೃತಕ ಬುದ್ಧಿಮತ್ತೆ ಯುಗದಲ್ಲಿ ನ್ಯಾಯಾಂಗದ ಮರುಕಲ್ಪನೆ’ ಎಂಬ ವಿಷಯ ಕುರಿತು ಮಾತನಾಡಿ, ನ್ಯಾಯಾಂಗ ವ್ಯವಸ್ಥೆಯಲ್ಲಿ ಎಐ ಅಳವಡಿಕೆಯು ಅನುಕೂಲಗಳೊಂದಿಗೆ ಗಂಭೀರ ಸವಾಲುಗಳನ್ನು ಕೂಡ ಒಡ್ಡಿದೆ. ಎಐ ತಾಂತ್ರಿಕತೆಯಿಂದಾಗಿ ನಕಲಿ ಸೈಟೇಷನ್ ಗಳು (ಉಲ್ಲೇಖಿತ ಪ್ರಕರಣಗಳು) ಕೂಡ ಕಾಣಿಸಿಕೊಳ್ಳುತ್ತಿವೆ. ಹೀಗಾಗಿ, ಎಐ ಮೂಲಕ ಲಭ್ಯವಾಗುವ ಮಾಹಿತಿಯನ್ನು ದೃಢೀಕರಿಸಿಕೊಳ್ಳಬೇಕಾದ ಜವಾಬ್ದಾರಿ ಹೆಚ್ಚಿದೆ ಎಂದರು.



ಪ್ರಸ್ತುತ, ನ್ಯಾಯಾಂಗ ವ್ಯವಸ್ಥೆಯಲ್ಲಿ ಎಐ ಅಳವಡಿಕೆಯು ತೀವ್ರ ಚರ್ಚಿತ ವಿಷಯವಾಗಿದೆ. ಈ ವ್ಯವಸ್ಥೆಯಲ್ಲಿ ಎಐ ಅನ್ನು ದತ್ತಾಂಶ ಪರಿಶೀಲನೆ, ಪ್ರಕರಣಗಳ ವಿಚಾರಣೆಗೆ ದಿನಾಂಕ ನಿಗದಿ (ಲಿಸ್ಟಿಂಗ್), ಪುನರಾವರ್ತಿತ ಕೆಲಸಗಳ ನಿರ್ವಹಣೆ ಸೇರಿದಂತೆ ಇತ್ಯಾದಿ ದೈನಂದಿನ ಕಾರ್ಯಗಳಿಗೆ ಬಳಸಿಕೊಂಡು ನ್ಯಾಯ ವಿತರಣೆ ಪ್ರಕ್ರಿಯೆಯನ್ನು ತ್ವರಿತಗೊಳಿಸುವುದು ಮುಖ್ಯ ಗುರಿಯಾಗಬೇಕು.

ನ್ಯಾಯ ನಿರ್ಣಯದಲ್ಲಿ ಸಹಾನುಭೂತಿ, ಅನುಭವಗಳ ಆಧಾರದಲ್ಲಿ ವಿಶ್ಲೇಷಣೆ, ಮೌಲ್ಯ ಪ್ರಜ್ಞೆ, ಸಾಂವಿಧಾನಿಕ ಆಶಯಗಳು ಪ್ರಧಾನ ಅಂಶಗಳಾಗಿದ್ದು, ಇವುಗಳ ಜಾಗವನ್ನು ಯಾವುದೇ ತಾಂತ್ರಿಕತೆಯು ತುಂಬಲಾರದು. ಹೀಗಾಗಿ, ನ್ಯಾಯಾಧೀಶರ ಗ್ರಹಿಕೆ, ವಿಶ್ಲೇಷಣೆ, ತರ್ಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಸನ್ನಿವೇಶಗಳ ಅವಲೋಕನ ಇವುಗಳು ನ್ಯಾಯ ನಿರ್ಣಯದ ಬೆನ್ನೆಲುಬಾಗಿರಬೇಕು ಎಂದರು.

ನಮ್ಮ ಸಮಾಜದಲ್ಲಿ ಜನ-ಸಾಮಾನ್ಯರು ಮೊದಲಿಗೆ ನ್ಯಾಯಾಂಗ ವ್ಯವಸ್ಥೆಯೊಂದಿಗೆ ಸಂಪರ್ಕಕ್ಕೆ ಬರುವುದು ವಿಚಾರಣಾ ನ್ಯಾಯಲಯಗಳ ಮೂಲಕವೇ ಆಗಿದ್ದು, ಅನೇಕರು ನಂತರದ ಹಂತದ ಕೋರ್ಟ್ ಗಳೊಂದಿಗೆ ಸಂಪರ್ಕಕ್ಕೆ ಬರುವುದೇ ಇಲ್ಲ. ಹೀಗಾಗಿ, ಜನರಿಗೆ ಸಂವಿಧಾನದ ಆಶಯಗಳ ರಕ್ಷಣೆಯ ಬಗ್ಗೆ ವಿಚಾರಣಾ ನ್ಯಾಯಾಲಯದ ಹಂತದಲ್ಲೇ ವಿಶ್ವಾಸ ಮೂಡಬೇಕು. ವ್ಯವಸ್ಥೆ ಬಗೆಗಿನ ನಂಬಿಕೆಯು ಬಲಗೊಳ್ಳುವುದು ಅಥವಾ ಶಿಥಿಲವಾಗುವುದು ಟ್ರಯಲ್ ಕೋರ್ಟ್ ಹಂತವನ್ನೇ ಅವಲಂಬಿಸಿರುತ್ತದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ, ಪ್ರಸಕ್ತ ಕಾಲಘಟ್ಟದಲ್ಲಿ ಕಾನೂನು ಮತ್ತು ತಂತ್ರಜ್ಞಾನವು ಪ್ರತ್ಯೇಕ ಕ್ಷೇತ್ರಗಳಾಗಿ ಉಳಿದಿಲ್ಲ. ಈಗ ಮುಂದುವರೆದು ನ್ಯಾಯಾಂಗ ಕ್ಷೇತ್ರಕ್ಕೆ ಕೃತಕ ಬುದ್ಧಿಮತ್ತೆಯ ಪ್ರವೇಶವಾಗಿದೆ.

ಅದರಿಂದಾಗಿ ಆಡಳಿತ, ಹಕ್ಕುಗಳು ಮತ್ತು ನ್ಯಾಯದ ಸ್ವರೂಪವನ್ನು ರೂಪಿಸುವ ಪರಸ್ಪರ ಸಂಬಂಧ ಹೊಂದಿರುವ ಶಕ್ತಿಗಳ ನಡುವೆ ನಿರ್ಣಾಯಕ ಹಂತದಲ್ಲಿ ನಾವು ನಿಂತಿದ್ದೇವೆ ಎಂದರು.

ನಾವು ಪುರಾವೆಗಳನ್ನು ಹೇಗೆ ಅರ್ಥೈಸಿಕೊಳ್ಳುತ್ತೇವೆ, ಸತ್ಯಗಳನ್ನು ಹೇಗೆ ಅರ್ಥಮಾಡಿಕೊಳ್ಳುತ್ತೇವೆ ಮತ್ತು ನಿರ್ಧಾರಗಳನ್ನು ಹೇಗೆ ತಲುಪುತ್ತೇವೆ ಎಂಬುದನ್ನು ಪ್ರಶ್ನಿಸುವ ಪರಿವರ್ತನಾ ಶಕ್ತಿಯಾಗಿ ಕೃತಕ ಬುದ್ಧಿಮತ್ತೆ ಹೊರಹೊಮ್ಮುತ್ತಿದೆ. ಕೃತಕ ಬುದ್ಧಿಮತ್ತೆಯ ಸಹಾಯದಿಂದ ತ್ವರಿತ ಕಾನೂನು ಸಂಶೋಧನೆ, ಪ್ರಕರಣಗಳ ಇತ್ಯರ್ಥಕ್ಕೆ ಸಂಬಂಧಿಸಿದಂತೆ ಸುಧಾರಿತ ನಿರ್ವಹಣೆ ವ್ಯವಸ್ಥೆಗಳ ಮೂಲಕ ಬಾಕಿ ಇರುವ ಪ್ರಕರಣಗಳನ್ನು ಕಡಿಮೆ ಮಾಡುವ ಸಾಧ್ಯತೆ ಇದೆ ಎಂದು ತಿಳಿಸಿದರು.

## ಬೆಂಗಳೂರಿಗೆ ಬಂದ ಹೊಸ ಅತಿಥಿಗಳು



ಬೆಂಗಳೂರು

ಬನ್ನೇರುಘಟ್ಟ ಮೃಗಾಲಯಕ್ಕೆ ದಕ್ಷಿಣ ಆಫ್ರಿಕಾದಿಂದ ತರಿಸಿಕೊಂಡ 4 ಶಿವಂಗಿ (ಚೀತಾ)ಗಳನ್ನು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅವರು ಮಧ್ಯರಾತ್ರಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು.

ಕಲ್ಬುರ್ಗಿಯಲ್ಲಿ ಕಾರ್ಯಕ್ರಮ ಮುಗಿಸಿಕೊಂಡು ಹೈದ್ರಾಬಾದ್ ಮಾರ್ಗವಾಗಿ ಮಧ್ಯರಾತ್ರಿ ಬೆಂಗಳೂರಿಗೆ ಆಗಮಿಸಿದ ಅರಣ್ಯ ಸಚಿವರು, ಅಲ್ಲಿಂದ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಸರಕು ಸಾಗಣೆ ವಿಭಾಗಕ್ಕೆ ತೆರಳಿ ಬನ್ನೇರುಘಟ್ಟ ಮೃಗಾಲಯಕ್ಕೆ ಆಗಮಿಸಿರುವ ಈ ವಿದೇಶೀ ಅತಿಥಿಗಳನ್ನು ಬರಮಾಡಿಕೊಂಡರು.

ದಕ್ಷಿಣ ಆಫ್ರಿಕಾದಿಂದ ಬೆಂಗಳೂರಿಗೆ ಆಗಮಿಸಿರುವ ಈ ಚೀತಾಗಳಿಗೆ ವಾತಾವರಣ, ಹವಾಮಾನ ಬದಲಾವಣೆಯಾಗುವ ಕಾರಣ ಅವುಗಳಿಗೆ ಯಾವುದೇ ತೊಂದರೆ ಆಗದಂತೆ, ಆರೋಗ್ಯ ಸಮಸ್ಯೆ ಎದುರಾಗದ ರೀತಿಯಲ್ಲಿ ಸೂಕ್ತ ನಿಗಾ ಇಡಬೇಕು, ವನ್ಯಜೀವಿಗಳನ್ನು ಕ್ವಾರಂಟೈನಲ್ಲಿಡಬೇಕು, 30ದಿನಗಳ ಕಾಲ ಗೊತ್ತುಪಡಿಸಿದ ಆಹಾರ ನೀಡಬೇಕು, ಈ ವಿದೇಶಿ ವನ್ಯಜೀವಿಗಳಿಗೆ ಸೋಂಕು ಏನಾದರೂ ಇದೆಯೇ ಎಂದು ಪರಿಶೀಲಿಸಬೇಕು. ಪ್ರಾಣಿಗಳನ್ನು ಸುರಕ್ಷಿತವಾಗಿ ಬನ್ನೇರುಘಟ್ಟಕ್ಕೆ ಸಾಗಿಸಬೇಕು ಎಂದು ಅಧಿಕಾರಿಗಳಿಗೆ ಮತ್ತು ಪಶುವೈದ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ಒಂದು ಕಾಲದಲ್ಲಿ ಕರ್ನಾಟಕದ ಕಾಡುಗಳಲ್ಲಿಯೇ ಸಿವಂಗಿ ಎಂದು ಕರೆಸಿಕೊಳ್ಳುವ ಚೀತಾಗಳಿದ್ದವು. ಆದರೆ ರಾಜ್ಯದ ಕಾಡಿನಲ್ಲಿ ಇವು ನಾಮಾವಶೇಷ ಆಗಿವೆ. ಹೀಗಾಗಿ ಮೃಗಾಲಯಗಳಲ್ಲಾದರೂ ಇವುಗಳನ್ನು ನೋಡಲು ಅವಕಾಶ ಆಗಬೇಕು. ಈ ನಿಟ್ಟಿನಲ್ಲಿ ಅವುಗಳ ಸುರಕ್ಷತೆಗೆ ಆದ್ಯ ಗಮನ ನೀಡುವಂತೆ ಕರ್ನಾಟಕ ಮೃಗಾಲಯ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸುನೀಲ್ ಪನ್ವಾರ್ ಅವರಿಗೆ ಸೂಚನೆ ನೀಡಿದರು.

## ‘ವಿಶ್ವಕ್ಕೆ ಶಾಂತಿದೊರಕುವ ಧರ್ಮಾಚರಣೆ ಇಂದಿನ ಅಗತ್ಯ’

ಚಿಕ್ಕಮಗಳೂರು

ದ್ವೇಷ, ಅಸೂಯೆಗಳಿಲ್ಲದ, ವೈಚಾರಿಕ, ವೈಜ್ಞಾನಿಕ ಹಾಗೂ ಸಹಬಾಳ್ವೆಯ ತಳಹದಿಯಲ್ಲಿ ಸುಂದರ ಸಮಾಜ ನಿರ್ಮಾಣ ಮಾಡುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಕರೆ ನೀಡಿದ್ದಾರೆ.

ಚಿಕ್ಕಮಗಳೂರಿನ ಎ.ಐ.ಟಿ. ಕಾಲೇಜು ಹಿಂಭಾಗದಲ್ಲಿ ನಿರ್ಮಾಣವಾಗಿರುವ ವೀರಶೈವ ಲಿಂಗಾಯತ ಸಮುದಾಯ ಭವನ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ರೇಣುಕಾದಿ ಆಚಾರ್ಯರು ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂದು ಸಾರಿದರೆ, ದಯೆಯೇ ಧರ್ಮದ ಮೂಲವೆಂದು ಬಸವಾದಿ ಪ್ರಮಥರು ಪ್ರತಿಪಾದಿಸಿದರು ಇಂದು ನಾವು ವಿಶ್ವಕ್ಕೆ ಶಾಂತಿ ಸಿಗುವಂತಹ ಧರ್ಮಾಚರಣೆ ಮಾಡಬೇಕು ಎಂದರು.

ಅಸಮಾನತೆ, ಜಾತಿಯತೆ, ಕಂದಾಚಾರ, ಅಸ್ಪೃಶ್ಯತೆ ಇಲ್ಲದ, ಮೌಢ್ಯರಹಿತ, ಲಿಂಗರಹಿತ, ಶ್ರೇಣಿರಹಿತ ಸಮ ಸಮಾಜ ನಿರ್ಮಾಣಕ್ಕೆ 12ನೇ ಶತಮಾನದಲ್ಲೇ ಶರಣರು ನಾಂದಿ ಹಾಡಿದರು. ಇಡೀ ಜಗತ್ತಿಗೆ ಸಾಮಾಜಿಕ ನ್ಯಾಯ ನೀಡಿದ ಸಮುದಾಯ ವೀರಶೈವ ಲಿಂಗಾಯತ ಸಮುದಾಯ. ಇಂತಹ ಭವ್ಯ ಪರಂಪರೆಯ ಸಮುದಾಯದ ನಮ್ಮ ಮಠಮಾನ್ಯಗಳು, ಧಾರ್ಮಿಕ, ಆಧ್ಯಾತ್ಮಿಕ ವಿಚಾರಗಳ ಪ್ರಸಾರದ ಜೊತೆಗೆ ಸಮಾಜ ಸೇವೆಯಲ್ಲೂ ತಮ್ಮನ್ನು ತೊಡಗಿಸಿಕೊಂಡು, ಎಲ್ಲ, ಜಾತಿ, ಧರ್ಮದವರಿಗೆ ಆಶ್ರಯ, ಅನ್ನ, ಅಕ್ಷರ ಮತ್ತು ಉತ್ತಮ ಸಂಸ್ಕಾರ ನೀಡುವ ಅದ್ಭುತ ಕಾರ್ಯ ಮಾಡಿವೆ ಎಂದರು.



ನಮ್ಮ ಸಮುದಾಯದ ಎಲ್ಲ ಜಗದ್ಗುರುಗಳು, ಪೀಠಾಧಿಪತಿಗಳು ಸಮಾಜಕ್ಕೆ ಬೆಳಕು ನೀಡಿದ್ದಾರೆ. ಆ ಬೆಳಕಲ್ಲಿ ನಾವು ದ್ವೇಷ, ಅಸೂಯೆ, ಅಸಹನೆಯನ್ನು ಬದಿಗಿಟ್ಟು ಒಂದಾಗಿ ಮುನ್ನಡೆಯಬೇಕು. ಅದಕ್ಕಾಗಿಯೇ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಎಲ್ಲ ಉಪ ಪಂಗಡಗಳನ್ನೂ ಒಗ್ಗೂಡಿಸುವ ಕಾರ್ಯ ಮಾಡುತ್ತಿದೆ. ಹಾನಗಲ್ಲ ಕುಮಾರೇಶ್ವರರು ಒಂದು ಶತಮಾನದ ಹಿಂದೆ ಸ್ಥಾಪಿಸಿದ ಇಂತಹ ಭವ್ಯ ಸಭಾಕ್ಕೆ ನನ್ನನ್ನು ಅವಿರೋಧವಾಗಿ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದು, ತಾವು ಎಲ್ಲರಿಗೂ ಧನ್ಯವಾದ, ಕೃತಜ್ಞತೆ ಅರ್ಪಿಸುವುದಾಗಿ ಈಶ್ವರ ಖಂಡ್ರೆ ಹೇಳಿದರು.

ಸಮಾಜದ ಎದುರು ದೊಡ್ಡ ಸವಾಲಿದೆ. ಸಂಘಟನೆಯಲ್ಲಿ ಬಲವಿದೆ. ವಿಘಟನೆಯಲ್ಲಿ ದೌರ್ಬಲ್ಯವಿದೆ. ನಾವು ನಮ್ಮ ಧರ್ಮವನ್ನು ಪಾಲಿಸಿದಾಗ, ರಕ್ಷಿಸಿದಾಗ ಮಾತ್ರ ಇತರ ಎಲ್ಲರನ್ನೂ ಒಟ್ಟಿಗೆ ತೆಗೆದುಕೊಂಡು ಹೋಗಲು ಸಾಧ್ಯ ಎಂದರು.

ಸಮಾಜದ ಎಲ್ಲರೂ ಅನುಭವ ಮಂಟಪ ನೋಡಲು ಬರಬೇಕು. ಇಲ್ಲಿ ವೈಜ್ಞಾನಿಕವಾಗಿ ಹೇಗೆ ಇಷ್ಟಲಿಂಗ ಪೂಜೆ ಮಾಡಬೇಕು ಎಂಬುದನ್ನು ಕಲಿಸಲಾಗುತ್ತದೆ. ಯುವಜನರು ಇಂದು ದಾರಿ ತಪ್ಪುತ್ತಿದ್ದು, ದುಶ್ಚಟಗಳ ದಾಸರಾಗುತ್ತಿದ್ದಾರೆ. ಇಂದಿನ ಪೀಳಿಗೆ ಅನುಭವ ಮಂಟಪಕ್ಕೆ ಬಂದರೆ ಅವರಲ್ಲಿ ನವ ಚೈತನ್ಯ ಮೂಡುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಶಾಸಕರುಗಳಾದ ರಾಜೇಗೌಡ, ತಮ್ಮಯ್ಯ, ಸಿ.ಟಿ. ರವಿ ಮತ್ತಿತರರು ಪಾಲ್ಗೊಂಡಿದ್ದರು.

## ಕೆಆರ್‌ಎಸ್‌ನಲ್ಲಿ ನೀರಿನ ಮಟ್ಟ ಕುಸಿತ

ಮಂಡ್ಯ

ಬೇಸಿಗೆ ಆರಂಭದಲ್ಲೇ ಕೆಆರ್‌ಎಸ್ ನೀರಿನ ಮಟ್ಟ 99 ಅಡಿಗೆ ಕುಸಿದಿದೆ.

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕೆಆರ್‌ಎಸ್ ಜಲಾಶಯದಲ್ಲಿ ಬೇಸಿಗೆ ಆರಂಭದಲ್ಲೇ ನೀರಿನ ಮಟ್ಟ ಇಳಿಕೆ ಕಂಡಿದೆ. ಒಂದು ವೇಳೆ ಮುಂಗಾರು ತಡವಾದ್ರೆ ಬೆಂಗಳೂರು ಮಾತ್ರವಲ್ಲದೇ ಕಾವೇರಿ ನೀರು ಅವಲಂಬಿಸಿರುವ ಜನರಿಗೆ ನೀರಿನ ಸಮಸ್ಯೆ ಎದುರಾಗುವ ಭೀತಿಯಿದೆ.

ಈ ವರ್ಷ ಕೆಆರ್‌ಎಸ್ ಅಣೆಕಟ್ಟೆ ಅವಧಿಗೂ ಮುನ್ನವೇ ಭರ್ತಿಯಾಗುವ ಮೂಲಕ ದಾಖಲೆ ಬರೆದಿತ್ತು. ಇದೀಗ 124.80 ಗರಿಷ್ಠ ಮಟ್ಟ ಸಂಗ್ರಹ ಸಾಮರ್ಥ್ಯದಲ್ಲಿ ನೀರಿನ ಮಟ್ಟ 99 ಅಡಿಗೆ ತಲುಪಿದೆ.

## ರಾಜ್ಯದ ಮೊದಲ ಧನ್ವಂತರಿ ದೇವಾಲಯದ ದಶಮಾನೋತ್ಸವ

ಮುಳಬಾಗಿಲು

ನಗರದ ಅಗ್ರಹಾರದಲ್ಲಿರುವ ಧನ್ವಂತ್ರಿ ದೇವಾಲಯ ದಶಮಾನೋತ್ಸವವು ಏಪ್ರಿಲ್ 20ರ ಸೋಮವಾರ ನಡೆಯಲಿದ್ದು, ಭಕ್ತರಲ್ಲಿ ಉತ್ಸಾಹ ಹೆಚ್ಚಾಗಿದೆ.

ಕರ್ನಾಟಕದ ಮೊದಲ ಧನ್ವಂತ್ರಿ ದೇವಾಲಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಈ ದೇಗುಲವನ್ನು ಕೋಲಾರ ತಾಲೂಕು ತಂಬಿಹಳ್ಳಿ ಮೂಲದ ಶ್ರೀಮನ್ ಮಾಧವತೀರ್ಥ ಮೂಲ ಮಹಾಸಂಸ್ಥಾನದ ಹಿಂದಿನ ಪೀಠಾಧಿಪತಿಗಳಾದ ಶ್ರೀ ವಿದ್ಯಾಸಾಗರ ಮಾಧವ ತೀರ್ಥ ಸ್ವಾಮೀಜಿ ಅವರು ಸುಮಾರು ಒಂದು ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿದ್ದರು. ಹತ್ತು ವರ್ಷಗಳ ಹಿಂದೆ ಅಕ್ಷಯ ತೃತೀಯ ದಿನ ಶ್ರೀ ಧನ್ವಂತ್ರಿ ದೇವರ ಪ್ರತಿಷ್ಠಾಪನೆ ನೆರವೇರಿಸಲಾಗಿತ್ತು.




ಸುಮಾರು 800 ವರ್ಷಗಳ ಇತಿಹಾಸ ಹೊಂದಿರುವ ಶ್ರೀಮಠವು, ಆರೋಗ್ಯ ರಕ್ಷಕ ದೇವತೆಯಾದ ಶ್ರೀ ಧನ್ವಂತ್ರಿಯ ದರ್ಶನದಿಂದ ಭಕ್ತರಿಗೆ ಆರೋಗ್ಯ ಭಾಗ್ಯ ಲಭಿಸಬೇಕು ಎಂಬ ಉದ್ದೇಶದಿಂದ ಕರ್ನಾಟಕದಲ್ಲೇ ಮೊದಲ ಬಾರಿಗೆ ಈ ದೇವಾಲಯವನ್ನು ನಿರ್ಮಿಸಿದೆ. ಶ್ರೀ ಮಠದ ಪರಂಪರಾ ಯತಿಗಳಾದ ಶ್ರೀ ಪ್ರಾಜ್ಞ ಮಾಧವತೀರ್ಥರು ಹಾಗೂ ಶ್ರೀ ಧೀರ ಮಾಧವತೀರ್ಥರ ಬೃಂದಾವನಗಳಿರುವ ಪವಿತ್ರ ಸ್ಥಳದಲ್ಲೇ ದೇವಾಲಯ ನಿರ್ಮಿಸಿ, ಶ್ರೀ ಧನ್ವಂತ್ರಿ ಹಾಗೂ ಪ್ರಾಣದೇವರ ಪ್ರತಿಷ್ಠಾಪನೆ ಮಾಡಲಾಗಿದೆ.

ಆರೋಗ್ಯ ದೇವತೆಯಾದ ಶ್ರೀ ಧನ್ವಂತ್ರಿಯನ್ನು ಭಕ್ತಿ-ಶ್ರದ್ಧೆಯಿಂದ ಆರಾಧಿಸಿದರೆ ಮಾರಕ ಕಾಯಿಲೆಗಳು ನಿವಾರಣೆಯಾಗುತ್ತವೆ ಹಾಗೂ ಆರೋಗ್ಯ ಸೌಖ್ಯ ಸಿಗುತ್ತದೆ ಎಂಬ ಭಕ್ತರ ನಂಬಿಕೆ ಇದೆ. ಮಹಾವಿಷ್ಣುವಿನ ಅವತಾರವೆಂದು ಪರಿಗಣಿಸಲ್ಪಡುವ ಧನ್ವಂತ್ರಿ ದೇವರು, ಬಲಗೈಯಲ್ಲಿ ಜ್ಞಾನಮುದ್ರೆ ಮತ್ತು ಎಡಗೈಯಲ್ಲಿ ಅಮೃತ ಕಳಶ ಹಿಡಿದು ಪೂರ್ವಾಭಿಮುಖವಾಗಿ ವಿರಾಜಮಾನರಾಗಿದ್ದಾರೆ.



ಪ್ರತಿದಿನದ ಪೂಜೆಯ ಜೊತೆಗೆ ಪ್ರತಿ ವರ್ಷ ಧನ್ವಂತ್ರಿ ಜಯಂತಿ ಸಂದರ್ಭದಲ್ಲಿ ವಿಶೇಷ ಪೂಜೆ, ಹೋಮ-ಹವನಗಳನ್ನು ಶ್ರೀಮಠದಿಂದ ನೆರವೇರಿಸಲಾಗುತ್ತಿದೆ.

## ಯುಪಿಐ ಹಣ ಪಾವತಿಯಲ್ಲಿ ಬದಲಾವಣೆ

ನವದೆಹಲಿ

ಇನ್ಮುಂದೆ ಯುಪಿಐ ಮೂಲಕ 10,000 ರೂ.ಗಿಂತ ಹೆಚ್ಚಿನ ಹಣವನ್ನು ಪಾವತಿಸುವಾಗ ಹಣ ತಕ್ಷಣ ಕಡಿತವಾಗುವುದಿಲ್ಲ. ಬದಲಿಗೆ ಒಂದು ಗಂಟೆ ಬಳಿಕ ಕಡಿತವಾಗುವಂತೆ ಮಾಡಲು ಆರ್‌ಬಿಐ ಮುಂದಾಗಿದೆ.

ಡಿಜಿಟಲ್ ಪಾವತಿ ಅಕ್ರಮಗಳಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಭಾರತದ ಯುಪಿಐ ಪೇಮೆಂಟ್ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆಗೆ ಇದೀಗ ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಮುಂದಾಗಿದೆ. 10,000 ರೂ.ಗಿಂತ ಹೆಚ್ಚಿನ ಹಣವನ್ನು ಪಾವತಿಸುವಾಗ ತಕ್ಷಣ ದುಡ್ಡು ಕಡಿತವಾಗುವುದಿಲ್ಲ. ಬದಲಿಗೆ ಆ ಹಣವನ್ನು ಬ್ಯಾಂಕ್ ಒಂದು ಗಂಟೆಗಳ ಕಾಲ ಹಿಡಿದಿಟ್ಟುಕೊಳ್ಳುತ್ತದೆ.

ಆರ್‌ಬಿಐ ನಿಯಮದ ಪ್ರಕಾರ, 10 ಸಾವಿರ ರೂ.ಗಿಂತ ಹೆಚ್ಚಿನ ಹಣವನ್ನು ಯಾರ ಖಾತೆಗೆ ವರ್ಗಾಯಿಸಿರುತ್ತೀರೋ ಆ ಹಣ ತಕ್ಷಣ ಪಾವತಿ ಆಗುವುದಿಲ್ಲ ಅಥವಾ ಕಳಿಸಿದವರ ಖಾತೆ ಸೇರುವುದಿಲ್ಲ. ನೀವು ಕಳಿಸಿದ ಹಣವನ್ನು ಬ್ಯಾಂಕ್ ಒಂದು ಗಂಟೆ ಕಾಲ ಹಿಡಿದಿಟ್ಟುಕೊಳ್ಳುತ್ತದೆ. ಬಳಿಕ ಯಾರ ಖಾತೆ ಸೇರಬೇಕೋ ಆ ಖಾತೆಗೆ ಜಮೆಯಾಗುತ್ತದೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy